## ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



### ಫೆಬ್ರವರಿ ೪ನೇ ವಾರ

23-02-2026 TO 01-03-2026

# ಸೌದಿ ಅರೇಬಿಯಾದಿಂದ ತೈಲ ಆಮದು ಹೆಚ್ಚಳ

3.25 ಲಕ್ಷ ಕೋಟಿ ಜೈವಿಕ ಆರ್ಥಿಕತೆ

ವೇತನ ಪರಿಷ್ಕರಣೆಗೆ ಕೇಂದ್ರ ಒಪ್ಪಿಗೆ

ರಫ್ತು: ಫೋನ್ಗೆ ಅಗ್ರ ಸ್ಥಾನ

ಜಿಡಿಪಿ: ಶೇ 7.8ರಷ್ಟು ದಾಖಲು

## ❖ ಭಾರತ-ಅಮೆರಿಕ ಒಪ್ಪಂದ ಮಾತುಕತೆ ಮರುನಿಗದಿ

**ಸಂದರ್ಭ: ಮಧ್ಯಂತರ ವ್ಯಾಪಾರ ಒಪ್ಪಂದಕ್ಕೆ ಸಂಬಂಧಿಸಿದ ಪಠ್ಯವನ್ನು ಅಂತಿಮಗೊಳಿಸಲು ಸೋಮವಾರದಿಂದ ಆರಂಭವಾಗಬೇ-ಕಿದ್ದ ಮಾತುಕತೆಯನ್ನು ಭಾರತ ಮತ್ತು ಅಮೆರಿಕದ ಅಧಿಕಾರಿಗಳು ಮರುನಿಗದಿ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮಾತುಕತೆಯು ವಾಷಿಂಗ್ಟನ್ ನಲ್ಲಿ ಮೂರು ದಿನ ನಡೆಯಬೇಕಿತ್ತು.**

- ಕೇಂದ್ರ ಸರ್ಕಾರದ ವಾಣಿಜ್ಯ ಸಚಿವಾಲಯದ ಜಂಟಿ ಕಾರ್ಯದರ್ಶಿ ದರ್ಪಣ್ ಜೈನ್ ಅವರು ಭಾರತದ ತಂಡದ ನೇತೃತ್ವ ವಹಿಸಿದ್ದಾರೆ.
- 'ಈಚಿನ ಬೆಳವಣಿಗೆಗಳನ್ನು ಮತ್ತು ಅವುಗಳ ಪರಿಣಾಮವನ್ನು ಪರಿಶೀಲಿಸಲು ಎರಡೂ ಕಡೆಯವರಿಗೆ ಸಮಯ ಸಿಕ್ಕ ನಂತರದಲ್ಲಿ ಭಾರತದ ಅಧಿಕಾರಿಗಳ ತಂಡದ ಭೇಟಿಯನ್ನು ನಿಗದಿ ಮಾಡ ಬಹುದು ಎಂಬ ಅನಿಸಿಕೆಯನ್ನು ಎರಡೂ ದೇಶಗಳು ಅಧಿಕಾರಿಗಳು ಹೊಂದಿದ್ದಾರೆ. ಎರಡೂ ಕಡೆಯವರಿಗೆ ಹೊಂದಿಕೆ ಆಗುವ ಸಮಯದಲ್ಲಿ ಮಾತುಕತೆ ನಡೆಸಲಾಗುತ್ತದೆ' ಎಂದು ವಾಣಿಜ್ಯ ಸಚಿವಾಲಯದ ಮೂಲಗಳು ಹೇಳಿವೆ.
- ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ವಿದೇಶಗಳಿಂದ ಆಮದು ಆಗುವ ಸರಕುಗಳ ಮೇಲೆ ವಿಧಿಸಿದ್ದ ಸುಂಕವನ್ನು ಅಲ್ಲಿನ ಸುಪ್ರೀಂ ಕೋರ್ಟ್ ಅನೂರ್ಜಿತಗೊಳಿಸಿದೆ. ಇದಾದ ನಂತರ ಟ್ರಂಪ್ ಅವರು ಎಲ್ಲ ದೇಶಗಳ ಸರಕುಗಳ ಮೇಲೆ ಶೇ 10ರಷ್ಟು ಸುಂಕ ವಿಧಿಸಿದರು. ನಂತರ ಸುಂಕವನ್ನು ಶೇ 15ಕ್ಕೆ ಹೆಚ್ಚಳ ಮಾಡುವುದಾಗಿಯೂ ಅವರು ಪ್ರಕಟಿಸಿದ್ದಾರೆ.
- ಅಂತರರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರಗಳ ಕಾಯ್ದೆಯ ಅಡಿಯಲ್ಲಿ ಸುಂಕವನ್ನು ವಿಧಿಸಿದ ಟ್ರಂಪ್ ಅವರ ಕ್ರಮವು ಅಧಿಕಾರ ವ್ಯಾಪ್ತಿಯ ಉಲ್ಲಂಘನೆ ಎಂದು ಅಮೆರಿಕದ ಸುಪ್ರೀಂ ಕೋರ್ಟ್ ಬಹುಮತದ ತೀರ್ಪಿನಲ್ಲಿ ಹೇಳಿದೆ.
- ಅಮೆರಿಕವು ಭಾರತದ ಮೇಲೆ 2025ರ ಆಗಸ್ಟ್‌ನಲ್ಲಿ ಶೇ 25ರಷ್ಟು ಪ್ರತಿಸುಂಕ ಹೇರಿತು. ನಂತರ ರಷ್ಯಾದಿಂದ ಕಚ್ಚಾ ತೈಲ ಖರೀದಿಸುವ ಕಾರಣಕ್ಕೆ ಶೇ 25ರಷ್ಟು ಹೆಚ್ಚುವರಿ ಸುಂಕವನ್ನು ದಂಡದ ರೂಪದಲ್ಲಿ ವಿಧಿಸಿತ್ತು. ಇದ ರಿಂದಾಗಿ ಭಾರತದ ಸರಕುಗಳ ಮೇಲಿನ ಒಟ್ಟು ಸುಂಕವು ಶೇ 50ರಷ್ಟು ಆಗಿತ್ತು.
- ಆದರೆ, ಮಧ್ಯಂತರ ವ್ಯಾಪಾರ ಒಪ್ಪಂದವೊಂದಕ್ಕೆ ಅಂತಿಮ ರೂಪ ನೀಡಲು ಭಾರತ ಮತ್ತು ಅಮೆರಿಕ ಈ ತಿಂಗಳ ಆರಂಭದಲ್ಲಿ ಒಪ್ಪಿವೆ. ಇದರ ಅನ್ವಯ ಭಾರತದ ಸರಕುಗಳ ಮೇಲಿನ ಸುಂಕವು ಶೇ 18ಕ್ಕೆ ಇಳಿಕೆ ಆಗಲಿದೆ. ಈವರೆಗೆ ಅಮೆರಿಕವು ಭಾರತದ ಸರಕುಗಳ ಮೇಲಿನ ಶೇ 25ರಷ್ಟು ದಂಡ ಸುಂಕವನ್ನು ತೆಗೆದಿದೆ. ಶೇ 25ರಷ್ಟು ಪ್ರತಿಸುಂಕವು ಜಾರಿಯಲ್ಲಿ ಇದೆ.

Dr Rajkumar IAS/KAS Academy

# ತಾಮ್ರ ಗಣಿ ಪುನರಾರಂಭಕ್ಕೆ ಅಧ್ಯಯನ

## ಚಿನ್ನದ ಬೆಲೆ ಏರಿಕೆಯಿಂದ ತಾಮ್ರಕ್ಕೆ ಹೆಚ್ಚಿದೆ ಬೇಡಿಕೆ, ಮತ್ತೆ ಆರಂಭಗೊಳ್ಳುವುದೇ ಗಣಿ?

• ಎಂ.ಎನ್.ಯೋಗೇಶ್

**ಮುಖ್ಯಾಂಶಗಳು**

- ಇಂಗಳದಾಳು 1994ರವರೆಗೂ ವ್ಯಾಪಕ ತಾಮ್ರ ಗಣಿಗಾರಿಕೆ
- ಮತ್ತೆ ಗಣಿಗಾರಿಕೆಗೆ ನಡೆಸಲು ಯತ್ನ
- ಮೆಕಾನ್ ಇಂಡಿಯಾ ಕಂಪನಿ ತಜ್ಞರಿಂದ ಅಧ್ಯಯನ

ಚಿತ್ರದುರ್ಗ: ಚಿನ್ನದ ಬೆಲೆ ಗಗನಕ್ಕೇರಿರುವ ಹೊತ್ತಿನಲ್ಲಿ ಚಿನ್ನ ತಯಾರಿಕೆಗೆ ಪ್ರಮುಖ ಕಚ್ಚಾ ವಸ್ತುವಾಗಿರುವ ತಾಮ್ರಕ್ಕೆ ತೀವ್ರ ಬೇಡಿಕೆ ಸೃಷ್ಟಿಯಾಗಿದ್ದು, ನಗರದ ಹೊರವಲಯದಲ್ಲಿರುವ ಇಂಗಳದಾಳು ತಾಮ್ರ ಗಣಿಯಲ್ಲಿ ಗಣಿಗಾರಿಕೆ ಪುನಾರಂಭಿಸುವ ಸಂಬಂಧ ಕಾರ್ಯಸಾಧ್ಯತಾ ಪರೀಕ್ಷೆ ಆರಂಭಗೊಂಡಿದೆ.

ಇಂಗಳದಾಳು ಗುಡ್ಡದಲ್ಲಿ 1994ರವರೆಗೂ ವ್ಯಾಪಕ ತಾಮ್ರ ಗಣಿಗಾರಿಕೆ ನಡೆದಿತ್ತು. ತಾಮ್ರಕ್ಕೆ ಬೇಡಿಕೆ ಕಡಿಮೆಯಾದ ಕಾರಣ 1990ರ ದಶಕದಲ್ಲಿ ಗಣಿಗಾರಿಕೆ ಸ್ಥಗಿತಗೊಂಡಿತ್ತು. ಅದೇ ಗಣಿಯಲ್ಲಿ ಮತ್ತೆ ಗಣಿಗಾರಿಕೆ ಸಾಧ್ಯವೇ? ಎಂದು ಕೇಂದ್ರ ಸರ್ಕಾರಿ ಸ್ವಾಮ್ಯದ ಮೆಕಾನ್ ಇಂಡಿಯಾ ಕಂಪನಿ ತಜ್ಞರು ಅಧ್ಯಯನ ನಡೆಸಿದ್ದಾರೆ.


ಶಾತವಾಹನರ ಕಾಲದಲ್ಲೇ ಚಂದ್ರವಳ್ಳಿ ಪ್ರದೇಶದಲ್ಲಿ ತಾಮ್ರದ ನಾಣ್ಯ ಠಂಕಿಸಲಾಗುತ್ತಿತ್ತು. ಇಲ್ಲಿ ಚಿನ್ನ ಸಿಗುತ್ತಿದ್ದ ಕಾರಣ ಚಿನ್ನದ ಗಿರಿ ಎನ್ನಲಾಗುತ್ತಿತ್ತು. ನಂತರ ಚಿತ್ರದುರ್ಗವಾಯಿತು ಎಂದು ಇತಿಹಾಸ ಹೇಳುತ್ತದೆ. ಶಾತವಾಹನರ ಕಾಲದ ತಾಮ್ರದ ನಾಣ್ಯಗಳು ಈಗಲೂ ಪುರಾತತ್ವ ಇಲಾಖೆ ವಸ್ತು ಸಂಗ್ರಹಾಲದಲ್ಲಿವೆ.

ರಾಜ್ಯ ಸರ್ಕಾರ 1965ರಲ್ಲಿ ತಾಮ್ರದ ಗಣಿಗಾರಿಕೆ ಆರಂಭಿಸಿತು. 1994ರವರೆಗೆ ಇಲ್ಲಿ ಹೊರತೆಗೆದ ತಾಮ್ರ ವಿವಿಧೆಡೆ ರವಾನೆಯಾಗುತ್ತಿತ್ತು. ಹಿಂದೂಸ್ಥಾನ್ ಕಾಪರ್ ಲಿಮಿಟೆಡ್ (ಎಚ್‌ಸಿಎಲ್) ತಾಮ್ರ ಖರೀದಿಸುತ್ತಿತ್ತು. ನಂತರ ತಾಮ್ರಕ್ಕೆ ಬೇಡಿಕೆ ಕುಸಿದ ಕಾರಣ ಎಚ್‌ಸಿಲ್ ಖರೀದಿ ನಿಲ್ಲಿಸಿತು, ಗಣಿಗಾರಿಕೆ ನಿಂತು ಹೋಯಿತು.

ಬಳಿಕ ತಾಮ್ರದ ಗಣಿಯು ಹಟ್ಟಿ ಚಿನ್ನದ ಗಣಿ ನಿಯಮಿತ (ಎಚ್‌ಜಿಎಂಎಲ್) ದೊಂದಿಗೆ ವಿಲೀನಗೊಂಡಿತು. 1992ರಿಂದ 2002ರವರೆಗೆ ಎಚ್‌ಜಿಎಂಎಲ್ ಚಿತ್ರದುರ್ಗ ಚಿನ್ನದ ಗಣಿ (ಸಿಜಿಯು) ಹೆಸರಲ್ಲಿ ಅಲ್ಪಪ್ರಮಾಣದಲ್ಲಿ ಚಿನ್ನವನ್ನೂ ತೆಗೆಯಿತು. ನಂತರ ಅದೂ ಸ್ಥಗಿತಗೊಂಡಿತ್ತು.

ಕಳೆದ ಸೆಪ್ಟೆಂಬರ್ 9ರಂದು ಶಾಸಕ ಕೆ.ಸಿ. ವೀರೇಂದ್ರ ಅವರು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಪತ್ರ ಬರೆದು ತಾಮ್ರ ಗಣಿ ಪುನರಾರಂಭಕ್ಕೆ ಕೋರಿದ್ದರು. ಈ ಕುರಿತು ಪರಿಶೀಲಿಸುವಂತೆ ಸಚಿವರು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಇಲಾಖೆಯನ್ನು ಕೋರಿದ್ದರು. ಸಚಿವ ಕಿಶನ್ ರೆಡ್ಡಿ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಗಣಿಗಾರಿಕೆ ಆರಂಭದ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಸೂಚಿಸಿದ್ದರು.

ಕಳೆದೆರಡು ತಿಂಗಳಿಂದ ಕಾರ್ಯಸಾಧ್ಯತಾ ಪರೀಕ್ಷೆ ಆರಂಭಗೊಂಡಿದೆ. ಗಣಿ ಸಮೀಪದಲ್ಲಿಯೇ ಘೋಷಿತ ಅರಣ್ಯ, ಜೋಗಿಮಟ್ಟಿ ವನ್ಯಜೀವಿ ಧಾಮವೂ ಇರುವುದರಿಂದ ಇಲ್ಲಿ ತಾಮ್ರಗಣಿ ಪುನಾರಂಭಿಸಬಹುದೇ ಎಂಬ ಕುರಿತೂ ಅಧ್ಯಯನ ನಡೆಯುತ್ತಿದೆ ಎಂದು ಹಟ್ಟಿ ಚಿನ್ನದ ಗಣಿ ನಿಯಮಿತದ ಅಧಿಕಾರಿಗಳು ತಿಳಿಸಿದರು.



ಚಿತ್ರದುರ್ಗದ ಹೊರವಲಯದಲ್ಲಿರುವ ಇಂಗಳದಾಳು ತಾಮ್ರ ಗಣಿ ಪ್ರದೇಶದಲ್ಲಿದ್ದ ಕಚೇರಿಯ ಕಟ್ಟಡದ ನೋಟ ಪ್ರಜಾವಾಣಿ ಚಿತ್ರ– ಚಂದ್ರಪ್ಪ ವಿ

**ಎರಡು ತಿಂಗಳಲ್ಲಿ ಕಾರ್ಯಸಾಧ್ಯತಾ ಪರೀಕ್ಷೆ ವರದಿ ಬರಲಿದೆ. ಅದನ್ನು ಆಡಳಿತ ಮಂಡಳಿ ಸಭೆಯಲ್ಲಿ ಅಂಗೀಕರಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು**

**ಸಂಜೀವ್ ಸೋಲಂಕರ್**
ಭೂ ಅನ್ವೇಷಣಾ ವ್ಯವಸ್ಥಾಪಕ, ಹಟ್ಟಿ ಚಿನ್ನದ ಗಣಿ ನಿಯಮಿತ

### ಹೊಸ ತಂತ್ರಜ್ಞಾನ ಅಳವಡಿಕೆ ಅವಶ್ಯ

‘ಇಂಗಳದಾಳು ತಾಮ್ರ ಗಣಿ ಉತ್ತುಂಗದ ಸ್ಥಿತಿಯನ್ನು ಕಂಡಿದ್ದೇನೆ. 2 ಕಿ.ಮೀ ವ್ಯಾಪ್ತಿಯ ಗಣಿ ಸುರಂಗದೊಳಗೆ ಓಡಾಡಿದ್ದೇನೆ. ಈಗಲೂ ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಪರಿಸರಕ್ಕೆ ಧಕ್ಕೆಯಾಗದಂತೆ ಗಣಿಗಾರಿಕೆ ಸಾಧ್ಯವಿದೆ. ಇದು ಸರ್ಕಾರಕ್ಕೆ ಆರ್ಥಿಕ ಶಕ್ತಿಯಾಗಲಿದೆ, ಉದ್ಯೋಗಕ್ಕೂ ದಾರಿಯಾಗಲಿದೆ’ ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ನಿವೃತ್ತ ಭೂವಿಜ್ಞಾನಿ ಜೆ.ಪರಶುರಾಮ ಅವರು ಈ ಕುರಿತು ಪ್ರತಿಕ್ರಿಯಿಸಿದರು.

Publication Date
23/02/2026

Presented by ಪ್ರಜಾವಾಣಿ

---

‘ಮನದ ಮಾತು’ ಕಾರ್ಯಕ್ರಮದಲ್ಲಿ ಅಂಗಾಂಗ ದಾನದ ಉದಾತ್ತ ಕಾರ್ಯಕ್ಕೆ ಶ್ಲಾಘನೆ

# ನಂಜನಗೂಡು ರಸಬಾಳೆ ಉಲ್ಲೇಖ

ನವದೆಹಲಿ(ಪಿಟಿಐ): ‘ದೇಶದ ಕೃಷಿ ಉತ್ಪನ್ನಗಳು ವಿದೇಶಕ್ಕೂ ರವಾನೆಯಾಗುತ್ತಿವೆ. ನಂಜನಗೂಡಿನ ರಸಬಾಳೆ, ಮೈಸೂರಿನ ವೀಳ್ಯದೆಳೆ ಹಾಗೂ ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಲಿಂಬೆಹಣ್ಣು ಮಾಲ್ದೀವ್ಸ್‌ಗೂ ರಫ್ತಾಗುತ್ತಿದೆ’ ಎಂದು ಮೋದಿ ಪ್ರಶಂಸಿಸಿದರು.

ಮಾಸಿಕ ‘ಮನದ ಮಾತು’ ಕಾರ್ಯಕ್ರಮದಲ್ಲಿ ಈ ವಿಷಯ ಉಲ್ಲೇಖಿಸಿದ ಅವರು, ‘ಈ ಉತ್ಪನ್ನಗಳು ವಿಶೇಷ ರುಚಿ ಹಾಗೂ ಗುಣಮಟ್ಟ ಹೊಂದಿದ್ದು, ಭೌಗೋಳಿಕ ಮಾನ್ಯತೆಯನ್ನು ಹೊಂದಿವೆ. ಗುಣಮಟ್ಟದ ಜೊತೆಗೆ ಬೆಳೆಯುವ ಪ್ರಮಾಣವು ಏರಿಕೆಯಾಗಿದೆ’ ಎಂದರು.

‘ಕೇರಳದ ಕೃಷಿ ಭೂಮಿಯೊಂದರಲ್ಲಿ 570 ತಳಿ ಭತ್ತ ಬೆಳೆಯಲಾಗಿದ್ದು, ಒಡಿಶಾದ ರೈತರೊಬ್ಬರು ನೀರು ಉಳಿಸುವ ಮೂಲಕ ಹೆಚ್ಚಿನ ಆದಾಯ ಗಳಿಸುತ್ತಿದ್ದಾರೆ ರೈತರ ಕಠಿಣ ಶ್ರಮದಿಂದಲೇ ವಿಶ್ವದಲ್ಲಿ ಅತಿ ಹೆಚ್ಚು ಭತ್ತ ಬೆಳೆಯುವ ರಾಷ್ಟ್ರವಾಗಿ ಭಾರತ ಹೊರಹೊಮ್ಮಿರುವುದು ಅಂಕಿಅಂಶಗಳಿಂದ ಕಂಡುಬಂದಿದೆ. ದೇಶದ ಅಗತ್ಯವನ್ನು ಪೂರೈಸುವ ಜೊತೆಗೆ ವಿಶ್ವಕ್ಕೂ ಪೂರೈಕೆ ಮಾಡುತ್ತಿದೆ’ ಎಂದು ಹೇಳಿದರು.



### ವೀಳ್ಯದೆಲೆ ರಫ್ತಿಗೆ ಮೆಚ್ಚುಗೆ



ಮೈಸೂರು: ಜಿಲ್ಲೆಯ ಹೆಗ್ಗುರುತುಗಳಾದ ನಂಜನಗೂಡು ರಸಬಾಳೆ ಹಾಗೂ ಮೈಸೂರು ವೀಳ್ಯದೆಲೆ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ನಡೆದ ‘ಮನ್ ಕಿ ಬಾತ್’ ಕಾರ್ಯಕ್ರಮದಲ್ಲಿ ಪ್ರಸ್ತಾಪಿಸಿದ್ದಾರೆ.

‘ಈ ಉತ್ಪನ್ನಗಳು ಈಚೆಗೆ ಮಾಲ್ದೀವ್ಸ್‌ಗೆ ರಫ್ತಾಗಿದ್ದನ್ನು ಉಲ್ಲೇಖಿಸಿದ್ದಾರೆ. ‘ಇವು, ರುಚಿ, ಗುಣಮಟ್ಟಕ್ಕೆ ಹೆಸರಾಗಿವೆ. ಜಿಐ ಟ್ಯಾಗ್ (ಭೌಗೋಳಿಕ ಸೂಚ್ಯಂಕ) ಪಡೆದಿವೆ. ಇಂದಿನ ರೈತರು ಗುಣಮಟ್ಟವನ್ನು ಬಯಸುತ್ತಾರೆ. ಇಳುವರಿ ಹೆಚ್ಚಿಸುತ್ತಿದ್ದಾರೆ ಮತ್ತು ಛಾಪು ಮೂಡಿಸುತ್ತಿದ್ದಾರೆ’ ಎಂದು ಶ್ಲಾಘಿಸಿದ್ದಾರೆ.

ನಂಜನಗೂಡು ರಸಬಾಳೆ ಹಾಗೂ ಮೈಸೂರು ವೀಳ್ಯದೆಲೆಯನ್ನು ಮೈಸೂರಿನಿಂದ ಇದೇ ಮೊದಲಿಗೆ ಮಾಲ್ದೀವ್ಸ್‌ಗೆ ರಫ್ತು ಮಾಡಿದ್ದ ಬಗ್ಗೆ ‘ಪ್ರಜಾವಾಣಿ’ಯಲ್ಲಿ ಜ.29ರಂದು ವಿಶೇಷ ವರದಿ ಪ್ರಕಟವಾಗಿತ್ತು.

ವಿಶಿಷ್ಟ ರುಚಿಯ ಕಾರಣದಿಂದಾಗಿ ಜಿಐ ಪದಾರ್ಥಗಳ ಪಟ್ಟಿಯಲ್ಲಿರುವ ‘ನಂಜನಗೂಡು ರಸಬಾಳೆ’ಯು ದ್ವೀಪಗಳ ದೇಶ ಮಾಲ್ದೀವ್ಸ್‌ನಲ್ಲಿ ಮಾರಾಟವಾಗಿತ್ತು. ಸುತ್ತೂರಿನ ಐಸಿಎಆರ್- ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರವು (ಕೆವಿಕೆ) ಸೇತುವೆಯಾಗಿ ಕೆಲಸ ಮಾಡಿತ್ತು. ರಸಬಾಳೆಯು ಮಾಲ್ದೀವ್ಸ್ ಗ್ರಾಹಕರ ಗಮನಸೆಳೆದಿತ್ತು. ಇದರೊಂದಿಗೆ, ಈ ಬೆಳೆಗಳ ರಫ್ತಿಗೆ ಇರುವ ಅವಕಾಶದ ಬಾಗಿಲು ತೆರೆಯುವ ಕೆಲಸ ನಡೆದಿತ್ತು.

500 ಕೆ.ಜಿ. ನಂಜನಗೂಡು ರಸಬಾಳೆ ಹಾಗೂ 35 ಕೆ.ಜಿ. ಮೈಸೂರು ವೀಳ್ಯದೆಲೆ ರಫ್ತಾಗಿತ್ತು. ನಂಜನಗೂಡು ತಾಲ್ಲೂಕಿನ ಕುರಹಟ್ಟಿಯ ಕೆ.ಎಂ. ಶಿವರಾಜು ಹಾಗೂ ರವೀಶ್ ಎನ್., ನಾಗಪ್ಪ ಅವರಿಂದ ಖರೀದಿಸಿ ರವಾನಿಸಲಾಗಿತ್ತು. ಉತ್ತಮ ದರವೂ ಸಿಕ್ಕಿತ್ತು. ಈ ಪ್ರಯತ್ನವನ್ನು ಪ್ರಧಾನಿ ಮೋದಿ ಉಲ್ಲೇಖಿಸಿದ್ದಾರೆ.

‘ಮೈಸೂರಿನ ಕೃಷಿ ಉತ್ಪನ್ನಗಳ ಪ್ರಧಾನಿ ಪ್ರಸ್ತಾಪಿಸಿದ್ದು ಖುಷಿ ತಂದಿದೆ. ಕೃಷಿಕರಿಗೆ ಹೆಮ್ಮೆಯ ವಿಷಯವಾಗಿದೆ’ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.



### ‘25 ದೇಶಗಳಿಗೆ ಇಂಡಿ ಲಿಂಬೆ ರಫ್ತು’

ವಿಜಯಪುರ: ಪ್ರಧಾನಿ ಮನ್‌ಕಿ ಬಾತ್‌ನಲ್ಲಿ ಉಲ್ಲೇಖಿಸಿ, ಶ್ಲಾಘಿಸಿದ ಇಂಡಿ ‘ಕಾಗ್ಜಿ’ (KAGZI) ಲಿಂಬೆ ವಿದೇಶಗಳಿಗೆ ರಫ್ತಾಗುತ್ತಿದೆ.

ಬಾಂಗ್ಲಾದೇಶ, ನೇಪಾಳ, ದುಬೈ, ಅಬುದಾಬಿ, ಕುವೈತ್, ಶ್ರೀಲಂಕಾ, ಪಾಕಿಸ್ತಾನ, ಮಾಲ್ದೀವ್ಸ್ ಸೇರಿ 25 ದೇಶಗಳಿಗೆ ಉತ್ಕೃಷ್ಟ ಗುಣಮಟ್ಟದ ಲಿಂಬೆಯನ್ನು ರಫ್ತು ಮಾಡಲಾಗುತ್ತಿದೆ.

ಹಿಂದೆ ವಾರ್ಷಿಕ ಪ್ರತಿವರ್ಷ ₹350 ರಿಂದ ₹500 ಕೋಟಿ ವಹಿವಾಟು ನಡೆಯುತ್ತಿದ್ದ ಇಂಡಿ ನಿಂಬೆ ಇಂದು ₹ 600 ಕೋಟಿಯಿಂದ ₹ 800 ಕೋಟಿ ವಹಿವಾಟು ನಡೆಯುತ್ತಿದೆ ಎಂದು ನಿಂಬೆ ಅಭಿವೃದ್ಧಿ ಮಂಡಳಿ ತಿಳಿಸಿದೆ.

‘ಇಂಡಿ ಲಿಂಬೆಗೆ ಜಿಐ ಟ್ಯಾಗ್ ಮತ್ತು ವಿದೇಶಕ್ಕೆ ರಫ್ತು ಕುರಿತು ಪ್ರಧಾನಿ ಪ್ರಸ್ತಾಪಿಸಿರುವುದು ಜಿಲ್ಲೆಯ ಲಿಂಬೆ ಬೆಳೆಗಾರರಿಗೆ ಸ್ಫೂರ್ತಿ ನೀಡಿದಂತಾಗಿದೆ’ ಎಂದು ಬಿಜೆಪಿ ವಿಜಯಪುರ ಜಿಲ್ಲಾ ಘಟಕದ ಅಧ್ಯಕ್ಷ ಗುರುಲಿಂಗಪ್ಪ ಅಂಗಡಿ ಪ್ರತಿಕ್ರಿಯಿಸಿದ್ದಾರೆ.

## ❖ ಒಡಿಶಾದಲ್ಲಿ ಆರ್‌ಬಿಐ ದತ್ತಾಂಶ ಕೇಂದ್ರ

**ಸಂದರ್ಭ: ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ತನ್ನ ದತ್ತಾಂಶ ಕೇಂದ್ರವನ್ನು ಒಡಿಶಾದಲ್ಲಿ ನಿರ್ಮಾಣ ಮಾಡಿದೆ. ಇದು ಭೂಕಂಪನಕ್ಕೆ ಹೆಚ್ಚು ತುತ್ತಾಗ ಬಹುದಾದ ವಲಯಗಳಿಂದ ಹಾಗೂ ಗಡಿಯಾಚೆಯಿಂದ ಅಪಾಯ ಎದುರಾಗಬಹುದಾದ ಪ್ರದೇಶಗಳಿಂದ ದೂರದಲ್ಲಿ ಇದೆ.**

- ಮಹತ್ವದ ಹಣಕಾಸು ಮೂಲಸೌಕರ್ಯವನ್ನು ಅಪಾಯಗಳಿಂದ ರಕ್ಷಿಸುವ ಉದ್ದೇಶದಿಂದ ಆರ್‌ಬಿಐ ದತ್ತಾಂಶ ಕೇಂದ್ರವನ್ನು ಇಲ್ಲಿ ನಿರ್ಮಿಸಿದೆ.
- ಭುವನೇಶ್ವರದಲ್ಲಿ ಇರುವ ಇದು ಆರ್‌ಬಿಐನ ಕರೆನ್ಸಿ ನಿರ್ವಹಣೆಗೆ, ಪಾವತಿ ಪ್ರಕ್ರಿಯೆಗಳನ್ನು ಬೆಂಬಲಿಸುವ ವ್ಯವಸ್ಥೆಗಳನ್ನು ತನ್ನಲ್ಲಿ ಇರಿಸಿಕೊಳ್ಳಲಿದೆ ಎಂದು ತಜ್ಞರು. ಹೇಳಿದ್ದಾರೆ.
- ಒಡಿಶಾದಲ್ಲಿನ ಈ ಕೇಂದ್ರವು ಭಾರತದ ಪಶ್ಚಿಮ ಹಾಗೂ ಉತ್ತರದ ಗಡಿ ಪ್ರದೇಶಗಳಿಂದ ಬಹುದೂರದಲ್ಲಿ ಇದೆ. ಇದರಿಂದಾಗಿ ಗಡಿಯಾಚೆಯಿಂದ ಎದುರಾಗಬಹುದಾದ ಕ್ಷಿಪಣಿ ಅಥವಾ ಡ್ರೋನ್ ದಾಳಿಯ ಸಾಧ್ಯತೆ ಕಡಿಮೆ ಎಂದು ತಜ್ಞರೊಬ್ಬರು ತಿಳಿಸಿದರು.
- ಆರ್‌ಬಿಐನ ಪ್ರಮುಖ ದತ್ತಾಂಶ ಕೇಂದ್ರವು ನವಿ ಮುಂಬೈನ ಖಾರ್ಗರನಲ್ಲಿದೆ. ಒಡಿಶಾದಲ್ಲಿ ಇರುವುದು ಎರಡನೆಯ ದತ್ತಾಂಶ ಕೇಂದ್ರ.
- ಒಡಿಶಾದಲ್ಲಿ ಹೆಚ್ಚಿನ ಪ್ರಮಾಣದ ಡಿಜಿಟಲ್ ದಟ್ಟಣೆ ಇಲ್ಲ. ಹೀಗಾಗಿ ಇಲ್ಲಿ ದತ್ತಾಂಶ ಕೇಂದ್ರವನ್ನು ನಿರ್ಮಿಸುವ ಮೂಲಕ ಅರ್‌ಬಿಐ ಸೈಬರ್ ಸಮಸ್ಯೆಗಳು ಎದುರಾಗುವ ಅಪಾಯವನ್ನು ತಗ್ಗಿಸಲುಯತ್ನಿಸು-ತಿರಬಹುದು ಎಂದು ಇನ್ನೊಬ್ಬರು ತಜ್ಞರು ಹೇಳಿದ್ದಾರೆ.

# ಸೌದಿ ಅರೇಬಿಯಾದಿಂದ ತೈಲ ಆಮದು ಹೆಚ್ಚಳ

## ಪ್ರತಿ ದಿನ 11 ಲಕ್ಷ ಬ್ಯಾರಲ್ ಕಚ್ಚಾ ತೈಲ ಆಮದು • ಮಾರ್ಚ್‌ಗೆ 14 ಲಕ್ಷ ತಲುಪುವ ಅಂದಾಜು

ನವದೆಹಲಿ (ಪಿಟಿಐ): ಫೆಬ್ರುವರಿ ತಿಂಗಳಿನಲ್ಲಿ ರಷ್ಯಾದಿಂದ ಭಾರತಕ್ಕೆ ಕಚ್ಚಾ ತೈಲ ಆಮದು ಇಳಿಕೆಯಾಗಿದೆ. ಆದರೆ, ಇದೇ ಅವಧಿಯಲ್ಲಿ ಸೌದಿ ಅರೇಬಿಯಾದಿಂದ ಆಮದು ಹೆಚ್ಚಳವಾಗಿದೆ.

ಪ್ರಸಕ್ತ ವರ್ಷದ ಫೆಬ್ರುವರಿ 1ರಿಂದ 18ರವರೆಗೆ ದೇಶಕ್ಕೆ ಪ್ರತಿ ದಿನ ಸರಾಸರಿ 48.5 ಲಕ್ಷ ಬ್ಯಾರಲ್‌ನಷ್ಟು ಕಚ್ಚಾ ತೈಲ ಆಮದಾಗಿದೆ.

ಜನವರಿಯಲ್ಲಿ ಕಚ್ಚಾ ತೈಲ ಆಮದು ಪ್ರತಿದಿನ 52.5 ಲಕ್ಷ ಬ್ಯಾರಲ್‌ನಷ್ಟಿತ್ತು. ಇದಕ್ಕೆ ಹೋಲಿಸಿದರೆ ಫೆಬ್ರುವರಿಯಲ್ಲಿ ಕಚ್ಚಾ ತೈಲದ ಆಮದು ಶೇ 8ರಷ್ಟು ಇಳಿಕೆ ಆಗಿದೆ.

ಕಚ್ಚಾ ತೈಲ ಉತ್ಪನ್ನ ಮಾಡುವ ರಷ್ಯಾದ ಪ್ರಮುಖ ತೈಲ ಕಂಪನಿಗಳ ಮೇಲೆ ಅಮೆರಿಕ ನಿರ್ಬಂಧ ವಿಧಿಸಿದೆ. ಇದರಿಂದಾಗಿ ರಷ್ಯಾದಿಂದ ಭಾರತಕ್ಕೆ ಕಚ್ಚಾ ತೈಲ ಆಮದು ಪ್ರಮಾಣವು ಕಡಿಮೆ ಆಗಿದೆ. ಆದರೆ, ಇದೇ ಅವಧಿಯಲ್ಲಿ ಸೌದಿ ಅರೇಬಿಯಾದಿಂದ ಆಮದು ಹೆಚ್ಚಳವಾಗಿದೆ.

**ಮುಖ್ಯಾಂಶಗಳು**

- ಫೆಬ್ರುವರಿ 1ರಿಂದ 18ರವರೆಗೆ ನಿತ್ಯ 48.5 ಲಕ್ಷ ಬ್ಯಾರಲ್ ತೈಲ ಆಮದು
- ಅಮೆರಿಕದ ನಿರ್ಬಂಧದಿಂದ ರಷ್ಯಾದ ತೈಲ ಆಮದು ಇಳಿಕೆ
- ರಷ್ಯಾದ ಆಮದನ್ನು ಹಿಂದಿಕ್ಕಿದ ಸೌದಿ ಆಮದು



2025ರ ಡಿಸೆಂಬರ್‌ನಲ್ಲಿ ರಷ್ಯಾದಿಂದ ಭಾರತಕ್ಕೆ ಪ್ರತಿದಿನ 12.8 ಲಕ್ಷ ಬ್ಯಾರಲ್ ಕಚ್ಚಾ ತೈಲ ಆಮದಾಗಿತ್ತು. ಇದು ಜನವರಿಯಲ್ಲಿ 12.2 ಲಕ್ಷ ಮತ್ತು ಫೆಬ್ರುವರಿ ಆರಂಭದಲ್ಲಿ ಅಂದಾಜು 10.9 ಲಕ್ಷ ಬ್ಯಾರಲ್‌ಗೆ ಇಳಿದಿದ್ದು, ಶೇ 10ರಷ್ಟು ಕಡಿಮೆ ಆಗಿದೆ ಎಂದು ಜಾಗತಿಕ ವ್ಯಾಪಾರ ವಿಶ್ಲೇಷಕ ಸಂಸ್ಥೆ ಕೆಪ್ಲೆರ್ ತಿಳಿಸಿದೆ.

‘ಫೆಬ್ರುವರಿಯಲ್ಲಿ ಭಾರತವು ರಷ್ಯಾದಿಂದ ಆಮದು ಮಾಡಿಕೊಂಡಿರುವ ಕಚ್ಚಾ ತೈಲ ದಿನವೊಂದಕ್ಕೆ ಅಂದಾಜು 10 ಲಕ್ಷದಿಂದ 12 ಲಕ್ಷ ಬ್ಯಾರಲ್‌ನಷ್ಟು ಇರಬಹುದು. ಇದು ಮಾರ್ಚ್ ವೇಳೆಗೆ 8 ಲಕ್ಷದಿಂದ 10 ಲಕ್ಷ ಬ್ಯಾರಲ್‌ಗೆ ಇಳಿಕೆ ಆಗಬಹುದು’ ಎಂದು ಕೆಪ್ಲೆರ್‌ನ ಸಂಶೋಧನಾ ವಿಶ್ಲೇಷಕ (ಸಂಸ್ಕರಣೆ ಮತ್ತು ಮಾಡೆಲಿಂಗ್) ಸುಮಿತ್ ರಿಟೋಲಿಯಾ ಹೇಳಿದ್ದಾರೆ.

ರಷ್ಯಾದಿಂದ ಕಚ್ಚಾ ತೈಲ ಆಮದು ಪ್ರಮಾಣ ಇಳಿಕೆ ಆಗಿದ್ದರೆ, ಸೌದಿ ಅರೇಬಿಯಾದಿಂದ ಕಚ್ಚಾ ತೈಲ ಆಮದು ಫೆಬ್ರುವರಿಯಲ್ಲಿ ಪ್ರತಿದಿನ 10 ಲಕ್ಷದಿಂದ 11 ಲಕ್ಷ ಬ್ಯಾರಲ್‌ಗೆ ಹೆಚ್ಚಳವಾಗಿದೆ. ಮಾರ್ಚ್‌ನಲ್ಲಿ ಆಮದು 14 ಲಕ್ಷ ಬ್ಯಾರಲ್‌ಗೆ ತಲುಪಲಿದೆ ಎಂದು ತಿಳಿಸಿದ್ದಾರೆ.

ಈ ಅಂಕಿ ಅಂಶಗಳನ್ನು ಗಮನಿಸಿದಾಗ ಸೌದಿ ಅರೇಬಿಯಾ ಫೆಬ್ರುವರಿ ತಿಂಗಳಲ್ಲಿ ಇದುವರೆಗೆ ದೇಶದ ಅತಿದೊಡ್ಡ ಕಚ್ಚಾ ತೈಲ ಪೂರೈಕೆದಾರನಾಗಿ ಹೊರಹೊಮ್ಮಿದೆ. ನಂತರದ ಸ್ಥಾನದಲ್ಲಿ ರಷ್ಯಾ ಮತ್ತು ಇರಾಕ್ ಇವೆ ಎಂದು ಹೇಳಿದ್ದಾರೆ.

ಭಾರತವು ರಷ್ಯಾದ ಕಚ್ಚಾ ತೈಲ ಆಮದನ್ನು ಕಡಿಮೆ ಮಾಡುವುದರಿಂದ, ಒಟ್ಟಾರೆ ಕಚ್ಚಾ ತೈಲದ ಮೇಲಿನ ವೆಚ್ಚವು ಬ್ಯಾರಲ್‌ಗೆ 2-3 ಡಾಲರ್‌ಗಳಷ್ಟು ಹೆಚ್ಚಾಗುವ ನಿರೀಕ್ಷೆಯಿದೆ. ಆದರೆ, ವೆನೆಜುವೆಲಾದ ಅಗ್ಗದ ಕಚ್ಚಾ ತೈಲ ಖರೀದಿಯು ಇದನ್ನು ಭಾಗಶಃ ಸರಿದೂಗಿಸಬಹುದು ಎಂದು ಹೇಳಿದ್ದಾರೆ.

# ಐಟಿಎಫ್ ಟೆನಿಸ್: ವೆಂಡೆವಿಂಕೆಲ್‌ಗೆ ಪ್ರಶಸ್ತಿ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ವೈಲ್ಡ್‌ಕಾರ್ಡ್ ಮೂಲಕ ಪ್ರವೇಶ ಪಡೆದು ಶ್ರೇಯಾಂಕ ಆಟಗಾರ್ತಿಯರಿಗೆ ಆಘಾತ ನೀಡಿದ್ದ ವೈಷ್ಣವಿ ಅಡ್ಕರ್ ಅವರ ಯಶಸ್ವಿನ ಓಟ ಫೈನಲ್‌ನಲ್ಲಿ ಕೊನೆಗೊಂಡಿತು. ಎರಡನೇ ಶ್ರೇಯಾಂಕದ ಹ್ಯಾನೆ ವೆಂಡೆವಿಂಕೆಲ್ ಅವರು ಭಾನುವಾರ ಏಕಪಕ್ಷೀಯವಾಗಿದ್ದ ಫೈನಲ್‌ನಲ್ಲಿ ವೈಷ್ಣವಿ ಅವರನ್ನು ಸೋಲಿಸಿ ಕೆಪಿಬಿ ಟ್ರಸ್ಟ್ ಐಟಿಎಫ್ ಮಹಿಳಾ ಓಪನ್ ಡಬ್ಲ್ಯು100 ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡರು.


ಎಸ್.ಎಂ.ಕೃಷ್ಣ ಟೆನಿಸ್ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಬೆಲ್ಜಿಯಮ್‌ನ ಆಟಗಾರ್ತಿ 6-0, 6-1 ರಿಂದ ಜಯಗಳಿಸಿದರು. ವಿಶ್ವ ಕ್ರಮಾಂಕದಲ್ಲಿ 124ನೇ ಸ್ಥಾನದಲ್ಲಿರುವ ವೆಂಡೆವಿಂಕೆಲ್ ಫೈನಲ್‌ನಲ್ಲೂ ಪ್ರಾಬಲ್ಯ ಮೆರೆದು 57 ನಿಮಿಷಗಳಲ್ಲಿ ಜಯಗಳಿಸಿದರು.

ಬೆಲ್ಜಿಯಮ್‌ನ ಆಟಗಾರ್ತಿ 100 ಡಬ್ಲ್ಯುಟಿಎ ಅಂಕಗಳ ಜೊತೆಗೆ ಸುಮಾರು ₹14 ಲಕ್ಷ ನಗದು ಬಹುಮಾನ ತಮ್ಮದಾಗಿಸಿಕೊಂಡರು. ಪುಣೆಯ 21 ವರ್ಷ ವಯಸ್ಸಿನ ಆಟಗಾರ್ತಿ ವೈಷ್ಣವಿ ಅವರು ಇಲ್ಲಿನ ಯಶಸ್ಸಿಗಾಗಿ 53 ಡಬ್ಲ್ಯುಟಿಎ ಪಾಯಿಂಟ್ಸ್ ಮತ್ತು ₹7.50 ಲಕ್ಷ ನಗದು ಬಹುಮಾನ ಗಳಿಸಿದರು. ವೈಷ್ಣವಿ ವಿಶ್ವ ಕ್ರಮಾಂಕದಲ್ಲಿ 690ನೇ ಸ್ಥಾನದಲ್ಲಿದ್ದಾರೆ.

ವೆಂಡೆವಿಂಕೆಲ್ ಮೊದಲ ಸೆಟ್‌ನ ಆರಂಭದಲ್ಲೇ ಅಡ್ಕರ್ ಅವರ ಸರ್ವ್ ಮುರಿದು ಬಲುಬೇಗ 3-0 ಮುನ್ನಡೆ ಸಾಧಿಸಿದರು. ಫೋರ್‌ಹ್ಯಾಂಡ್ ಹೊಡೆತಗಳಲ್ಲಿ ಯಶಸ್ಸು ಸಾಧಿಸಿದ ಅವರು ಎದುರಾಳಿ ಎಸಗಿದ ತಪ್ಪುಗಳ ಲಾಭ ಪಡೆದರು.




ರನ್ನರ್ ಅಪ್ ವೈಷ್ಣವಿ ಅಡ್ಕರ್ ಹಾಗೂ ಚಾಂಪಿಯನ್ ಹ್ಯಾನೆ ವೆಂಡೆವಿಂಕೆಲ್ ಚಿತ್ರ: ಕೃಷ್ಣಕುಮಾರ್ ಪಿ.ಎಸ್

## ❖ ಲೋಕಪಾಲಕ್ಕೆ ಕಾಲಾವಕಾಶ

**ಸಂದರ್ಭ: 'ಪ್ರಶ್ನೆಗಾಗಿ ಲಂಚ' ಪ್ರಕರಣದಲ್ಲಿ ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ ವಿರುದ್ಧ ಆರೋಪಪಟ್ಟಿ ಸಲ್ಲಿಸಲು ಸಿಬಿಐಗೆ ಅನುಮತಿ ನೀಡುವ ವಿಚಾರವನ್ನು ಕಾನೂನಿನ ಪ್ರಕಾರ ಪರಿಗಣಿಸಲು ಲೋಕಪಾಲಕ್ಕೆ ನೀಡಿದ್ದ ಕಾಲಾವಕಾಶವನ್ನು ದೆಹಲಿ ಹೈಕೋರ್ಟ್ ಎರಡು ತಿಂಗಳು ವಿಸ್ತರಿಸಿದೆ.**

- ನ್ಯಾಯಮೂರ್ತಿಗಳಾದ ಅನಿಲ್ ಕ್ಷೇತ್ರಪಾಲ್ ಮತ್ತು ಹರೀಶ್ | ವೈದ್ಯನಾಥನ್ ಶಂಕರ್ ಅವರ ಪೀಠವು, ಸಮಯ ವಿಸ್ತರಣೆ ಕೋರಿ ಇನ್ನು ಮುಂದೆ ಸಲ್ಲಿಸುವ ಯಾವುದೇ ಮನವಿಯನ್ನು ಪರಿಗಣಿಸುವುದಿಲ್ಲ ಎಂದು ಹೇಳಿತು.
- ಮಹುವಾ ಮತ್ತು ಕೇಂದ್ರೀಯ ತನಿಖಾ ಸಂಸ್ಥೆಯ (ಸಿಬಿಐ) ಪರ ವಾದ ಮಂಡಿಸಿದ ವಕೀಲರು, 'ಕಾಲಾವಕಾಶವನ್ನು ಎರಡು ತಿಂಗಳು ವಿಸ್ತರಿಸಬೇಕೆಂಬ ಲೋಕಪಾಲದ ಮನವಿಯನ್ನು ನಾವು ವಿರೋಧಿಸುತ್ತಿಲ್ಲ' ಎಂದು ಹೇಳಿದರು.



# ಐದು ಪಾಲಿಕೆ, ಸ್ಥಳೀಯ ಸಂಸ್ಥೆ ಚುನಾವಣೆ: ಹಲವು ಸವಾಲು

**ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್. ಸಂಗ್ರೇಶಿ**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯ ಐದು ಪಾಲಿಕೆಗಳೂ ಸೇರಿದಂತೆ ಹಲವು ಸ್ಥಳೀಯ ಸಂಸ್ಥೆಗಳ ಚುನಾವಣೆ ಕುರಿತು ಸಾಕಷ್ಟು ಚರ್ಚೆ ನಡೆಯುತ್ತಿದೆ. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಜಿಬಿಎ ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆಗೆ ಮುಹೂರ್ತ ನಿಗದಿಯಾಗಿದೆ. ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು ಮತಪತ್ರಗಳನ್ನು (ಬ್ಯಾಲೆಟ್ ಪೇಪರ್) ಬಳಸಿ ಚುನಾವಣೆ ನಡೆಸುವುದಾಗಿ ರಾಜ್ಯ ಚುನಾವಣಾ ಆಯೋಗ ಘೋಷಿಸಿದೆ. ಇನ್ನೊಂದೆಡೆ ತಾಲ್ಲೂಕು, ಜಿಲ್ಲಾ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಆಡಳಿತದ ಅವಧಿ ಮುಗಿದು ಐದು ವರ್ಷಗಳಾದರೂ ಚುನಾವಣೆ ನಡೆದಿಲ್ಲ. ಸರ್ಕಾರದ ವಿಳಂಬ ಧೋರಣೆ ವಿರುದ್ಧ ಆಯೋಗ ಕೋರ್ಟ್ ಮೆಟ್ಟಿಲೇರಿದೆ. ಸರ್ಕಾರ ಮೂರೂ ಸ್ತರಗಳಿಗೆ ಒಟ್ಟಿಗೆ ಚುನಾವಣೆ ನಡೆಸಲು ಚಿಂತಿಸುತ್ತಿದೆ. ಈ ಎಲ್ಲ ಬೆಳವಣಿಗೆಗಳ ಕುರಿತು ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ಅವರ ಜತೆ 'ಪ್ರಜಾವಾಣಿ' ನಡೆಸಿದ ಮಾತುಕತೆಯ ಸಾರ ಇಲ್ಲಿದೆ

ಜಿ.ಎಸ್.ಸಂಗ್ರೇಶಿ

• ಚಂದ್ರಹಾಸ ಹಿರೇಮಳಲಿ

ಪ್ರಜಾವಾಣಿ ಸಂದರ್ಶನ

- **ಬಹಳಷ್ಟು ಬೇಡಿಕೆಗಳು, ಪ್ರಯೋಗಗಳ ತರುವಾಯ ಇವಿಎಂ ಜಾರಿಗೆ ತರಲಾಗಿದೆ. ಮತ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕಾದ ಆಯೋಗ, ಹಿಂದಕ್ಕೆ ಚಲಿಸಲು ಹೊರಟಿದೆಯಲ್ಲ?**

ಮತಪತ್ರ ಬಳಸಬಾರದು ಎಂದು ಯಾವ ಕಾನೂನು ಕೂಡ ಹೇಳಿಲ್ಲ. ಚುನಾವಣಾ ಆಯೋಗ ಸ್ವತಂತ್ರ ಆಯೋಗವಾಗಿದ್ದರೂ ಕಾಯ್ದೆಗಳ ಪ್ರಕಾರವೇ ಕಾರ್ಯನಿರ್ವಹಿಸುತ್ತದೆ. ಚುನಾವಣೆಗಳನ್ನು ನಡೆಸುತ್ತದೆ. ಯಾವುದೇ ಚುನಾವಣೆಗಳನ್ನು ಇವಿಎಂ ಅಥವಾ ಮತಪತ್ರ ಬಳಸಿ ಮಾಡಬಹುದು ಎಂದು ಚುನಾವಣಾ ನಿಯಮಗಳೇ ಹೇಳುತ್ತವೆ. ಅಂತಹ ನಿಯಮಗಳ ಅನ್ವಯವೇ ನಿರ್ಧಾರ ತೆಗೆದುಕೊಳ್ಳಲಾಗಿದೆ. ರಾಜ್ಯ ಸರ್ಕಾರ ಈಚೆಗೆ ಜಾರಿಗೆ ತಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಚುನಾವಣೆ) ಕಾಯ್ದೆ–2025ರಲ್ಲೂ ಚುನಾವಣೆಗಳನ್ನು ಮತಪತ್ರ ಬಳಸಿ ನಡೆಸಬಹುದು ಎಂಬ ಅಂಶವನ್ನು ನಿಯಮ 37, 57ರಲ್ಲಿ ಉಲ್ಲೇಖಿಸಲಾಗಿದೆ. ಈ ನಿಯಮಗಳ ಅನ್ವಯವೇ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ಪಾಲಿಕೆಗಳಿಗೆ ಮತಪತ್ರ ಬಳಸಿ ಚುನಾವಣೆ ನಡೆಸಲು ನಿರ್ಧರಿಸಿದ್ದೇವೆ.

- **ಮತಪತ್ರ ಬಳಕೆ ಮತದಾನದ ಅವಧಿಯ ಹಿಗ್ಗುವಿಕೆಗೆ ಕಾರಣವಾಗುತ್ತದೆಯಲ್ಲ?**

ಬಿಬಿಎಂಪಿ ಚುನಾವಣೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆದು ಎಷ್ಟು ವರ್ಷಗಳಾಗಿವೆ ಎನ್ನುವುದು ಎಲ್ಲರಿಗೂ ಗೊತ್ತಿರುವ ಸಂಗತಿ. ಪ್ರಜಾಪ್ರಭುತ್ವದಲ್ಲಿ ಅವಧಿ ಮುಗಿದ ನಂತರವೂ ನಡೆಯುವ ಚುನಾವಣೆ, ವಿವಿಧ ಹಂತಗಳ ಬಳಿಕ ಪ್ರಕಟವಾಗುವ ಫಲಿತಾಂಶಕ್ಕಾಗಿ ತಾಳ್ಮೆಯಿಂದ ಕಾಯುವ ಜನರು ಮತದಾನಕ್ಕಾಗಿ ಮೂರು, ನಾಲ್ಕು ಗಂಟೆ ಹೆಚ್ಚು ಅವಧಿ ತೆಗೆದುಕೊಂಡರೆ ಸಹಿಸುವುದಿಲ್ಲವೇ? ಮತಪತ್ರ ಬಳಕೆಯಲ್ಲೂ ತ್ವರಿತ ಮತದಾನಕ್ಕೆ ಅಗತ್ಯವಾದ ಕ್ರಮವನ್ನು ಆಯೋಗ ತೆಗೆದುಕೊಳ್ಳಲಿದೆ.

- **ಇವಿಎಂನಂತಹ ಆಧುನಿಕ ವಿಧಾನ ಅವಳವಡಿಕೆಯ ನಂತರವೂ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆಯಾಗುತ್ತಿದೆ. ಮತಪತ್ರ ಬಳಕೆಯಿಂದ ಇನ್ನಷ್ಟು ಇಳಿಕೆ ಆಗುವುದಿಲ್ಲವೇ?**

ಮತಪತ್ರ ಅಥವಾ ಇವಿಎಂ ಬಳಕೆಗೂ ಮತದಾನ ಪ್ರಮಾಣದ ಇಳಿಕೆಗೂ ಸಂಬಂಧವಿಲ್ಲ. ರಾಷ್ಟ್ರಪತಿ, ಉಪರಾಷ್ಟ್ರಪತಿ ಚುನಾವಣೆ, ಸಹಕಾರ ಸಂಘಗಳ ಚುನಾವಣೆ ಸೇರಿದಂತೆ ಹಲವೆಡೆ ಇಂದಿಗೂ ಮತಪತ್ರ ಬಳಕೆಯೇ ಮುಂದುವರಿದಿದೆ. ಸುಮಾರು 6,000 ಗ್ರಾಮ ಪಂಚಾಯಿತಿಗಳಿಗೆ ನಡೆಸುವ ಚುನಾವಣೆಯಲ್ಲಿ ಇದುವರೆಗೂ ಮತಪತ್ರವನ್ನೇ ಬಳಸಲಾಗಿದೆ. 2.97 ಕೋಟಿ ಮತದಾರರು ಇದ್ದಾರೆ. ಅಲ್ಲಿ ಮತಪತ್ರ ಯಶಸ್ವಿಯಾಗಿ ಬಳಸಲಾಗಿದೆ. ಜಿಬಿಎ ವ್ಯಾಪ್ತಿಯಲ್ಲಿ 80ರಿಂದ 90 ಲಕ್ಷ ಮತದಾರರು ಇದ್ದಾರೆ. ಇಷ್ಟು ಮತದಾರರಿಗೆ ಮತಪತ್ರಗಳನ್ನು ಬಳಕೆ ಮಾಡುವುದರಲ್ಲಿ ಯಾವ ಸಮಸ್ಯೆಯೂ ಇಲ್ಲ. ಮತಪ್ರಮಾಣ ಹೆಚ್ಚಳಕ್ಕೆ ಜಾಗೃತಿ ಮೂಡಿಸುವ ಹಲವು ಕ್ರಮಗಳನ್ನು ಆಯೋಗ ಕೈಗೊಳ್ಳಲಿದೆ.

- **ಮತಪತ್ರ ಬಳಸಲು ಅಗತ್ಯವಾದ ಮತಪೆಟ್ಟಿಗೆ ಇವೆಯೇ?**

ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಪಾಲಿಕೆಗಳಿಗೆ ಸಾಕಾಗುವಷ್ಟು ಮತಪೆಟ್ಟಿಗೆಗಳು ಇವೆ. 8 ಸಾವಿರಕ್ಕೂ ಹೆಚ್ಚು ಮತಪೆಟ್ಟಿಗೆಗಳು ಈಗಾಗಲೇ ಸಿದ್ಧ ಇವೆ. ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸಲು ಇನ್ನಷ್ಟು ಮತಪೆಟ್ಟಿಗೆಗಳ ಅಗತ್ಯವಿದೆ. ಖರೀದಿಗಾಗಿ ಅಗತ್ಯ ಅನುದಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ.

- **ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆ ಐದು ವರ್ಷ ವಿಳಂಬ ಏಕೆ?**

ರಾಜ್ಯದ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ 2016ರ ಏಪ್ರಿಲ್‌ನಲ್ಲಿ ಚುನಾವಣೆ ನಡೆದಿತ್ತು. ಅಂದು ಆಯ್ಕೆಯಾಗಿದ್ದ ಸದಸ್ಯರ ಅವಧಿ 2021ರ ಏಪ್ರಿಲ್ 27ರಂದು ಮುಕ್ತಾಯವಾಗಿತ್ತು. ಚುನಾವಣೆಗೆ ಸಿದ್ಧತೆ ನಡೆದಿರುವಾಗಲೇ ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ಅಧಿಕಾರವನ್ನು ಚುನಾವಣಾ ಆಯೋಗದಿಂದ ಹಿಂಪಡೆಯಲಾಗಿತ್ತು. ಕರ್ನಾಟಕ ಪಂಚಾಯತ್ ರಾಜ್ ಮತ್ತು ಗ್ರಾಮ ಸ್ವರಾಜ್ ಕಾಯ್ದೆಗೆ ತಿದ್ದುಪಡಿ ತಂದು 'ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ'ಕ್ಕೆ ನೀಡಲಾಗಿತ್ತು. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿಗಳ ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ವಿಳಂಬದ ವಿರುದ್ಧ ಹೈಕೋರ್ಟ್ ಮೊರೆ ಹೋಗಿದ್ದೇವೆ. ಕ್ಷೇತ್ರಗಳ ಪುನರ್ ವಿಂಗಡಣೆ ಮತ್ತು ಮೀಸಲಾತಿ ನಿಗದಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದಾಗಿ 2023ರ ಡಿಸೆಂಬರ್‌ನಲ್ಲೇ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಪ್ರಮಾಣ ಪತ್ರ ಸಲ್ಲಿಸಿತ್ತು. ನಂತರ ಕ್ಷೇತ್ರಗಳ ಪುನರ್‌ವಿಂಗಡಣೆ ಹಾಗೂ ಸದಸ್ಯರ ಸಂಖ್ಯೆ ನಿಗದಿಪಡಿಸಲು ಸರ್ಕಾರ ರಚಿಸಿದ್ದ ಆಯೋಗದ ಶಿಫಾರಸುಗಳನ್ನು ಅಂಗೀಕರಿಸಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಸೂಚನೆ ಹೊರಡಿಸಿತ್ತು. ಆದರೆ, ಮೀಸಲಾತಿ ನಿಗದಿಯನ್ನು ಇಲ್ಲಿಯವರೆಗೂ ಅಂತಿಮಗೊಳಿಸಿಲ್ಲ.

- **ಚುನಾವಣೆ ನಡೆಸುವ ಕುರಿತು ಆಯೋಗದ ಮುಂದಿನ ನಡೆ ಏನು?**

ವಿಳಂಬಕ್ಕೆ ಹೈಕೋರ್ಟ್ ಈಗಾಗಲೇ ರಾಜ್ಯ ಸರ್ಕಾರಕ್ಕೆ ದಂಡ ವಿಧಿಸಿದೆ. ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದ ಅವಧಿಯ ಒಳಗೆ ಚುನಾವಣೆ ನಡೆಸಲು ಸಹಕರಿಸಿಲ್ಲ ಎಂದು ಮತ್ತೊಂದು ನ್ಯಾಯಾಂಗ ನಿಂದನೆ ಪ್ರಕರಣವನ್ನು ದಾಖಲಿಸಿದ್ದೇವೆ. ಕೋರ್ಟ್ ಇದೇ ಜನವರಿ 30ರಂದು ಸಮಯ ನಿಗದಿ ಮಾಡಿದೆ. ಅಷ್ಟರ ಒಳಗೆ ಮತಕ್ಷೇತ್ರಗಳ ವಿವರ, ಮೀಸಲಾತಿ ಪಟ್ಟಿ ತಲುಪುವ ನಿರೀಕ್ಷೆ ಇದೆ. ಅವಧಿ ಮುಕ್ತಾಯಗೊಂಡ ಸ್ಥಳೀಯ ಸಂಸ್ಥೆಗಳಿಗೆ ರಾಜ್ಯ ಸರ್ಕಾರ ಕ್ಷೇತ್ರಗಳ ಪಟ್ಟಿ ಹಾಗೂ ಮೀಸಲಾತಿ ಅಧಿಸೂಚನೆ ಹೊರಡಿಸದೇ ಇದ್ದರೆ, ಹಿಂದಿನ ಚುನಾವಣೆಯಲ್ಲಿ ನಿಗದಿ ಮಾಡಲಾಗಿದ್ದ ಕ್ಷೇತ್ರ ವಿಂಗಡಣೆ ಹಾಗೂ ಮೀಸಲಾತಿ ಅನ್ವಯವೇ ಚುನಾವಣೆ ನಡೆಸಬಹುದು ಎಂದು ಸುಪ್ರೀಂ ಕೋರ್ಟ್ ಆದೇಶವಿದೆ. ಜ.30ರ ನಂತರ ಈ ಕುರಿತು ನಿರ್ಧಾರ ತೆಗೆದುಕೊಳ್ಳಲಾಗುವುದು.

- **ಎಷ್ಟು ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬವಾಗಿದೆ?**

ಮೈಸೂರು, ತುಮಕೂರು, ಶಿವಮೊಗ್ಗ, ದಾವಣಗೆರೆ, ಮಂಗಳೂರು ಸೇರಿ ಐದು ಮಹಾನಗರ ಪಾಲಿಕೆಗಳು, 192 ಇತರೆ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕಿದೆ. ಹೊಸ ಪಟ್ಟಣ ಪಂಚಾಯಿತಿಗಳ ಘೋಷಣೆ, ಪುರಸಭೆ, ನಗರಸಭೆಗಳಾಗಿ ಮೇಲ್ದರ್ಜೆಗೆ ಏರಿಕೆ ಮಾಡಿದಾಗ ನಗರಗಳ ಸೆರಗಿನ ಹಲವು ಪಂಚಾಯಿತಿಗಳು ವಿಲೀನವಾಗುತ್ತವೆ. ಅವುಗಳನ್ನು ಸೇರಿಸಿ, ಕೆಲವನ್ನು ಕೈಬಿಟ್ಟು ಆಯಾ ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳನ್ನು ಮರುವಿಂಗಡಣೆ ಮಾಡಬೇಕು. ಇಂತಹ ಕಾರ್ಯಗಳಲ್ಲಿ ವಿಳಂಬವಾಗುತ್ತಿದೆ. ಅಧಿಕಾರಿಗಳು, ಸರ್ಕಾರದ ಇಚ್ಛಾಶಕ್ತಿಯ ಕೊರತೆಯೂ ಇದಕ್ಕೆ ಕಾರಣ ಇರಬಹುದು. ಎರಡು ತಿಂಗಳಲ್ಲಿ ಶೇ 90ರಷ್ಟು ಗ್ರಾಮ ಪಂಚಾಯಿತಿಗಳ ಅವಧಿ ಮುಗಿಯುತ್ತದೆ. ತಾಲ್ಲೂಕು, ಜಿಲ್ಲಾ ಪಂಚಾಯಿತಿಗಳನ್ನು ಪರಿಗಣಿಸಿ ಮೂರೂ ಸ್ತರಗಳ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಬೇಕಿದೆ.

**ಎಲ್ಲ ಮತಗಟ್ಟೆಗಳಿಗೂ 'ವೆಬ್ ಕಾಸ್ಟಿಂಗ್'**

ಮೊದಲೆಲ್ಲ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗುತ್ತಿತ್ತು. ಈ ಬಾರಿ ಪ್ರತಿ ಮತಗಟ್ಟೆಯಲ್ಲೂ ಸಿ.ಸಿ.ಟಿ.ವಿ. ಕ್ಯಾಮೆರಾ ವೆಬ್‌ಕಾಸ್ಟಿಂಗ್ ಕಣ್ಗಾವಲು ಇರಲಿದೆ ಎಂದು ರಾಜ್ಯ ಚುನಾವಣಾ ಆಯುಕ್ತ ಸಂಗ್ರೇಶಿ ಹೇಳಿದರು.

ಹಿಂದೆಲ್ಲ ಮತಪೆಟ್ಟಿಗೆಗಳನ್ನೇ ಹೊತ್ತೊಯ್ದ ಪ್ರಕರಣಗಳು ನಡೆದಿವೆಯಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, 'ಹೊತ್ತುಕೊಂಡು ಹೋಗುವವರಿಗೆ ಮತ ಪೆಟ್ಟಿಗೆ, ಮತಯಂತ್ರ ಅನ್ನುವ ವ್ಯತ್ಯಾಸ ಇರುವುದಿಲ್ಲ. ಅಂತಹ ಪ್ರಕರಣಗಳಿಗೆ ಅವಕಾಶ ಇಲ್ಲದಂತೆ ಜನರು, ಪಕ್ಷಗಳು, ಪೊಲೀಸರ ಸಹಕಾರ ಪಡೆದು ನಿರ್ವಹಣೆ ಮಾಡುವಷ್ಟು ಆಯೋಗ ಸಮರ್ಥವಾಗಿದೆ. ಕಟ್ಟುನಿಟ್ಟಿನ, ಪಾರದರ್ಶಕ ಚುನಾವಣೆಗೆ ಅಗತ್ಯ ಇರುವಷ್ಟು ಸಿಬ್ಬಂದಿ, ಪೊಲೀಸರನ್ನು ಬಳಕೆ ಮಾಡಲಾಗುತ್ತದೆ. ಮತಪತ್ರ ನಕಲಿಗೂ ಅವಕಾಶ ನೀಡುವುದಿಲ್ಲ. ಹಲವು ಕಠಿಣ ಕ್ರಮಗಳನ್ನು ಅಳವಡಿಸಲಾಗುತ್ತದೆ' ಎಂದರು.

- **ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವಂತೆ ರಾಜ್ಯ ಸರ್ಕಾರದ ಒತ್ತಡವಿದೆಯಾ?**

ಖಂಡಿತಾ ಯಾರದೇ ಒತ್ತಡವಿಲ್ಲ. ಚುನಾವಣಾ ಆಯೋಗ ರಾಜ್ಯ ಸರ್ಕಾರದ ಅಧೀನ ಸಂಸ್ಥೆಯಲ್ಲ. ಸಾಂವಿಧಾನಿಕ ಸಂಸ್ಥೆ. ರಾಜಕೀಯ ಪಕ್ಷಗಳು ಚುನಾವಣೆಗೆ ಸಂಬಂಧಿಸಿದ ಹಲವು ವಿಷಯಗಳಲ್ಲಿ ಆಯೋಗಕ್ಕೆ ಮನವಿ ಮಾಡುತ್ತವೆ. ಮತಪತ್ರ ಬಳಸುವಂತೆ ಕೆಲ ಪಕ್ಷಗಳು, ಇವಿಎಂ ಬಳಕೆ ಕುರಿತು ಕೆಲ ಪಕ್ಷಗಳ ಪ್ರತಿನಿಧಿಗಳು ಕಚೇರಿಗೆ ಬಂದು ಮನವಿ ಮಾಡಿದ್ದಾರೆ. ಯಾರೇ ಮನವಿ ಮಾಡಿದರೂ ನಿಯಮಗಳಲ್ಲಿರುವ ಅವಕಾಶದಂತೆ ಆಯೋಗ ಕ್ರಮ ಕೈಗೊಳ್ಳುತ್ತದೆ. ಇವಿಎಂ, ಮತಪತ್ರಗಳ ವಿಚಾರದಲ್ಲೂ ಕೂಲಂಕಷ ಪರಿಶೀಲನೆಯ ಬಳಿಕ ಸ್ವತಂತ್ರ ನಿರ್ಧಾರ ತೆಗೆದುಕೊಳ್ಳಲಾಗಿದೆ. ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಅತ್ಯಂತ ದೊಡ್ಡ ಚುನಾವಣೆ ಗ್ರಾಮ ಪಂಚಾಯಿತಿಗಳ ಚುನಾವಣೆ. 2.97 ಕೋಟಿ ಮತದಾರರು ಭಾಗವಹಿಸುವ ಚುನಾವಣೆಗೆ ಮತಪತ್ರ ಬಳಕೆ ಮಾಡುತ್ತಿದ್ದೇವೆ. ಹಾಗಾಗಿ, ಇತರ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮತಪತ್ರ ಬಳಕೆ ಬಗ್ಗೆ ವಿರೋಧ ವ್ಯಕ್ತ ಮಾಡುವುದು, ವಿವಾದ ಮಾಡುವುದು ಸರಿಯಲ್ಲ. ಇಂತಹ ವಿಚಾರಗಳಲ್ಲಿ ಒತ್ತಡಗಳಿಗೆ ಆಯೋಗ ಮಣಿಯುವುದೂ ಇಲ್ಲ.

## ❖ ವೇತನ ಪರಿಷ್ಕರಣೆಗೆ ಕೇಂದ್ರ ಒಪ್ಪಿಗೆ

**ಸಂದರ್ಭ: ಸರ್ಕಾರಿ ಸ್ವಾಮ್ಯದ ಸಾಮಾನ್ಯ ವಿಮಾ ಕಂಪನಿಗಳು ಮತ್ತು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ (ನಬಾರ್ಡ್) ಉದ್ಯೋಗಿಗಳ ವೇತನ ಪರಿಷ್ಕರಣೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ನಬಾರ್ಡ್‌ನ ನಿವೃತ್ತ ನೌಕರರ ಪಿಂಚಣಿ ಸಹ ಪರಿಷ್ಕರಣೆ ಮಾಡಲಾಗಿದೆ.**

- ಈ ಪರಿಷ್ಕರಣೆಯಿಂದ 46,322 ಉದ್ಯೋಗಿಗಳು, 23,570 ಪಿಂಚಣಿದಾರರು ಮತ್ತು 23,260 ಕೌಟುಂಬಿಕ ಪಿಂಚಣಿದಾರರಿಗೆ ವೇತನ ಪರಿಷ್ಕರಣೆಯ ಪ್ರಯೋಜನ ದೊರೆಯಲಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಶುಕ್ರವಾರ ತಿಳಿಸಿದೆ.
- ಸರ್ಕಾರಿ ಸ್ವಾಮ್ಯದ ವಿಮಾ ಕಂಪನಿಗಳ ಉದ್ಯೋಗಿಗಳಿಗೆ ಈ ಪರಿಷ್ಕರಣೆಯು 2022ರ ಆಗಸ್ಟ್ 1ರಿಂದ ಅನ್ವಯವಾಗಲಿದೆ.
- ನಬಾರ್ಡ್ ಸಿಬ್ಬಂದಿಗೆ 2022ರ ನ. 1ರಿಂದ ಅನ್ವಯ ಆಗಲಿದೆ.

## ❖ ಡಬ್ಲ್ಯುಎಚ್‌ಒದಿಂದ ಅಮೆರಿಕ ಹೊರಕ್ಕೆ

**ಸಂದರ್ಭ: ವಿಶ್ವ ಆರೋಗ್ಯ ಸಂಸ್ಥೆಯಿಂದ(ಡಬ್ಲ್ಯುಎಚ್‌ಒ) ಹೊರಬರುವ ಪ್ರಕ್ರಿಯೆಯನ್ನು ಅಮೆರಿಕ ಪೂರ್ಣಗೊಳಿಸಿದೆ ಎಂದು ಅಧಿಕಾರಿಗಳು ಗುರುವಾರ ಹೇಳಿದ್ದಾರೆ.**

- ಡೊನಾಲ್ಡ್ ಟ್ರಂಪ್ ಅವರು ಕಳೆದ ವರ್ಷ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡವೇಳೆ, 'ಅಮೆರಿಕವು ವಿಶ್ವ ಆರೋಗ್ಯಸಂಸ್ಥೆಯೊಂದಿಗೆ ಹೊಂದಿರುವ 78 ವರ್ಷಗಳ ನಂಟನ್ನು ಕೊನೆಗೊಳಿಸಲಿದೆ' ಎಂದು ಘೋಷಿಸಿದ್ದರು. ಅದು, ಈಗ ಕಾರ್ಯಗತಗೊಂಡಂತಾಗಿದೆ.
- ಸಂಸ್ಥೆಗೆ ಅಮೆರಿಕ ತನ್ನ ಪಾಲಿನ ವಂತಿಗೆಯನ್ನು ಬಾಕಿ ಉಳಿಸಿಕೊಂಡಿದೆ. ಈವೊತ್ತ 13 ಕೋಟಿಡಾಲರ್‌ಗೂ (ಅಂದಾಜು ₹1,200 ಕೋಟಿ) ಹೆಚ್ಚು ಎಂದುಡಬ್ಲ್ಯುಎಚ್‌ಒಹೇಳಿದೆ.
- 'ಈ ಬೆಳವಣಿಗೆ ಹಲವು ಸಮಸ್ಯೆಗಳಿಗೆ ಕಾರಣವಾಗಲಿದೆ.ವಿವಿಧ ದೇಶಗಳಲ್ಲಿ ಕಂಡುಬರುವ ಸೋಂಕು/ರೋಗಗಳ ಕುರಿತು ಅಧ್ಯಯನ ಕೈಗೊಳ್ಳಲು, ಔಷಧಿ/ಲಸಿಕೆ ಅಭಿವೃದ್ಧಿಪಡಿಸುವುದಕ್ಕೆ ಅಮೆರಿಕದ ವಿಜ್ಞಾನಿಗಳಿಗೆ ಹಾಗೂ ಔಷಧ ಕಂಪನಿಗಳಿಗೆ ಕಷ್ಟವಾಗಲಿದೆ' ಎಂದುಜಾರ್ಜ್‌ಟೌನ್ ವಿಶ್ವವಿದ್ಯಾಲಯದ ಸಾರ್ಜನಿಕ ಆರೋಗ್ಯಕಾನೂನು ತಜ್ಞ ಲಾರೆನ್ಸ್ ಗಾಸ್ಟಿನ್ ಹೇಳಿದ್ದಾರೆ.

## ❖ ವೆನೆಜುವೆಲಾ: ತೈಲ ಮಸೂದೆ ಚರ್ಚೆ

**ಸಂದರ್ಭ: ತೈಲದ ಮೇಲೆ ರಾಷ್ಟ್ರೀಯ ಹಿಡಿತ ಸಡಿಲಿಸುವ ಮಸೂದೆಯ ಕುರಿತ ಚರ್ಚೆಯನ್ನು ವೆನೆಜುವೆಲಾ ಗುರುವಾರ ಆರಂಭಿಸಿತು.**

- ಸಮಾಜವಾದಿ ನಾಯಕ ಹ್ಯೂಗೋ ಚಾವೆಜ್ ಅವರು 2007ರಲ್ಲಿ ತೈಲೋದ್ಯಮವನ್ನು ರಾಷ್ಟ್ರೀಕರಣಗೊಳಿ-ಸಿದ ನಂತರ ಮೊದಲ ಬಾರಿಗೆ ಈ ಕುರಿತ ಚರ್ಚೆನಡೆದಿದೆ.
- ಈ ಮಸೂದೆಯು ತೈಲ ಉದ್ಯಮದಲ್ಲಿ ಖಾಸಗಿ ಕಂಪನಿಗಳಿಗೆ ಹೂಡಿಕೆ ಮಾಡಲು ಮತ್ತು ಹೂಡಿಕೆ ವಿವಾದಗಳಿಗೆ ಅಂತರರಾಷ್ಟ್ರೀಯ ಮಧ್ಯಸ್ಥಿಕೆಯನ್ನು ಸ್ಥಾಪಿಸಲು ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ.
- ವೆನೆಜುವೆಲಾದ ಅಧ್ಯಕ್ಷರಾಗಿದ್ದ ನಿಕೋಲಸ್ ಮಡೂರೊ ಅವರನ್ನು ಈ ತಿಂಗಳ ಆರಂಭದಲ್ಲಿ ಟ್ರಂಪ್ ಆಡಳಿತವು ಸೆರೆ ಹಿಡಿದಿತ್ತು.

Dr. Rajkumar IAS/KAS Academy

## ❖ ತಕ್ಷಣವೇ ಸಿಗಲಿದೆ ಮ್ಯುಟೇಷನ್ ಪ್ರತಿ

**ಸಂದರ್ಭ: ಕೃಷಿ ಭೂಮಿ ಸೇರಿದಂತೆ ಯಾವುದೇ ಸ್ವತ್ತಿಗೆ ಸ್ವಯಂ ಚಾಲಿತವಾಗಿ ಮ್ಯುಟೇಷನ್ ಪಡೆಯಬಹುದಾದ ಹೊಸ ವ್ಯವಸ್ಥೆಗೆ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಮಂಗಳವಾರ ಚಾಲನೆ ನೀಡಿದರು.**

- ಚಾಲಿತ ಎಲ್ಲ 7 ದಿನಗಳ ಮತ್ತು 15 ದಿನಗಳ ನೋಟಿಸ್ ಅವಧಿ ಹೊಂದಿರುವ ಮ್ಯುಟೇಷನ್‌ಗಳನ್ನು ನೋಟಿಸ್ ಅವಧಿ ಮುಕ್ತಾಯವಾದ ನಂತರ ಮಾನವ ಹಸ್ತಕ್ಷೇಪವಿಲ್ಲದೆ ಸ್ವಯಂ ತಂತ್ರಾಂಶದ ಮೂಲಕ ಸರ್ವರ್ ಸಹಿ ಇರುವ ಮ್ಯುಟೇಷನ್ ಪಡೆಯ ಬಹುದಾಗಿದೆ. ಇದರಿಂದಾಗಿ ಕ್ರಯ, ವಿಭಾಗ, ದಾನ, ಪೌತಿ, ಉಯಿಲುಗಳ ಮ್ಯುಟೇಷನ್ ಸ್ವಯಂಚಾಲಿತವಾಗಿ ಪಡೆಯಬಹುದು.
- ಒಂದು ವೇಳೆ 7 ಕೆಲಸದ ದಿನಗಳು ಅದವಾ 15 ಕೆಲಸದ ದಿನಗಳ ನೋಟಿಸ್ ಅವಧಿಯೊಳಗೆ ಕಂದಾಯ ನಿರೀಕ್ಷಕರು (ಸರ್ಕಾರಿ ಆಕ್ಷೇಪ) ಅಥವಾ ಸಾರ್ವಜನಿಕರು ತಕರಾರು ಸಲ್ಲಿಸಿದರೆ, ಅಂತಹ ಮ್ಯುಟೇಷನ್ ಗಳನ್ನು ಪೂರ್ಣಗೊಳಿಸದೆ, ಆರ್‌ಸಿಸಿಎಂಎಸ್ ತಂತ್ರಾಂಶದ ಮೂಲಕ ತಹಶೀಲ್ದಾರ್ ನ್ಯಾಯಾಲಯಕ್ಕೆ ಪ್ರಕರಣವನ್ನು ವರ್ಗಾಯಿಸಲಾಗುತ್ತದೆ. ತಹಶೀಲ್ದಾರರ ನಿರ್ಧಾರದಂತೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ.
- ಈ ಹಿಂದೆ ಮ್ಯುಟೇಷನ್ ಗಳಿಗೆ ಆಕ್ಷೇಪಣೆ ಇದ್ದಲ್ಲಿ ಅಥವಾ ಅನುಮೋದನೆ ನೀಡಬೇಕಾದಲ್ಲಿ, ರಾಜಸ್ವ ನಿರೀಕ್ಷಕರು ಖುದ್ದಾಗಿ ತಾಲ್ಲೂಕು ಕಚೇರಿಗಳಿಗೆ ಬಂದು ಸಲ್ಲಿಸಬೇಕಾ ಗಿತ್ತು. ಈಗ ರಾಜಸ್ವ ನಿರೀಕ್ಷಕರಿಗೆ ಲಾಗಿನ್ ನೀಡಿದ್ದು, ಯಾವುದೇ ಸ್ಥಳದಿಂದ ಆಕ್ಷೇಪಣೆ ಸಲ್ಲಿಸಲು ತಂತ್ರಾಂಶದಲ್ಲಿ ಅವಕಾಶ ನೀಡಲಾಗಿದೆ.

## ❖ ಕೇರಳ ಶೀಘ್ರದಲ್ಲೇ ಆಗಲಿದೆ 'ಕೇರಳಂ': 'ಕೇರಳಂ' ಹೆಸರಿಗೆ ಸಂಪುಟ ಒಪ್ಪಿಗೆ

**ಸಂದರ್ಭ: ಕೇರಳ ಶೀಘ್ರದಲ್ಲೇ 'ಕೇರಳಂ' ಆಗಲಿದೆ. ರಾಜ್ಯದ ಮರು ನಾಮಕರಣ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಚಾಲನೆ ನೀಡಿದೆ.**

- ಕೇರಳ ಸೇರಿದಂತೆ ಪಂಚ ರಾಜ್ಯಗಳ ಚುನಾವಣಾ ವೇಳಾಪಟ್ಟಿ ಪ್ರಕಟಕ್ಕೆ ತಿಂಗಳು ಉಳಿದಿರುವಾಗ, ದಕ್ಷಿಣದ ರಾಜ್ಯದ ಹೆಸರು ಬದಲಾವಣೆಯ ನಿರ್ಧಾರವನ್ನು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಳ್ಳ ಲಾಯಿತು. ಪ್ರಧಾನಿಯವರ ಹೊಸ ಕಚೇರಿ 'ಸೇವಾ ತೀರ್ಥ'ದಲ್ಲಿ ಮೊದಲ ಸಂಪುಟ ಸಭೆ ನಡೆಯಿತು.
- ಕೇರಳ ರಾಜ್ಯದ ಹೆಸರನ್ನು 'ಕೇರಳಂ' ಎಂದು ಬದಲಾಯಿಸಲು ಕೇಂದ್ರ ಸಂಪುಟ ಒಪ್ಪಿಗೆ ನೀಡಿದೆ.
- ಕೇರಳದ ಹೆಸರನ್ನು ಅಧಿಕೃತ ವಾಗಿ 'ಕೇರಳಂ' ಎಂದು ಬದಲಾಯಿಸುವಂತೆ ಕೇಂದ್ರವನ್ನು ಒತ್ತಾಯಿಸುವ ನಿರ್ಣಯ 'ವನ್ನು ಕೇರಳ ವಿಧಾನಸಭೆಯು 2023ರ * ಅಗಸ್ಟ 9ರಂದು ಅಂಗೀಕರಿಸಿತ್ತು.


ಮುಂದಿನ ಪ್ರಕ್ರಿಯೆ ಏನು?

'ಕೇರಳ (ಹೆಸರು ಬದಲಾವಣೆ) ಮಸೂದೆ- 2026'ಯನ್ನು ರಾಷ್ಟ್ರಪತಿ ಅವರು ಸಂವಿಧಾನದ 3ನೇ ವಿಧಿ ಅಡಿಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಲು ಕೇರಳ ವಿಧಾನಸಭೆಗೆ ಕಳುಹಿಸುತ್ತಾರೆ. ವಿಧಾನಸಭೆಯ ಅಭಿಪ್ರಾಯ ಸ್ವೀಕರಿಸಿದ ಬಳಿಕ ಕೇಂದ್ರ ಸರ್ಕಾರವು ಮುಂದಿನ ಕ್ರಮ ಕೈಗೊಳ್ಳುತ್ತದೆ. ಮಸೂದೆಯನ್ನು ಸಂಸತ್ತಿನ ಉಭಯ ಸದನಗಳಲ್ಲಿ ಮಂಡಿಸಲು ರಾಷ್ಟ್ರಪತಿಗಳ ಶಿಫಾರಸನ್ನು ಪಡೆಯಲಾಗುತ್ತದೆ.

**ಈ ಹಿಂದೆ ಹೆಸರು ಬದಲಾವಣೆ**

ಈ ಹಿಂದೆ ಎರಡು ರಾಜ್ಯಗಳ ಹೆಸರನ್ನು ಬದಲಾಯಿಸಲಾಗಿತ್ತು. ಕ್ರಮವಾಗಿ ಉತ್ತರಾಂಚಲ, ಒರಿಸ್ಸಾ ರಾಜ್ಯಗಳ ಹೆಸರು ಉತ್ತರಾಖಂಡ ಮತ್ತು ಒಡಿಶಾ ಎಂದು ಬದಲಾಗಿತ್ತು. ಕೇಂದ್ರಾಡಳಿತ ಪ್ರದೇಶ ಪಾಂಡಿಚೇರಿಯ ಹೆಸರನ್ನು ಪುದುಚೇರಿ ಎಂದು ಬದಲಾಯಿಸಲಾಗಿತ್ತು.

**ಪಶ್ಚಿಮ ಬಂಗಾಳ ಬೇಡಿಕೆಗಿಲ್ಲ ಮನ್ನಣೆ**

ಕೇರಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರ ಒಪ್ಪಿಕೊಂಡಿದ್ದರೂ, ಪಶ್ಚಿಮ ಬಂಗಾಳದ ಬೇಡಿಕೆಗೆ ಈವರೆಗೆ ಮನ್ನಣೆ ನೀಡಿಲ್ಲ.

ರಾಜ್ಯದ ಹೆಸರನ್ನು ಬಂಗಾಳಿಯಲ್ಲಿ 'ಬಾಂಗ್ಲಾ', ಇಂಗ್ಲಿಷ್‌ನಲ್ಲಿ 'ಬಂಗಾಳ' ಮತ್ತು ಹಿಂದಿಯಲ್ಲಿ 'ಬಂಗಾಳಿ' ಎಂದು ಬದಲಾಯಿಸಬೇಕೆಂಬ ಪಶ್ಚಿಮ ಬಂಗಾಳ ಸರ್ಕಾರ 2018ರಲ್ಲಿ ಬೇಡಿಕೆ ಮುಂದಿಟ್ಟಿತ್ತು. ಆದರೆ, ವಿವಿಧ ಭಾಷೆಗಳಲ್ಲಿ ಮೂರು ಹೆಸರುಗಳನ್ನು ಹೊಂದುವುದನ್ನು ಸರಿಯಲ್ಲ ಎಂಬ ಕಾರಣಕ್ಕೆ ಕೇಂದ್ರ ಸರ್ಕಾರವು ಈ ಪ್ರಸ್ತಾವವನ್ನು ಅಂಗೀಕರಿಸಿಲ್ಲ.


- 'ಭಾಷೆಗಳ ಆಧಾರದಲ್ಲಿ 1956ರ ನ.1ರಂದು ರಾಜ್ಯಗಳನ್ನು ರಚಿಸಲಾಗಿತ್ತು. ಕೇರಳ ಪಿರವಿ ದಿನವನ್ನೂ ನ.1 ರಂದು ಆಚರಿಸಲಾಗುತ್ತದೆ. ರಾಜ್ಯವನ್ನು ಮಲಯಾಳ ಭಾಷೆಯಲ್ಲಿ 'ಕೇರಳಂ* ಎಂದೇ ಕರೆಯಲಾಗುತ್ತಿದೆ. ಆದರೆ, ಇತರ ಭಾಷೆಗಳಲ್ಲಿ ರಾಜ್ಯದ ಹೆಸರು ಇನ್ನೂ ಕೇರಳವಾಗಿದೆ. ಸಂವಿಧಾನದ 3ನೇ ವಿಧಿದಡಿ 'ಕೇರಳಂ' ಎಂದು ತಿದ್ದುಪಡಿ ಮಾಡಲು ಮತ್ತು ಸಂವಿಧಾನದ 8ನೇ ವಿಧಿಯಡಿದಲ್ಲಿ ಉಲ್ಲೇಖಿಸಿರುವ ಎಲ್ಲ ಭಾಷೆಗಳಲ್ಲಿ 'ಕೇರಳಂ' ಎಂದು ಮರು ನಾಮಕರಣ ತಕ್ಷಣ ಮಾಡಲು ಕ್ರಮ ಕೈಗೊಳ್ಳುವಂತೆ ವಿಧಾನಸಭೆ ಸರ್ವಾನುಮತದಿಂದ ಕೇಂದ್ರ ಸರ್ಕಾರ ವನ್ನು ಕೋರುತ್ತದೆ' ಎಂದು ನಿರ್ಣಯ ತೆಗೆದುಕೊಂಡಿತ್ತು.

Dr. Rajkumar's IAS Academy

- ಮೊದಲ ಬಾರಿ ಕಳುಹಿಸಿದ್ದನಿರ್ಣಯವನ್ನು ಪರಿಶೀಲಿಸಿದ್ದ ಕೇಂದ್ರ ಗೃಹ ಸಚಿವಾಲಯವು ಕೆಲ ತಾಂತ್ರಿಕ ಬದಲಾವಣೆ ಮಾಡುವಂತೆ ಹೇಳಿತ್ತು. ಹೀಗಾಗಿ, ಕೇರಳ ವಿಧಾನಸಭೆಯು 2024ರ ಜೂನ್ 24ರಂದು ಮತ್ತೊಮ್ಮೆ ನಿರ್ಣಯ ಅಂಗೀಕರಿಸಿತ್ತು.

## ❖ ಎಚ್‌ಪಿವಿ ಲಸಿಕೆ ಅಭಿಯಾನ ಶೀಘ್ರ

**ಸಂದರ್ಭ: ಗರ್ಭಕಂಠದ ಕ್ಯಾನ್ಸರ್ ತಡೆಗೆ ಕೇಂದ್ರ ಸರ್ಕಾರದಿಂದ ಕ್ರಮ 14 ವರ್ಷದ ಹೆಣ್ಣುಮಕ್ಕಳಿಗೆ ಎಚ್‌ಪಿವಿ ಲಸಿಕೆ (ಗರ್ಭಕಂಠದ ಕ್ಯಾನ್ಸರ್ ತಡೆಯಲು) ನೀಡುವ ವಿಶೇಷ ಅಭಿಯಾನವನ್ನು ಕೇಂದ್ರ ಸರ್ಕಾರವು ಶೀಘ್ರದಲ್ಲಿಯೇ ಆರಂಭಿಸಲಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.**




- ಪ್ರತಿವರ್ಷ ಎಲ್ಲ ಸಾಮಾಜಿಕ ಆರ್ಥಿಕ ವರ್ಗದ 1.15 ಕೋಟಿ ಹೆಣ್ಣುಮಕ್ಕಳಿಗೆ ಲಸಿಕೆಯನ್ನು ಉಚಿತವಾಗಿ ನೀಡ ಲಾಗುವುದು ಎಂದುಮಾಹಿತಿ ನೀಡಿವೆ.
- ಭಾರತೀಯ ಮಹಿಳೆಯರಲ್ಲಿ ಅತಿ ಹೆಚ್ಚಾಗಿ ಕಂಡುಬರುವ ಕ್ಯಾನ್ಸರ್‌ಗಳಲ್ಲಿ ಗರ್ಭಕಂಠದ ಕ್ಯಾನ್ಸರ್ ಪ್ರಮಾಣ ಎರಡನೆಯದಾಗಿದೆ. ಹೆಣ್ಣುಮಕ್ಕಳನ್ನು ಇದರ ಕಬಂಧಬಾಹುವಿನಿಂದ ರಕ್ಷಿಸುವ ಉದ್ದೇಶದಿಂದ ವರ್ಷಗಟ್ಟಲೆ ಲಸಿಕೆಯ ಪರೀಕ್ಷೆ ನಡೆಸಿದ್ದ ಕೇಂದ್ರ ಸರ್ಕಾರ, ಈ ವಾರದಿಂದಲೇ ರಾಷ್ಟ್ರದಾದ್ಯಂತ ಲಸಿಕೆ ಅಭಿಯಾನ ಆರಂಭಿಸಲು ಮುಂದಾಗಿದೆ.
- ಇದು ವಿಶೇಷ ಅಭಿಯಾನವಾಗಿದ್ದು, ಸಾರ್ವತ್ರಿಕ ಲಸಿಕೆ ಕಾರ್ಯಕ್ರಮದ ಭಾಗ ಅಲ್ಲ. ಮೆರ್ಕ್ ಕಂಪನಿಯ ಗಾರ್ಡಸಿಲ್ ಲಸಿಕೆಯನ್ನು ಪೂರೈಸಲಾಗುತ್ತದೆ.
- ಜನನ ಪ್ರಮಾಣಪತ್ರ, ಆಧಾರ್ ಅಥವಾ ಪಡಿತರ ಚೀಟಿಯಂತಹ ಸರ್ಕಾರಿ ಗುರುತಿನ ಚೀಟಿಯ ಮೇಲೆ ನಮೂದಾಗಿರುವ ಜನ್ಮ ದಿನಾಂಕದ ಆಧಾರದಲ್ಲಿ ವಯಸ್ಸನ್ನು ನಿರ್ಧರಿಸಿ ಲಸಿಕೆಯನ್ನು ವಿತರಿಸಲಾಗುತ್ತದೆ.
- ಈ ಲಸಿಕೆಯು ಜಗತ್ತಿನಾದ್ಯಂತ ವ್ಯಾಪಕವಾಗಿ ಸಂಶೋಧನೆಗೆ ಒಳಪಟ್ಟಿದ್ದು, ಶೇ 93 100ರಷ್ಟು ಪರಿಣಾಮಕಾರಿಯಾಗಿ ಕ್ಯಾನ್ಸರ್ ತಡೆಗಟ್ಟುತ್ತದೆ ಎಂದು ದೃಢಪಟ್ಟಿದೆ.
- 'ಶಿಫಾರಸು ಮಾಡಲಾದ ನಿರ್ದಿಷ್ಟ ವಯೋಮಾನದ ಹೆಣ್ಣುಮಕ್ಕಳಿಗೆ ಈ ಲಸಿಕೆ ನೀಡಿದಲ್ಲಿ ಗರ್ಭಕಂಠ ಕ್ಯಾನ್ಸರ್‌ನಿಂದ ದೀರ್ಘಕಾಲದವರೆಗೆ ರಕ್ಷಣೆ ಪಡೆಯಬಹುದು ಎಂದು ಜಾಗತಿಕ ಮತ್ತು ಭಾರತೀಯ ವೈಜ್ಞಾನಿಕ ಸಾಕ್ಷ್ಯಗಳು ದೃಢಪಡಿಸಿವೆ' ಎಂದು ಮೂಲಗಳು ತಿಳಿಸಿವೆ.
- ಈ ಲಸಿಕೆ ವಿತರಣೆಗೆ 2006ರಲ್ಲಿ ಪರವಾನಗಿ ಲಭಿಸಿದ್ದು, ಈವರೆಗೆ ಜಗತ್ತಿನಾದ್ಯಂತ 50 ಕೋಟಿ ಡೋಸ್ ಪೂರೈಕೆ ಮಾಡಲಾಗಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2024ರ ಬಜೆಟ್ ಭಾಷಣದಲ್ಲಿ ಎಚ್.ಪಿವಿ ಲಸಿಕೆ ಅಭಿಯಾನದ ಬಗ್ಗೆ ಘೋಷಣೆ ಮಾಡಿದ್ದರು.




# ಮೊಬೈಲ್ ನಿಯಂತ್ರಣ ಸಾಧ್ಯವೇ?

• ಬಿ.ವಿ.ಶ್ರೀನಾಥ್, ಸೂರ್ಯನಾರಾಯಣ ವಿ.

ಇತ್ತೀಚೆಗೆ ದೆಹಲಿಯಲ್ಲಿ ನಡೆದ 'ಎಐ ಇಂಪ್ಯಾಕ್ಟ್ ಶೃಂಗಸಭೆ'ಯಲ್ಲಿ ಭಾಗವಹಿಸಿದ್ದ ಫ್ರಾನ್ಸ್ ಅಧ್ಯಕ್ಷ ಇಮ್ಯಾನುವೆಲ್ ಮ್ಯಾಕ್ರನ್ ಅವರು, 15 ವರ್ಷದವರೆಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳನ್ನು ನಿರ್ಬಂಧಿಸಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದರು. ಈ ವಿಚಾರದಲ್ಲಿ ಭಾರತವು ಫ್ರಾನ್ಸ್ ಮತ್ತು ಇತರ ದೇಶಗಳೊಂದಿಗೆ ಕೈಜೋಡಿಸಲಿದೆ ಎಂದೂ ಅವರು ಭರವಸೆ ವ್ಯಕ್ತಪಡಿಸಿದ್ದರು. ಪ್ರಧಾನಿ ನರೇಂದ್ರ ಮೋದಿ ಅವರು ಮ್ಯಾಕ್ರನ್ ಅವರ ಮಾತುಗಳಿಗೆ ಸಹಮತ ವ್ಯಕ್ತಪಡಿಸಿದ್ದರು. ಇದಾದ ಕೆಲವೇ ದಿನಗಳಲ್ಲಿ ಕರ್ನಾಟಕ ಸರ್ಕಾರವು ಮಕ್ಕಳ ಮೊಬೈಲ್ ಬಳಕೆ ನಿರ್ಬಂಧಿಸುವ ವಿಚಾರದಲ್ಲಿ ಒಂದು ಹೆಜ್ಜೆ ಮುಂದಿಟ್ಟಿದೆ. 16 ವರ್ಷದವರೆಗಿನ ಮಕ್ಕಳ ಮೊಬೈಲ್ ಬಳಕೆಯ ಮೇಲೆ ನಿರ್ಬಂಧ ಹೇರುವುದರ ಬಗ್ಗೆ ಪರಿಶೀಲನೆ ನಡೆಸಲು ಸಮಿತಿಯನ್ನು ರಚಿಸಲಾಗುವುದು ಎಂದು ಸರ್ಕಾರ ಹೇಳಿದೆ.

ರಾಜ್ಯದಲ್ಲಿ ಮೊಬೈಲ್ ನಿರ್ಬಂಧದ ಅಗತ್ಯವನ್ನು ಪ್ರತಿಪಾದಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಆಸ್ಟ್ರೇಲಿಯಾದ ನಿದರ್ಶನವನ್ನು ಉಲ್ಲೇಖಿಸಿದ್ದಾರೆ. ಜಗತ್ತಿನಲ್ಲಿ ಮೊಬೈಲ್ ದುಷ್ಪರಿಣಾಮಗಳನ್ನು ತಡೆಯುವ ದಿಸೆಯಲ್ಲಿ ಕ್ರಮ ಕೈಗೊಂಡ ಮೊದಲ ದೇಶ ಆಸ್ಟ್ರೇಲಿಯಾ. ದೇಶದ 10ರಿಂದ 15 ವರ್ಷದವರೆಗಿನ ಶೇ 96ರಷ್ಟು ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಿದ್ದಾರೆ ಎಂದು, ಈ ಪೈಕಿ ಶೇ 10ರಷ್ಟು ಮಕ್ಕಳು ಹಾನಿಕಾರಕ ಮಾಹಿತಿ/ವಿಡಿಯೊ ಇತ್ಯಾದಿಗಳ ಸಂಪರ್ಕಕ್ಕೆ ಬಂದಿದ್ದಾರೆ ಎಂದು ಅಧ್ಯಯನವೊಂದು ಹೇಳಿತ್ತು. ಈ ಕಾರಣಕ್ಕೆ 16 ವರ್ಷದ ಒಳಗಿನ ಮಕ್ಕಳು ಕೆಲವು ಸಾಮಾಜಿಕ ಜಾಲತಾಣಗಳನ್ನು ಬಳಸುವುದು ನಿಷೇಧಿಸಿ 2025ರ ಡಿಸೆಂಬರ್‌ನಲ್ಲಿ ಆಸ್ಟ್ರೇಲಿಯಾ ಸರ್ಕಾರ ಆದೇಶ ಹೊರಡಿಸಿತು.

ಮಕ್ಕಳ ಚಾಲ್ತಿಯಲ್ಲಿರುವ ಖಾತೆಗಳನ್ನು ಬಂದ್ ಮಾಡಲಾಗುವುದು ಮತ್ತು ಹೊಸ ಖಾತೆಗಳನ್ನು ತೆರೆಯುವುದನ್ನು ನಿರ್ಬಂಧಿಸಲಾಗುವುದು ಎಂದು ಘೋಷಿಸಿತು. ನಿಯಮದ ಮೀರಿದರೆ ಮಕ್ಕಳಿಗೆ, ಅವರ ಪೋಷಕರಿಗೆ ಯಾವುದೇ ಶಿಕ್ಷೆ ಇಲ್ಲ. ಬದಲಿಗೆ, ಸಾಮಾಜಿಕ ಜಾಲತಾಣಗಳ ಕಂಪನಿಗಳಿಗೆ ದಂಡ ವಿಧಿಸಲಾಗುತ್ತದೆ ಎಂದಿತು. ಪರಿಣಾಮವಾಗಿ, ಮೆಟಾ ಮತ್ತು ಇತರ ಕಂಪನಿಗಳು ಲಕ್ಷಾಂತರ ಮಕ್ಕಳ ಖಾತೆಗಳನ್ನು ನಿರ್ಬಂಧಿಸಿದವು. ವಯಸ್ಸು ಖಚಿತಪಡಿಸಿಕೊಳ್ಳುವುದು ಹೇಗೆ, ದತ್ತಾಂಶದ ಸುರಕ್ಷತೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಕಂಪನಿಗಳ ತಕರಾರುಗಳೂ ವ್ಯಕ್ತವಾಗಿವೆ. ಅದರ ಬೆನ್ನಲ್ಲೇ, ಸರ್ಕಾರದ ಕ್ರಮದಿಂದ ಹೆಚ್ಚಿನ ಪ್ರಯೋಜನವೇನೂ ಇಲ್ಲ ಎನ್ನುವ ಮಾತುಗಳೂ ಕೇಳಿಬಂದಿವೆ. ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿಷೇಧಿಸುವುದಕ್ಕಿಂತ ಅದರ ಪರಿಣಾಮಕಾರಿ ಬಳಕೆಗೆ ಕ್ರಮ ಜರುಗಿಸಬೇಕಿತ್ತು ಎನ್ನುವ ಅಭಿಪ್ರಾಯ ಅಲ್ಲಿ ಬಲವಾಗಿದೆ.

ಚಿಲಿಯು ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳಲ್ಲಿ ಮೊಬೈಲ್ ಫೋನ್ ಬಳಕೆಯನ್ನು ನಿಷೇಧಿಸಿದೆ. 2026ರ ಶೈಕ್ಷಣಿಕ ವರ್ಷದಿಂದ ನಿಷೇಧವು ಜಾರಿಗೆ ಬರಲಿದೆ ಎಂದು ಸರ್ಕಾರ ಪ್ರಕಟಿಸಿದೆ. ದಕ್ಷಿಣ ಕೊರಿಯಾ ದೇಶದಾದ್ಯಂತ ಶಾಲೆಗಳಲ್ಲಿ ಮೊಬೈಲ್ ಫೋನ್‌ಗಳನ್ನು ಮತ್ತು ಸ್ಮಾರ್ಟ್ ಸಾಧನಗಳನ್ನು ನಿಷೇಧಿಸಿದೆ. 2026ರ ಮಾರ್ಚ್‌ನಿಂದ ನಿಷೇಧ ಜಾರಿಗೆ ಬರಲಿದೆ. ಫ್ರಾನ್ಸ್, ಬ್ರೆಜಿಲ್, ಹಂಗರಿ, ನೆದರ್ಲೆಂಡ್ಸ್, ಚೀನಾ ಶಾಲೆಗಳಲ್ಲಿ ಮೊಬೈಲ್ ಬಳಕೆಯನ್ನು ವಿವಿಧ ಹಂತಗಳಲ್ಲಿ ನಿಷೇಧಿಸಿವೆ.

ಆದರೆ, ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆ ನಿರ್ಬಂಧಿಸುವುದರ ಬಗ್ಗೆ ವಿವಿಧ ದೇಶಗಳಲ್ಲಿ ಅಧ್ಯಯನ-ಪ್ರಯೋಗಗಳು ನಡೆದಿದ್ದು, ಭಿನ್ನವಾದ ಫಲಿತಾಂಶ/ನಿಲುವುಗಳು ವ್ಯಕ್ತವಾಗಿವೆ. ಮೊಬೈಲ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸುವುದು ಎಷ್ಟರ ಮಟ್ಟಿಗೆ ಕಾರ್ಯಸಾಧು ಎನ್ನುವ ಪ್ರಶ್ನೆ ಮೂಡಿದೆ. ಮೊಬೈಲ್ ನಿಷೇಧಕ್ಕಿಂತ ಅದರ ಪರಿಣಾಮಕಾರಿ ಬಳಕೆಗೆ ನಿಯಮ ರೂಪಿಸಬೇಕು; ಸಾಮಾಜಿಕ ಜಾಲತಾಣಗಳ ಬಳಕೆಯ ಮೇಲೆ ನಿಯಂತ್ರಣ ಹೇರಬೇಕು; ಮಕ್ಕಳು ಹಾನಿಕಾರಕ ವಿಷಯಗಳ ಸಂಪರ್ಕಕ್ಕೆ ಬಾರದಂತೆ ಕ್ರಮ ಜರುಗಿಸಬೇಕು ಎನ್ನುವುದು ತಜ್ಞರ ಅಭಿಪ್ರಾಯ.

ಆಧಾರ: ಯುನಿಸೆಫ್ ವೆಬ್‌ಸೈಟ್, ಬಿಬಿಸಿ, ಟೆಕ್‌ಕ್ರಂಚ್.ಕಾಂ, ಮಾಧ್ಯಮ ವರದಿಗಳು



**ಶಿಕ್ಷಣ ವ್ಯವಸ್ಥೆಯ ಭಾಗವಾಗಿರುವ ಮೊಬೈಲ್**

**ನಿಯಂತ್ರಿತ ಬಳಕೆಗೆ ಹಲವರ ಒಲವು**

ಭಾರತದಲ್ಲಿ ಆಂಧ್ರಪ್ರದೇಶ ಸರ್ಕಾರವು ಈ ದಿಸೆಯಲ್ಲಿ ಕಾರ್ಯೋನ್ಮುಖವಾದ ಮೊದಲ ರಾಜ್ಯವಾಗಿದೆ. ಮಕ್ಕಳು ಸಾಮಾಜಿಕ ಜಾಲತಾಣ ಬಳಸುವುದಕ್ಕೆ ನಿಯಂತ್ರಣ ಹೇರಲು ಮುಂದಾಗಿರುವ ತೆಲುಗು ದೇಶಂ ಪಕ್ಷದ ನೇತೃತ್ವದ ಸರ್ಕಾರವು, ಈ ಸಂಬಂಧ ಚಾಲ್ತಿಯಲ್ಲಿರುವ ಕಾನೂನುಗಳನ್ನು ಪರಿಶೀಲಿಸಲು ಸಚಿವ ನಾರಾ ಲೋಕೇಶ್ ನೇತೃತ್ವದಲ್ಲಿ ಸಮಿತಿಯೊಂದನ್ನು ರಚಿಸಿದೆ. ಗುಜರಾತ್ ರಾಜ್ಯವೂ ಈ ದಿಸೆಯಲ್ಲಿ ನಿಯಮ ರೂಪಿಸಲಾಗುವುದು ಎಂದಿದೆ.

## ಏಕೆ ನಿರ್ಬಂಧಿಸಬೇಕು?

- ಮಕ್ಕಳು ಮೊಬೈಲ್ ಬಳಕೆಯ ವ್ಯಸನಕ್ಕೆ ಸಿಲುಕಿದ್ದಾರೆ ಎಂಬುದು ಪೋಷಕರು, ಶಿಕ್ಷಕರ ಅಸಮಾಧಾನ
- ಚಿಕ್ಕವಯಸ್ಸಿನಲ್ಲಿಯೇ ಮಕ್ಕಳು ಹಾನಿಕಾರಕ ವಿಷಯಗಳ ಸಂಪರ್ಕಕ್ಕೆ ಬರಲು ಮೊಬೈಲ್ ಕಾರಣವಾಗುತ್ತಿದೆ. ಮೊಬೈಲ್ ಇಂಟರ್‌ನೆಟ್ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಯಿಂದ ಮಕ್ಕಳ ಸುರಕ್ಷೆಗೆ ಭಂಗ ಉಂಟಾಗಿದೆ. ಹಲವು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಇತರ ದೌರ್ಜನ್ಯಗಳು ನಡೆದಿವೆ
- ಮೊಬೈಲ್ ಫೋನ್‌ಗಳು ಮಕ್ಕಳ ಶಿಕ್ಷಣದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿವೆ. ಮಕ್ಕಳ ಓದುವ ಅವಧಿಯನ್ನು ಆವರಿಸಿವೆ; ಶೈಕ್ಷಣಿಕ ಸಾಧನೆ, ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತಿವೆ
- ಮೊಬೈಲ್‌ನ ಅತಿಯಾದ ಬಳಕೆಯು ಮಕ್ಕಳ ದೈಹಿಕ, ಮಾನಸಿಕ ಬೆಳವಣಿಗೆಗೆ ತೊಡಕಾಗಿದ್ದು, ವರ್ತನೆಗೆ ಸಂಬಂಧಿಸಿದ ಸಮಸ್ಯೆಗಳಿಗೂ ಕಾರಣವಾಗುತ್ತಿದೆ; ಸಾಮಾಜಿಕ ಸಂವಹನ, ಸಂಬಂಧಗಳಿಗೆ ಅಡ್ಡಿಯಾಗಿದೆ
- ಮೊಬೈಲ್ ಗೇಮಿಂಗ್ ಚಟ ಹೆಚ್ಚಾಗುತ್ತಿದ್ದು, ಮಕ್ಕಳು ಸದಾಕಾಲ ಮೊಬೈಲ್ ಹಿಡಿದಿರುತ್ತಾರೆ



## ಕಾರ್ಯಸಾಧ್ಯವೇ?

ಮಕ್ಕಳು ಮೊಬೈಲ್ ಬಳಸುವುದನ್ನು ಹೇಗೆ ನಿರ್ಬಂಧಿಸಲಾಗುತ್ತದೆ ಎಂಬ ಪ್ರಶ್ನೆಯೂ ಈಗ ಉದ್ಭವವಾಗಿದೆ.

- ಡಿಜಿಟಲ್ ತಂತ್ರಜ್ಞಾನ ಮುಂಚೂಣಿಯಲ್ಲಿರುವ ಈ ಕಾಲಘಟ್ಟದಲ್ಲಿ, ಶಿಕ್ಷಣ ಕ್ಷೇತ್ರವೂ ಅದನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುತ್ತಿದೆ
- ಕೋವಿಡ್ ಸಾಂಕ್ರಾಮಿಕದ ನಂತರ ಮೊಬೈಲ್ ಫೋನ್‌ಗಳು ಶಿಕ್ಷಣ ವ್ಯವಸ್ಥೆಯ ಅನಿವಾರ್ಯ ಭಾಗ ಎನ್ನುವಂತಾಗಿವೆ. ಆನ್‌ಲೈನ್ ತರಗತಿಗಳು ಹೆಚ್ಚು ನಡೆಯುತ್ತಿವೆ. ಪಠ್ಯದ ವಿವರಗಳು, ಪಠ್ಯಕ್ಕೆ ಸಂಬಂಧಿಸಿದ ವಿಡಿಯೊಗಳು, ಅಸೈನ್‌ಮೆಂಟ್‌ಗಳು ಹೀಗೆ ಪಾಠಕ್ಕೆ ಸಂಬಂಧಿಸಿದ ವಿಷಯಗಳನ್ನು ಶಿಕ್ಷಕರು ಮೊಬೈಲ್‌ಗಳಲ್ಲೇ ಮಕ್ಕಳಿಗೆ ಅಥವಾ ಅವರ ಪೋಷಕರಿಗೆ ಕಳುಹಿಸುತ್ತಾರೆ
- ಗ್ರಾಮೀಣ ಭಾಗದವರು, ಅಂಗವಿಕಲರು, ಸಮಾಜದ ಅಂಚಿನ ವರ್ಗಗಳಿಗೆ ಸೇರಿದ ಮಕ್ಕಳು ಕೂಡ ಕಲಿಕೆಯ ಉದ್ದೇಶಕ್ಕೆ ಮೊಬೈಲ್‌ಗಳನ್ನು ಬಳಸುತ್ತಿದ್ದಾರೆ. ಆರ್ಥಿಕವಾಗಿ ದುರ್ಬಲರಾಗಿರುವವರಿಗೆ ಕಂಪ್ಯೂಟರ್, ಲ್ಯಾಪ್‌ಟಾಪ್‌ಗಳನ್ನು ಖರೀದಿಸುವ ಶಕ್ತಿ ಇರುವುದಿಲ್ಲ. ಎಲ್ಲದಕ್ಕೂ ಮೊಬೈಲನ್ನೇ ಅವರು ಅವಲಂಬಿಸಿದ್ದಾರೆ. ಮೊಬೈಲ್ ನಿಷೇಧ ಅಥವಾ ನಿರ್ಬಂಧ ಅವರ ಕಲಿಕೆಯ ಅವಕಾಶವನ್ನು ಕಸಿದುಕೊಳ್ಳಬಹುದು
- ನಿಯಂತ್ರಿತ ಮೊಬೈಲ್ ಬಳಕೆಗೆ ಒತ್ತು ಕೊಡಬಹುದು ಎಂಬುದು ಕೆಲವು ಶಿಕ್ಷಣ ತಜ್ಞರ ಅಭಿಪ್ರಾಯ

## 'ಯುನಿಸೆಫ್' ಹೇಳುವುದೇನು?

- ಮಕ್ಕಳ ಆನ್‌ಲೈನ್ ಸುರಕ್ಷತೆಯ ಬಗ್ಗೆ ರಾಷ್ಟ್ರಗಳು ಕ್ರಮ ಕೈಗೊಳ್ಳುತ್ತಿರುವುದು ಸ್ವಾಗತಾರ್ಹವಾದರೂ, ಸಾಮಾಜಿಕ ಜಾಲತಾಣಗಳನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು ತಿರುಗುಬಾಣವಾಗಬಹುದು
- ನಗರಗಳಿಂದ ದೂರವಿರುವ, ಪ್ರತ್ಯೇಕವಾಗಿರುವ ಅಥವಾ ಅಂಚಿನ ಸಮುದಾಯದ ಹಲವು ಮಕ್ಕಳಿಗೆ ಸಾಮಾಜಿಕ ಜಾಲತಾಣಗಳು ಕಲಿಯುವಿಕೆಗೆ, ಹೊರಜಗತ್ತಿನೊಂದಿಗೆ ಸಂಪರ್ಕ ಸಾಧಿಸಲು, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ವೇದಿಕೆಯಾಗಿವೆ
- ಮಕ್ಕಳಿಗೆ ಸುರಕ್ಷಿತವಾದ, ಎಲ್ಲರನ್ನೂ ಒಳಗೊಂಡ ಮತ್ತು ಮಕ್ಕಳ ಹಕ್ಕುಗಳನ್ನು ರಕ್ಷಿಸುವಂತಹ ಡಿಜಿಟಲ್ ವಾತಾವರಣವನ್ನು ಸೃಷ್ಟಿಸಲು ಸರ್ಕಾರಗಳು, ನಿಯಂತ್ರಕರು ಮತ್ತು ತಂತ್ರಜ್ಞಾನ ಕಂಪನಿಗಳು ಕ್ರಮ ಕೈಗೊಳ್ಳಬೇಕು
- ಮಕ್ಕಳ ಪೋಷಕರಲ್ಲಿ ಡಿಜಿಟಲ್ ಸಾಕ್ಷರತೆಯನ್ನು ಹೆಚ್ಚು ಮಾಡಲು ಕ್ರಮ ಕೈಗೊಳ್ಳಬೇಕು

## ಸಾಮಾಜಿಕ ಜಾಲತಾಣಗಳಿಗೆ ಒತ್ತು

ಜಗತ್ತಿನ ಹಲವು ದೇಶಗಳು 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಫೇಸ್‌ಬುಕ್, ಎಕ್ಸ್, ಟಿಕ್ ಟಾಕ್ ಮುಂತಾದ ಸಾಮಾಜಿಕ ಜಾಲತಾಣಗಳನ್ನು ಬಳಸುವುದಕ್ಕೆ ಮತ್ತು ಅಪಾಯಕಾರಿಯಾದ ವಿಷಯಗಳ ಸಂಪರ್ಕಕ್ಕೆ ಬರುವುದಕ್ಕೆ ನಿರ್ಬಂಧ ಹೇರುವ ಪ್ರಯತ್ನ ಮಾಡಿವೆ. ಇದಕ್ಕಾಗಿಯೇ ಪ್ರತ್ಯೇಕ ಕಾನೂನು ರೂಪಿಸಿದ ಮೊದಲ ರಾಷ್ಟ್ರ ಆಸ್ಟ್ರೇಲಿಯಾ. ವಾಟ್ಸ್‌ಆ್ಯಪ್ ಮತ್ತು ಯೂಟ್ಯೂಬ್ ಕಿಡ್ಸ್ ಬಿಟ್ಟು ಉಳಿದೆಲ್ಲ ಸಾಮಾಜಿಕ ಜಾಲತಾಣಗಳನ್ನು ಅಲ್ಲಿ ನಿಷೇಧಿಸಲಾಗಿದೆ. ಇಂಥ ಪ್ರಯತ್ನ ನಡೆಸುತ್ತಿರುವ ಕೆಲವು ರಾಷ್ಟ್ರಗಳ ಪಟ್ಟಿ ಇಲ್ಲಿದೆ.

**ಡೆನ್ಮಾರ್ಕ್:** 15 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸುವುದಕ್ಕೆ ನಿರ್ಬಂಧ ಹೇರುವ ಕಾನೂನು ತರಲಾಗುವುದು ಎಂದು ಡೆನ್ಮಾರ್ಕ್ ಸರ್ಕಾರ 2025ರ ನವೆಂಬರ್‌ನಲ್ಲಿ ಘೋಷಿಸಿದೆ. ಸರ್ಕಾರದ ಈ ಪ್ರಸ್ತಾವಕ್ಕೆ ಅಲ್ಲಿನ ರಾಜಕೀಯ ಪಕ್ಷಗಳು ಬೆಂಬಲಿಸಿವೆ. ಈ ವರ್ಷದ ಮಧ್ಯಭಾಗದಲ್ಲಿ ಹೊಸ ಕಾನೂನು ಜಾರಿಯಾಗುವ ನಿರೀಕ್ಷೆಯಿದೆ.

**ಫ್ರಾನ್ಸ್:** 2018ರಲ್ಲೇ ಶಾಲೆಗಳಲ್ಲಿ ಮಕ್ಕಳು ಫೋನ್ ಬಳಸುವುದನ್ನು ಫ್ರಾನ್ಸ್ ನಿರ್ಬಂಧಿಸಿದೆ. ಮಕ್ಕಳ ಸ್ಕ್ರೀನ್ ಟೈಮ್ ಅನ್ನು ಕಡಿಮೆ ಮಾಡುವ ಉದ್ದೇಶದಿಂದ 15 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಸಾಮಾಜಿಕ ಜಾಲತಾಣಗಳ ಬಳಸುವುದಕ್ಕೆ ನಿಷೇಧ ಹೇರುವ ಮಸೂದೆಯನ್ನು ಫ್ರಾನ್ಸ್‌ನ ಜನಪ್ರತಿನಿಧಿಗಳು ಅಂಗೀಕರಿಸಿದ್ದಾರೆ. ಮಸೂದೆ ಅಲ್ಲಿನ ಕೆಳಮನೆಯಲ್ಲಿ ಅಂಗೀಕಾರ ಆಗುವುದಕ್ಕೂ ಮುನ್ನ ಸೆನೆಟ್‌ನ ಒಪ್ಪಿಗೆ ಸಿಗಬೇಕಿದೆ.

**ಜರ್ಮನಿ:** 13ರಿಂದ 16 ವರ್ಷದೊಳಗಿನ ಮಕ್ಕಳು ಅವರ ಪೋಷಕರ ಅನುಮತಿ ಇದ್ದರೆ ಮಾತ್ರ ಸಾಮಾಜಿಕ ಜಾಲತಾಣಗಳನ್ನು ಬಳಸುವುದಕ್ಕೆ ಜರ್ಮನಿಯಲ್ಲಿ ಅವಕಾಶ ನೀಡಲಾಗಿದೆ. 16 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳಿಂದ ದೂರ ಉಳಿಯುವಂತೆ ಮಾಡುವ ನಿಯಮ ರೂಪಿಸುವ ಬಗ್ಗೆ ಸರ್ಕಾರ ಚರ್ಚೆ ನಡೆಸಿದೆ.

**ಗ್ರೀಸ್:** 15 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸದಂತೆ ಮಾಡಲು ಕಾನೂನು ರೂಪಿಸುವ ಅಂತಿಮ ಹಂತದಲ್ಲಿ ಗ್ರೀಸ್ ಆಡಳಿತ ಇದೆ.

**ಮಲೇಷ್ಯಾ:** ಪ್ರೌಢಶಾಲೆ ಹಂತದವರೆಗಿನ ಮಕ್ಕಳು (16 ವರ್ಷ) ಸಾಮಾಜಿಕ ಜಾಲತಾಣಗಳನ್ನು ಬಳಸುವುದಕ್ಕೆ ನಿರ್ಬಂಧ ಹೇರುವುದಾಗಿ ಮಲೇಷ್ಯಾ ಸರ್ಕಾರ 2025ರ ನವೆಂಬರ್‌ನಲ್ಲಿ ಹೇಳಿತ್ತು. ಈ ವರ್ಷ ಅದನ್ನು ಜಾರಿಗೊಳಿಸುವ ಯೋಚನೆಯಲ್ಲಿದೆ.

**ಸ್ಲೊವೇನಿಯಾ:** 15 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿರ್ಬಂಧಿಸುವುದಕ್ಕಾಗಿ ಕರಡು ಶಾಸನ ಸಿದ್ಧಪಡಿಸುತ್ತಿದೆ.



**ಸ್ಪೇನ್:** 16 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಕೆ ತಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪೇನ್ ಪ್ರಧಾನಿ ಹೇಳಿದ್ದಾರೆ. ಆದರೆ, ಅದನ್ನು ಜಾರಿ ಮಾಡಬೇಕಾದರೆ ಸಂಸತ್ತಿನ ಒಪ್ಪಿಗೆ ಬೇಕು.

**ಬ್ರಿಟನ್:** ಮಕ್ಕಳು ಸಾಮಾಜಿಕ ಜಾಲತಾಣಗಳಿಂದ ದೂರ ಉಳಿಯುವಂತೆ ಮಾಡಲು ಕಾನೂನು ರೂಪಿಸಲು ಬ್ರಿಟನ್ ಕೂಡ ಮುಂದಾಗಿದೆ. 2023ರಲ್ಲಿ ಆನ್‌ಲೈನ್ ಸುರಕ್ಷತಾ ಕಾಯ್ದೆಯನ್ನು ಅಲ್ಲಿ ರೂಪಿಸಲಾಗಿತ್ತು. ಕಳೆದ ವರ್ಷದಿಂದ ಇದು ಜಾರಿಗೆ ಬಂದಿದೆ. ಇದರ ಅಡಿಯಲ್ಲಿ ಸಾಮಾಜಿಕ ಜಾಲತಾಣಗಳಿಗೆ ಕಠಿಣ ಮಾನದಂಡಗಳನ್ನು ನಿಗದಿಪಡಿಸಲಾಗಿದೆ. ಮಕ್ಕಳಿಗೆ ಅಪಾಯಕಾರಿ ವಿಷಯಗಳ ಸಂಪರ್ಕ ತಪ್ಪಿಸುವುದು ಸೇರಿದಂತೆ ಹಲವು ನಿರ್ಬಂಧಗಳು ಈ ಕಾನೂನಿನಲ್ಲಿವೆ. ಆದರೆ, ಸಾಮಾಜಿಕ ಜಾಲತಾಣಗಳ ಬಳಕೆಗೆ ವಯಸ್ಸಿನ ಮಿತಿ ನಿಗದಿಪಡಿಸಲಾಗಿಲ್ಲ.

**ಇಟಲಿ:** 14 ವರ್ಷದೊಳಗಿನ ಮಕ್ಕಳು ಸಾಮಾಜಿಕ ಜಾಲತಾಣಗಳನ್ನು ಬಳಸಲು ಪೋಷಕರ ಅನುಮತಿ ಇಟಲಿಯಲ್ಲಿ ಬೇಕು.

**ನಾರ್ವೆ:** 15 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳನ್ನು ನಿರ್ಬಂಧಿಸುವ ಸಂಬಂಧ ಕಾನೂನು ರೂಪಿಸಲು ನಾರ್ವೆ ಸರ್ಕಾರ ಹೊರಟಿದೆ. ಈಗ 13 ವರ್ಷದೊಳಗಿನ ಮಕ್ಕಳು ಈ ಜಾಲತಾಣಗಳನ್ನು ಬಳಸಲು ಪೋಷಕರ ಸಮ್ಮತಿ ಬೇಕು.

**ಅಮೆರಿಕ:** ಹಲವು ರಾಜ್ಯಗಳು ಮಕ್ಕಳು ಜಾಲತಾಣ ಬಳಸುವುದಕ್ಕೆ ಕಡಿವಾಣ ಹಾಕಿವೆ. ಮಕ್ಕಳ ಆನ್‌ಲೈನ್ ಖಾಸಗಿತನ ರಕ್ಷಣಾ ಕಾಯ್ದೆ ಜಾರಿಯಲ್ಲಿದ್ದು, ಪೋಷಕರ ಅನುಮತಿ ಇಲ್ಲದೆ 13 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳ ವೈಯಕ್ತಿಕ ಮಾಹಿತಿಗಳನ್ನು ಕಂಪನಿಗಳು ಸಂಗ್ರಹಿಸುವಂತಿಲ್ಲ.



# ₹3.25 ಲಕ್ಷ ಕೋಟಿ ಜೈವಿಕ ಆರ್ಥಿಕತೆ

## ದೇಶದ ಜೈವಿಕ ಆರ್ಥಿಕತೆಗೆ ಕರ್ನಾಟಕದ ಕೊಡುಗೆ ಶೇ 21ರಷ್ಟು: ಪ್ರಿಯಾಂಕ್ ಖರ್ಗೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ರಾಜ್ಯದಲ್ಲಿ ಜೈವಿಕ ಆರ್ಥಿಕತೆಯು (ಬಯೋ ಎಕಾನಮಿ) 2025 ರಲ್ಲಿ ₹3,25,360 ಕೋಟಿಗಳಿಗೆ (39.2 ಶತಕೋಟಿ ಡಾಲರ್) ಏರಿಕೆಯಾಗಿದೆ. ಹಿಂದಿನ ವರ್ಷಕ್ಕಿಂತ ಗರಿಷ್ಠ ಬೆಳವಣಿಗೆ ದಾಖಲಿಸಿದೆ.

ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿಯು (ಕೆಐಟಿಎಸ್), ಜೈವಿಕ ತಂತ್ರಜ್ಞಾನ ಉದ್ಯಮಗಳ ಸಂಘದ (ಎಬಿಎಲ್‌ಇ) ಸಹಯೋಗದಲ್ಲಿ ಸಿದ್ಧಪಡಿಸಿರುವ ರಾಜ್ಯದ ಜೈವಿಕ ಆರ್ಥಿಕ ವರದಿ 2025 ರಲ್ಲಿ ಈ ಮಾಹಿತಿ ಇದೆ. ಈ ವರದಿಯನ್ನು ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಬಿಡುಗಡೆ ಮಾಡಿದರು.

ಆ ಬಳಿಕ ಮಾತನಾಡಿದ ಪ್ರಿಯಾಂಕ್, 'ಕರ್ನಾಟಕವು ದೇಶದ ಜೈವಿಕ ಆರ್ಥಿಕತೆಗೆ ಶೇ 21ರಷ್ಟು ಕೊಡುಗೆ ನೀಡುತ್ತಿದೆ. ರಾಜ್ಯದ ಒಟ್ಟು ಆಂತರಿಕ ಉತ್ಪನ್ನದಲ್ಲಿ (ಜಿಎಸ್‌ಡಿಪಿ) ಶೇ 10 ಕ್ಕಿಂತ ಹೆಚ್ಚು ಪಾಲು ಹೊಂದಿದೆ. ಜೈವಿಕ ತಂತ್ರಜ್ಞಾನವು ಆರ್ಥಿಕ ಬೆಳವಣಿಗೆಯ ಪ್ರಮುಖ ಎಂಜಿನ್ ಆಗಿರುವುದಕ್ಕೆ ನಿದರ್ಶನವಾಗಿದೆ. ದೇಶದ ಅತ್ಯಂತ ಪ್ರಬುದ್ಧ ಮತ್ತು ನಾವೀನ್ಯ ಆಧಾರಿತ ಜೈವಿಕ ತಂತ್ರಜ್ಞಾನ ವ್ಯವಸ್ಥೆಯಾಗಿ ಸುಸ್ಥಿರ ರೀತಿಯಲ್ಲಿ ಮುಂಚೂಣಿ ಸ್ಥಾನ ಕಾಯ್ದುಕೊಂಡಿರುವುದನ್ನು ಈ ವರದಿ ಬೆಳಕು ಚೆಲ್ಲಿದೆ' ಎಂದು ಹೇಳಿದರು.

ಜೈವಿಕ ತಂತ್ರಜ್ಞಾನವು ಇನ್ನು ಮುಂದೆ ಪ್ರಯೋಗಾಲಯಗಳಿಗೆ ಮಾತ್ರ ಸೀಮಿತವಾಗಿರದೇ ಆರ್ಥಿಕ ಬೆಳವಣಿಗೆ, ಕೈಗಾರಿಕಾ ನಾವೀನ್ಯತೆ ಮತ್ತು ಸಾಮಾಜಿಕ ಪ್ರಭಾವದ ಕೇಂದ್ರ ಚಾಲಕ ಶಕ್ತಿಯಾಗಲಿದೆ. ಡೀಪ್- ಟೆಕ್ ನವೋದ್ಯಮಗಳಿಗೆ ಬೆಂಬಲ, ನಾವೀನ್ಯತೆ, ಮೂಲ ಸೌಕರ್ಯಗಳ ಬಲಪಡಿಸುವಿಕೆ ಮತ್ತು ಬೆಳವಣಿಗೆಯು ಬೆಂಗಳೂರು ಆಚೆಗಿನ ಪ್ರತಿಯೊಂದು ಪ್ರದೇಶಕ್ಕೂ ತಲುಪುವಂತೆ ನೋಡಿಕೊಳ್ಳಬೇಕಾಗಿದೆ. ಈ ಮೂಲಕ ಸಮಗ್ರ ಜೈವಿಕ ಉತ್ಪಾದನಾ ಆರ್ಥಿಕ ವ್ಯವಸ್ಥೆ ನಿರ್ಮಿಸುವುದರ ಕಡೆ ಸರ್ಕಾರ ಹೆಚ್ಚಿನ ಗಮನ ಹರಿಸಲಿದೆ ಎಂದು ಹೇಳಿದರು.

### ವರದಿಯ ಮುಖ್ಯಾಂಶಗಳು

- ಜೈವಿಕ ಆರ್ಥಿಕತೆ ಸಂಶೋಧನೆ, ಉತ್ಪಾದನೆ, ವಿತರಣೆ ಸೇವೆಗಳನ್ನು ಒಳಗೊಂಡ ಸಂಪೂರ್ಣ ಮೌಲ್ಯ ಸರಪಳಿಯನ್ನು ಒಳಗೊಂಡಿದೆ
- ಜೈವಿಕ ಆರ್ಥಿಕತೆಯು 2023 ರಲ್ಲಿದ್ದ 31 ಶತಕೋಟಿ ಡಾಲರ್‌ನಿಂದ ಈಗ 39.2 ಶತಕೋಟಿ ಡಾಲರ್‌ಗೆ ವಿಸ್ತರಿಸಿದೆ. ಇದು ಒಟ್ಟಾರೆ ಶೇ 26.5 ರಷ್ಟು ಬೆಳವಣಿಗೆ. ಈಗ ರಾಜ್ಯದ ಜಿಡಿಪಿಗೆ ಪ್ರತಿ ಮೂರು ತಿಂಗಳಿಗೆ ಸುಮಾರು 10 ಶತ ಕೋಟಿ ಡಾಲರ್ ಸೇರ್ಪಡೆ ಆಗುತ್ತಿದೆ
- ಜೈವಿಕ ಔಷಧಗಳು, ಕಡಿಮೆ ವೆಚ್ಚದ ಪರ್ಯಾಯ ಜೈವಿಕ ಔಷಧಿಗಳು (ಬಯೊ ಸಿಮಿಲರ್ಸ್), ಲಸಿಕೆಗಳು ಮತ್ತು ರೋಗ ಪತ್ತೆ ವಲಯಗಳ ಒಳಗೊಂಡಂತೆ ಶೇ 40 ಕ್ಕಿಂತ ಹೆಚ್ಚು ಪಾಲು (ಸುಮಾರು 16.44 ಶತಕೋಟಿ ಡಾಲರ್) ಹೊಂದಿವೆ.
- ಸುಮಾರು 11.46 ಶತಕೋಟಿ ಡಾಲರ್ ಮೊತ್ತದ ಜೈವಿಕ ಕೈಗಾರಿಕಾ ತಂತ್ರಜ್ಞಾನ ವಲಯವು ಶೇ 29 ರಷ್ಟು ಪಾಲು ಹೊಂದುವ ದರ ಜೊತೆಗೆ ವೇಗವಾಗಿ ಬೆಳೆಯುತ್ತಿದೆ. ಇದು ರಾಜ್ಯವು ಬಲವಾದ ಜೈವಿಕ ತಯಾರಿಕಾ ಆರ್ಥಿಕತೆಯತ್ತ ಸಾಗುತ್ತಿರುವುದನ್ನು ಸೂಚಿಸುತ್ತದೆ
- ಶೇ 25.8 ಪಾಲು ಹೊಂದಿರುವ ಜೈವಿಕ ಸೇವೆಗಳು ಸ್ಥಿರವಾಗಿ ಬೆಳೆಯುತ್ತಲೇ ಇವೆ. ಜಾಗತಿಕ ಸಂಶೋಧನಾ ಸೇವೆಗಳು, ಡಿಜಿಟಲ್ ಆರೋಗ್ಯ ಮತ್ತು ನಾವೀನ್ಯತೆ-ನೇತೃತ್ವದ ಹೊರಗುತ್ತಿಗೆಯಲ್ಲಿ ಕರ್ನಾಟಕದ ಸ್ಥಾನವನ್ನು ಬಲಪಡಿಸುತ್ತಿವೆ. ಜೈವಿಕ ಕೃಷಿಯು ಸುಸ್ಥಿರ ಕೃಷಿ ಚಟುವಟಿಕೆ ಮತ್ತು ಕಚ್ಚಾ ಸಾಮಗ್ರಿಗಳ ನಾವೀನ್ಯತೆಗಳಿಗೆ ಕೊಡುಗೆ ನೀಡುತ್ತಿದೆ
- ಬೆಂಗಳೂರು ನಗರ ರಾಜ್ಯದ ಜೈವಿಕ ಆರ್ಥಿಕತೆಯಲ್ಲಿ ಶೇ 54 ರಷ್ಟು ಪಾಲು ಹೊಂದಿದೆ. ಮೈಸೂರು ಶೇ 8.7, ಬೆಳಗಾವಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು ಶೇ 9 ಕ್ಕಿಂತ ಹೆಚ್ಚು ಪಾಲು ಹೊಂದಿವೆ. ಉತ್ತರ ಕರ್ನಾಟಕದ ಜಿಲ್ಲೆಗಳು ಕೃಷಿ ಜೈವಿಕ ತಂತ್ರಜ್ಞಾನ ವಲಯಗಳಾಗಿ ಗಮನ ಸೆಳೆಯುತ್ತಿವೆ

## ❖ ಸೌರ ಉತ್ಪನ್ನಗಳಿಗೆ ಭಾರಿ ಸುಂಕ

**ಸಂದರ್ಭ: ಭಾರತದಿಂದ ಅಮೆರಿಕ ಪ್ರವೇಶಿಸುವ ಕೆಲವು ಬಗೆಯ ಸೌರ ಉತ್ಪನ್ನಗಳ ಮೇಲೆ ಅಲ್ಲಿನ ಆಡಳಿತವು ಶೇಕಡ 125.87ರಷ್ಟು ಸುಂಕ ವಿಧಿಸಿದೆ.**

- ಈ ಸೌರ ಉತ್ಪನ್ನಗಳಿಗೆ ಭಾರತದ ಸರ್ಕಾರವು 'ನ್ಯಾಯಸಮ್ಮತವಲ್ಲದ ಬಗೆಯಲ್ಲಿ ಸಬ್ಸಿಡಿಗಳನ್ನು ನೀಡುತ್ತಿರುವ ಕಾರಣಕ್ಕಾಗಿ ಹೆಚ್ಚುವರಿ ಸುಂಕ ವಿಧಿಸಲಾಗಿದೆ' ಎಂದು ಅಮೆರಿಕ ಹೇಳಿದೆ. ಇಂಡೊನೇಷ್ಯಾ ಮತ್ತು ಲಾವೋಸ್‌ನಿಂದ ಅಮೆರಿಕ ಪ್ರವೇಶಿಸುವ ನಿರ್ದಿಷ್ಟ ಸೌರ ಉತ್ಪನ್ನಗಳ ಮೇಲೆಯೂ ಅಮೆರಿಕ ಸರ್ಕಾರ ಬೇರೆ ಬೇರೆ ಪ್ರಮಾಣದಲ್ಲಿ ಸುಂಕ ವಿಧಿಸಿದೆ.
- ಭಾರತದ ಸೌರ ಉತ್ಪನ್ನಗಳ ಮೇಲೆ ವಿಧಿಸಿರುವ ಸುಂಕವು ಈಗಾಗಲೇ ಜಾರಿಗೆ ಬಂದಿರುವ ಶೇ 10ರಷ್ಟು ಸುಂಕದ ಮೇಲೆ ಹೆಚ್ಚುವರಿಯಾಗಿ ಅನ್ವಯ ಆಗಲಿದೆ. ಅಮೆರಿಕ ಸರ್ಕಾರ ಹೊರಡಿಸಿರುವ ಆದೇಶದಲ್ಲಿ ನೀಡಿರುವ ವಿವರದ ಪ್ರಕಾರ, 2022ರಲ್ಲಿ ಅಮೆರಿಕವು ಭಾರತದಿಂದ ಆಮದು ಮಾಡಿಕೊಂಡ ಸೌರ ಉತ್ಪನ್ನಗಳ ಮೊತ್ತವು 83.86 ಮಿಲಿಯನ್ ಡಾಲರ್ (ಇಂದಿನ ಅಂದಾಜು ₹762 ಕೋಟಿ) ಆಗಿತ್ತು. ಇದು, 2024ರಲ್ಲಿ 792 ಮಿಲಿಯನ್ ಡಾಲರ್‌ಗೆ (ಇಂದಿನ ಅಂದಾಜು ₹7.204 ಕೋಟಿ) ತಲುಪಿದೆ.
- ನ್ಯಾಯ ಸಮ್ಮತವಲ್ಲದ ಬಗೆಯಲ್ಲಿ ಸಬ್ಸಿಡಿ ಪಡೆದು, ಅಮೆರಿಕದ ಮಾರುಕಟ್ಟೆ ಪ್ರವೇಶಿಸುವ' ಭಾರತದ ಸೌರ ಉತ್ಪನ್ನಗಳ ಮೇಲಿನ ಸುಂಕದ ಪ್ರಮಾಣದ ಬಗ್ಗೆ ಅಮೆರಿಕವು ಜುಲೈನಲ್ಲಿ ಅಂತಿಮ ತೀರ್ಮಾನ ಪ್ರಕಟಿಸುವ ನಿರೀಕ್ಷೆ ಇದೆ.
- ಭಾರತದ ಕಂಪನಿಗಳ ಮೇಲೆ ವಿಧಿಸುವ ಸುಂಕದ ಕಾರಣದಿಂದಾಗಿ, ಅಮೆರಿಕದ ಕಂಪನಿಗಳಿಗೆ ಒಂದಿಷ್ಟು ಅನುಕೂಲ ಆಗುತ್ತದೆ.
- **ಭಾರತದಲ್ಲಿ ಉತ್ತೇಜನ:** ಭಾರತದಲ್ಲಿ ನವೀಕರಿಸಬಹುದಾದ ಮೂಲಗಳಿಂದ ಇಂಧನ ಉತ್ಪಾದನೆ ಹೆಚ್ಚಿಸಲು, ಈ ಕ್ಷೇತ್ರದಲ್ಲಿ ಆಮದು ಅವಲಂಬನೆ ಕಡಿಮೆ ಮಾಡಲು ಕೇಂದ್ರ ಸರ್ಕಾರವು ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ. ಸೌರವಿದ್ಯುತ್ ಉತ್ಪಾದನಾ ಕ್ಷೇತ್ರಕ್ಕೆ ಕೂಡ ಈ ಕ್ರಮಗಳ ಅಡಿಯಲ್ಲಿ ಆದ್ಯತೆ ನೀಡಲಾಗಿದೆ. ಜಗತ್ತಿನಲ್ಲಿ ಸೌರವಿದ್ಯುತ್ ಉತ್ಪಾದನೆಯಲ್ಲಿ ಭಾರತವು ಈಗ ಮೂರನೆಯ ಸ್ಥಾನದಲ್ಲಿದೆ.
- ದೇಶದಲ್ಲಿ ಸೌರಫಲಕಗಳ, ಸೌರವಿದ್ಯುತ್ ಉತ್ಪಾದನೆಯಲ್ಲಿ ಬಳಕೆಯಾಗುವ ಇತರ ವಸ್ತುಗಳ ತಯಾರಿಕೆಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರವು, ಮೇಲಾವಣೆ ಸೌರವಿದ್ಯುತ್ ಯೋಜನೆ, ಪಿಎಂ-ಕುಸುಮ್ ಯೋಜನೆಯಲ್ಲಿ ಭಾರತದಲ್ಲಿಯೇ ತಯಾರಾದ ಉತ್ಪನ್ನಗಳ ಬಳಕೆಯನ್ನು ಕಡ್ಡಾಯ ಮಾಡಿದೆ.
- ಕೇಂದ್ರ ಸರ್ಕಾರವು 2022ರಲ್ಲಿ ಸೌರ ಕೋಶಗಳು, ಸೌರ ಮಾಡ್ಯೂಲ್‌ಗಳ ಮೇಲೆ ಮೂಲ ಸೀಮಾ ಸುಂಕವನ್ನು ವಿಧಿಸಿದೆ. ಆಮದು ತಗ್ಗಿಸುವ ಉದ್ದೇಶದಿಂದ ಹೀಗೆ ಮಾಡಲಾಗಿದೆ.

Dr. Rajkumar IAS/KAS Academy

# ಲಿಂಗತ್ವ ಅಲ್ಪಸಂಖ್ಯಾತರ ಲೋಕದಲ್ಲಿ..

## ದೇಶದಲ್ಲಿಯೇ ಮೊದಲ ಬಾರಿಗೆ ರಾಜ್ಯದಲ್ಲಿ ಸಮೀಕ್ಷೆ; ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಅನಾವರಣ


• ರಾಜೇಶ್ ರೈ ಚಟ್ಲ

ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಯಲ್ಲಿ ವಿಲೀನಗೊಳಿಸಿ, ಅವರ ಬದುಕಿನ ಗುಣಮಟ್ಟ ಸುಧಾರಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 2017ರಲ್ಲಿ 'ಕರ್ನಾಟಕದ ಅಲ್ಪಸಂಖ್ಯಾತರ ನೀತಿ' ಜಾರಿಗೆ ತಂದಿದೆ. ಮುಂದುವರಿದು, ಅವಮಾನ, ತಾರತಮ್ಯ, ಖಿನ್ನತೆ, ಆತ್ಮಹತ್ಯಾ ಪ್ರವೃತ್ತಿಯಿಂದ ಅವರನ್ನು ಹೊರತರಬೇಕು. ಜತೆಗೆ ಈ ವರ್ಗದವರ ನೆರವಿಗಾಗಿ 'ಲಿಂಗತ್ವ ಅಲ್ಪಸಂಖ್ಯಾತರ ಕ್ಷೇಮಾಭಿವೃದ್ಧಿ ಮಂಡಳಿ' ಸ್ಥಾಪಿಸುವ ಮೂಲ ಉದ್ದೇಶದಿಂದ ಇಡೀ ದೇಶದಲ್ಲಿಯೇ ಕರ್ನಾಟಕದಲ್ಲಿ ಮೊದಲ ಬಾರಿಗೆ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ನಡೆಸಲಾಗಿದೆ. ರಾಜ್ಯದ ಎಲ್ಲ 31 ಜಿಲ್ಲೆಗಳಲ್ಲಿ 2025ರ ಸೆ. 15ರಿಂದ ನ. 21ರವರೆಗೆ ನಡೆದ ಸಮೀಕ್ಷೆಯಲ್ಲಿ ಈ ವರ್ಗದ ಸಂಪೂರ್ಣ ಚಿತ್ರಣ ಲಭ್ಯವಾಗಿದೆ. ಸಮೀಕ್ಷೆಯಲ್ಲಿ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿ, ವಾಸಸ್ಥಳ, ವಲಸೆ, ಕುಟುಂಬದ ಮೇಲಿನ ಅವಲಂಬನೆ, ಉದ್ಯೋಗ, ಆದಾಯ ಸೇರಿದಂತೆ ಹಲವು ರೀತಿಯ ಮಾಹಿತಿ ಸಂಗ್ರಹಿಸಲಾಗಿದೆ.

ರಾಜ್ಯದಲ್ಲಿ ಒಟ್ಟು 10,365 ಲಿಂಗತ್ವ ಅಲ್ಪಸಂಖ್ಯಾತರು ಇದ್ದು, ಈ ಪೈಕಿ 5,509 ಮಂದಿ ಗ್ರಾಮೀಣ ಪ್ರದೇಶದಲ್ಲಿದ್ದಾರೆ; ನಗರ ಪ್ರದೇಶದಲ್ಲಿ 3,589 ಮಂದಿ ನೆಲಸಿದ್ದಾರೆ. ಒಟ್ಟು ಜನರಲ್ಲಿ 10,106 ಮಂದಿ ಕರ್ನಾಟಕದವರು. 114 ಮಂದಿ ಆಂಧ್ರಪ್ರದೇಶ, ಕೇರಳ, ಮಹಾರಾಷ್ಟ್ರ, ತಮಿಳುನಾಡು, ತೆಲಂಗಾಣ ಮತ್ತಿತರ ರಾಜ್ಯಗಳಿಂದ ವಲಸೆ ಬಂದವರು. 1,461 ಮಂದಿ ಲಿಂಗ ದೃಢೀಕರಣ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ.

**ವೈವಾಹಿಕ ಸ್ಥಿತಿಗತಿ**

**4,735** (46.20%) ವಿವಾಹಿತರು | **5,444** ಅವಿವಾಹಿತರು | **71** ಮಾಹಿತಿ ನೀಡದವರು



ಕಲೆ: ಸಂತೋಷ್ ಸಸಿಹಿತ್ಲು

### ಮಕ್ಕಳ ಶಿಕ್ಷಣಕ್ಕೆ ಕುತ್ತು

ಸಮೀಕ್ಷೆಯಲ್ಲಿ 18 ವರ್ಷದ ಒಳಗಿನ 115 ಲಿಂಗತ್ವ ಅಲ್ಪಸಂಖ್ಯಾತ ಮಕ್ಕಳು ಇರುವುದನ್ನು ಗುರುತಿಸಲಾಗಿದೆ. 26 ಮಕ್ಕಳು ಕಾಲೇಜು ಶಿಕ್ಷಣ, 9 ಮಂದಿ ಶಾಲಾ ಶಿಕ್ಷಣ ಪಡೆದಿದ್ದಾರೆ. 80 ಮಕ್ಕಳು ವಿದ್ಯಾಭ್ಯಾಸದ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ. 6 ಮಕ್ಕಳು ಶಾಲಾ ಹಂತದಲ್ಲೇ ಶಿಕ್ಷಣ ಮೊಟಕುಗೊಳಿಸಿದ್ದರೆ, 19 ಮಕ್ಕಳು ಕಾಲೇಜಿನಲ್ಲಿ ಇರುವಾಗಿ ಅರ್ಧಕ್ಕೆ ನಿಲ್ಲಿಸಿರುವುದು ಗೊತ್ತಾಗಿದೆ.

ಶಿಕ್ಷಣಕ್ಕಾಗಿ 53 ಮಕ್ಕಳು ಆರ್ಥಿಕ ಸೌಲಭ್ಯ ಕೋರಿದ್ದು, ಮೂವರು ಮಾತ್ರ ವಿದ್ಯಾರ್ಥಿ ವೇತನ ಪಡೆಯುತ್ತಿದ್ದಾರೆ. 45 ಮಕ್ಕಳು ಶಾಲಾ ಕಾಲೇಜುಗಳಲ್ಲಿ ದೌರ್ಜನ್ಯಕ್ಕೆ ಒಳಗಾಗಿರುವುದು, 36 ಮಕ್ಕಳು ಶಾಲಾ ಕಾಲೇಜುಗಳಿಂದ ಹೊರದೂಡಲ್ಪಟ್ಟಿರುವುದು, 54 ಮಕ್ಕಳು ತಾರತಮ್ಯಕ್ಕೆ ಒಳಗಾಗಿರುವುದು ತಿಳಿದುಬಂದಿದೆ. ಚಿಕಿತ್ಸೆ ಪಡೆಯಲು ಆಸ್ಪತ್ರೆಗಳಿಗೆ ತೆರಳಿದ ವೇಳೆಯಲ್ಲಿಯೂ ಮಕ್ಕಳು ಒಂದಲ್ಲ ಒಂದು ರೀತಿಯಲ್ಲಿ ತಾರತಮ್ಯಕ್ಕೆ ಅಥವಾ ಅವಮಾನಕ್ಕೆ ಒಳಗಾಗಿರುವುದು ಸಮೀಕ್ಷೆಯಲ್ಲಿ ಬಹಿರಂಗವಾಗಿದೆ.


### ವಸತಿ ಸೌಕರ್ಯ




### ಉದ್ಯೋಗ, ಆದಾಯ ಮಾಹಿತಿ

| | |
|---|---|
| ರಾಜ್ಯ ಸರ್ಕಾರದ ಉದ್ಯೋಗಿಗಳು | 48 |
| ಕೇಂದ್ರ ಸರ್ಕಾರದ ಉದ್ಯೋಗಿಗಳು | 13 |
| ಖಾಸಗಿ ಸಂಸ್ಥೆಗಳಲ್ಲಿ | 1,373 |
| ಸ್ವಯಂಸೇವಾ ಸಂಸ್ಥೆಗಳಲ್ಲಿ | 278 |
| ಸ್ವಯಂ ಉದ್ಯೋಗ | 689 |
| ಉದ್ಯೋಗದ ಮಾಹಿತಿ ನೀಡಲು ನಿರಾಕರಿಸಿದವರು | 7,849 |

### ಯಾವ ಧರ್ಮದವರು ಎಷ್ಟು?





### ಲಿಂಗತ್ವ ಅಲ್ಪಸಂಖ್ಯಾತರು

**20,666** 2011ರ ಜನಗಣತಿಯಲ್ಲಿ ಗುರುತಿಸಿಕೊಂಡವರು

**10,365** (18 ವರ್ಷದ ಒಳಗಿನ 115 ಮಕ್ಕಳು ಸೇರಿ) ಸಮೀಕ್ಷೆಯಲ್ಲಿ ಗುರುತಿಸಿಕೊಂಡವರು

### ಲಿಂಗತ್ವ ಅಲ್ಪಸಂಖ್ಯಾತರು (ಜಿಲ್ಲಾವಾರು)




### ಶೈಕ್ಷಣಿಕ ಅಡೆತಡೆ

| | |
|---|---|
| ಶಿಕ್ಷಣ ಪಡೆಯುವಾಗ ದೌರ್ಜನ್ಯಕ್ಕೆ ಒಳಗಾದವರು | 3,382 |
| ಶಿಕ್ಷಣ ಸಂಸ್ಥೆಗಳ ತಾರತಮ್ಯಕ್ಕೆ ಒಳಗಾದವರು | 3,730 |
| ಶಿಕ್ಷಣ ಮೊಟಕುಗೊಳಿಸಿದವರು | 2,589 |

### ಕೌಟುಂಬಿಕ ಆಸರೆ

| | | |
|---|---|---|
| ಕುಟುಂಬದಿಂದ ಸ್ವೀಕರಿಸಲ್ಪಟ್ಟವರು | 6,214 | (60.62%) |
| ಕುಟುಂಬದಿಂದ ದೂರ ಆದವರು | 4,036 ಮಂದಿ | (39.38%) |
| ಕುಟುಂಬದ ಮೇಲೆ ಅವಲಂಬಿತರು | 3,515 | (34.29%) |
| ಕುಟುಂಬವನ್ನು ಅವಲಂಬಿಸದ ಸ್ವಾವಲಂಬಿಗಳು | 6,664 | (65.01%) |

### ಪಿಎಚ್.ಡಿ, ಎಂಬಿಬಿಎಸ್, ಬಿಇ ಪದವೀಧರರು

ಸಮೀಕ್ಷೆಯಲ್ಲಿ ಗುರುತಿಸಿದ ಲಿಂಗತ್ವ ಅಲ್ಪಸಂಖ್ಯಾತರಲ್ಲಿ ಐದು ಮಂದಿ ವೈದ್ಯಕೀಯ ಪದವಿ ಪಡೆದವರಿದ್ದಾರೆ. ಏಳು ಮಂದಿ ಕಾನೂನು ಪದವಿ, 34 ಮಂದಿ ತಾಂತ್ರಿಕ ಪದವಿ ಪಡೆದಿದ್ದಾರೆ. 1,123 ಎಸ್ಎಸ್ಎಲ್‌ಸಿ, 1,142 ಪಿಯುಸಿ/ಡಿಪ್ಲೊಮಾ, 357 ಜನರು ಬಿಎ, ಬಿಕಾಂ, ಬಿಎಸ್‌ಸಿ ಓದಿದ್ದರೆ, 120 ಮಂದಿ ಸ್ನಾತಕೋತ್ತರ ಪದವಿ ಮತ್ತು ಮೂವರು ಪಿಎಚ್.ಡಿ ಹಾಗೂ 1,290 ಮಂದಿ ವಿವಿಧ ಕೋರ್ಸ್‌ಗಳನ್ನು ಮುಗಿಸಿದ್ದಾರೆ.

### ಶಿಫಾರಸುಗಳು

- ಮನೆಗಳಲ್ಲಿ ಪೋಷಕರಿಗೆ, ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು; ಶಿಕ್ಷಣಕ್ಕೆ ಆರ್ಥಿಕ ಸೌಲಭ್ಯ ಕಲ್ಪಿಸಬೇಕು
- ವಸತಿ ಶಾಲೆ ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ಅರ್ಜಿ ಹಾಕುವ ಎಲ್ಲ ಲಿಂಗತ್ವ ಅಲ್ಪಸಂಖ್ಯಾತ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳಬೇಕು
- ಲಿಂಗತ್ವ ದೃಢೀಕರಣ ಶಸ್ತ್ರಚಿಕಿತ್ಸೆಗಾಗಿ ಕಾರ್ಯಕ್ರಮಗಳನ್ನು ರೂಪಿಸಬೇಕು, ಆಯುಷ್ಮಾನ್ ಭಾರತ್ ಕಾರ್ಡ್ ವಿತರಿಸಬೇಕು
- ಖಾಸಗಿ ಕ್ಷೇತ್ರದಲ್ಲಿ ಉದ್ಯೋಗ ದೊರೆಯುವಂತೆ ಯೋಜನೆ ರೂಪಿಸಬೇಕು; ಶೇ 1ರಷ್ಟು ಮೀಸಲಾತಿ ಕೊಡಬೇಕು
- ಕೌಶಲ್ಯಾಭಿವೃದ್ಧಿ ಇಲಾಖೆ ಮೂಲಕ ವಿಶೇಷ ತರಬೇತಿ ನೀಡಲು ಯೋಜನೆ ರೂಪಿಸಬೇಕು
- ವಸತಿ ಸೌಲಭ್ಯ ಕಲ್ಪಿಸಬೇಕು, ವಿಶೇಷ ಕ್ಯಾಂಪ್‌ಗಳ ಮೂಲಕ ಪಡಿತರ ಚೀಟಿ ನೀಡಬೇಕು
- ಸಾರ್ವಜನಿಕ ಸ್ಥಳಗಳಲ್ಲಿ ಪ್ರತ್ಯೇಕ ಶೌಚಾಲಯ, ನಿರೀಕ್ಷಣಾ ಕೊಠಡಿಗಳನ್ನು ನಿರ್ಮಿಸಬೇಕು
- ಸರ್ಕಾರದ ಯೋಜನೆಗಳು, ಸವಲತ್ತುಗಳಲ್ಲಿ ಆದ್ಯತೆ ನೀಡಬೇಕು
- ಭಿಕ್ಷಾಟನೆಯಲ್ಲಿ ತೊಡಗಿರುವವರಿಗೆ ಭಿಕ್ಷುಕರ ಪುನರ್ವಸತಿ ಕೇಂದ್ರದಲ್ಲಿ ನೆಲೆ ಕಲ್ಪಿಸಬೇಕು
- ಹಿರಿಯರಿಗೆ ವೃದ್ಧಾಶ್ರಮಗಳಲ್ಲಿ ವಾಸ್ತವ್ಯ ಕಲ್ಪಿಸಬೇಕು

# ಸಾಮಾಜಿಕ ಜಾಲತಾಣಗಳ ಮೂಲಕ ಮಾಹಿತಿ ಹಂಚಿಕೊಂಡ ಕೇಂದ್ರ ಸಚಿವ

ನವದೆಹಲಿ (ಪಿಟಿಐ): ಭಾರತದಿಂದ ರಫ್ತಾಗುವ ಸರಕುಗಳ ವರ್ಗದಲ್ಲಿ ಈಗ ಸ್ಮಾರ್ಟ್‌ಫೋನ್‌ಗಳು ಮೊದಲ ಸ್ಥಾನಕ್ಕೆ ಬಂದಿವೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಐ.ಟಿ ಸಚಿವ ಅಶ್ವಿನಿ ವೈಷ್ಣವ್ ಬುಧವಾರ ಹೇಳಿದ್ದಾರೆ.

2025ರ ಕ್ಯಾಲೆಂಡರ್ ವರ್ಷದಲ್ಲಿ ಭಾರತದಿಂದ 30 ಬಿಲಿಯನ್ ಡಾಲರ್ (₹2.72 ಲಕ್ಷ ಕೋಟಿ) ಮೌಲ್ಯದ ಸ್ಮಾರ್ಟ್‌ಫೋನ್‌ಗಳು ರಫ್ತಾಗಿವೆ ಎಂದು ಅವರು ಸಾಮಾಜಿಕ ಜಾಲತಾಣಗಳ ಮೂಲಕ ಹೇಳಿದ್ದಾರೆ.



‘ಭಾರತವು ಈಗ ಜಗತ್ತಿನ ಸ್ಮಾರ್ಟ್‌ಫೋನ್ ತಯಾರಿಕಾ ಕಾರ್ಖಾನೆ ಆಗುತ್ತಿದೆ’ ಎಂದು ವೈಷ್ಣವ್ ಹೇಳಿದ್ದಾರೆ. ಈ ಸಂಬಂಧ ಅವರು ಚಿತ್ರವೊಂದನ್ನು ಹಂಚಿಕೊಂಡಿದ್ದಾರೆ.

2024–25ನೇ ಸಾಲಿನಲ್ಲಿ ಭಾರತದಲ್ಲಿ ಅಂದಾಜು ₹5.5 ಲಕ್ಷ ಕೋಟಿ ಮೌಲ್ಯದ ಮೊಬೈಲ್ ಫೋನ್‌ಗಳನ್ನು ತಯಾರು ಮಾಡಲಾಗಿದೆ, ಅಂದಾಜು ₹2 ಲಕ್ಷ ಕೋಟಿ ಮೌಲ್ಯದ ಮೊಬೈಲ್ ಫೋನ್‌ಗಳನ್ನು ರಫ್ತು ಮಾಡಲಾಗಿದೆ.

2025ರಲ್ಲಿ ದೇಶದಿಂದ ರಫ್ತಾಗಿರುವ ಎಲೆಕ್ಟ್ರಾನಿಕ್ಸ್ ಸರಕುಗಳ ಮೌಲ್ಯವು ₹4 ಲಕ್ಷ ಕೋಟಿಯನ್ನು ದಾಟಿದೆ. ದೇಶದಲ್ಲಿ ನಾಲ್ಕು ಸೆಮಿಕಂಡಕ್ಟರ್ ತಯಾರಿಕಾ ಘಟಕಗಳು ಈ ವರ್ಷ ಉತ್ಪಾದನೆ ಆರಂಭಿಸಿದ ನಂತರದಲ್ಲಿ ಈ ಮೌಲ್ಯವು ಇನ್ನಷ್ಟು ಹೆಚ್ಚಾಗಲಿದೆ ಎಂಬ ಅಂದಾಜು ಮಾಡಲಾಗಿದೆ.

ಚೀನಾ ಮೇಲೆ ಅಮೆರಿಕ ಹೆಚ್ಚಿನ ಸುಂಕ ಹೇರಿದ ನಂತರದಲ್ಲಿ ಆ್ಯಪಲ್ ಕಂಪನಿಯು ಭಾರತದಲ್ಲಿ ತಯಾರಿಕಾ ಚಟುವಟಿಕೆಯನ್ನು ಹೆಚ್ಚಿಸಿದೆ ಎಂದು ಮಾರುಕಟ್ಟೆ ಸಂಶೋಧನೆ ಹಾಗೂ ವಿಶ್ಲೇಷಣಾ ಸಂಸ್ಥೆ ‘ಕೌಂಟರ್ ಪಾಯಿಂಟ್’ನ ಸಹ ಸಂಸ್ಥಾಪಕ ನೀಲ್ ಶಾ ಹೇಳಿದ್ದಾರೆ.

‘ಭಾರತದಲ್ಲಿ ಅಂದಾಜು 30 ಕೋಟಿ ಮೊಬೈಲ್ ಫೋನ್‌ಗಳು ತಯಾರಾಗಲಿವೆ ಎಂದು ನಿರೀಕ್ಷಿಸಲಾಗಿದೆ. 2025ರಲ್ಲಿ ಇಲ್ಲಿ ತಯಾರಾದ ಪ್ರತಿ ನಾಲ್ಕು ಮೊಬೈಲ್ ಫೋನ್‌ಗಳಲ್ಲಿ ಒಂದು ರಫ್ತಾಗಿದೆ ಎಂದು ಅಂದಾಜು ಮಾಡಲಾಗಿದೆ’ ಎಂದು ಅವರು ಹೇಳಿದ್ದಾರೆ.

‘ಅಮೆರಿಕವು ಇಲ್ಲಿ ತಯಾರಾದ ಮೊಬೈಲ್ ಫೋನ್‌ಗಳಿಗೆ ದೊಡ್ಡ ಮಾರುಕಟ್ಟೆ. ಆ್ಯಪಲ್, ಸ್ಯಾಮ್‌ಸಂಗ್, ಮೋಟೊರೋಲಾ ಕಂಪನಿಗಳು ರಫ್ತಿನಲ್ಲಿ ಮುಂಚೂಣಿಯಲ್ಲಿ ಇವೆ’ ಎಂದು ತಿಳಿಸಿದ್ದಾರೆ.

**ಮುಖ್ಯಾಂಶಗಳು**

- ₹4 ಲಕ್ಷ ದಾಟಿದ ಎಲೆಕ್ಟ್ರಾನಿಕ್ಸ್ ವಸ್ತುಗಳ ರಫ್ತು
- ಪ್ರತಿ ನಾಲ್ಕು ಫೋನ್‌ಗಳಲ್ಲಿ ಒಂದು ರಫ್ತು
- ಈ ವರ್ಷದ ರಫ್ತು ಹೆಚ್ಚಾಗುವ ಅಂದಾಜು




## ❖ ಭಾರತ-ಇಸ್ರೇಲ್: ಒಪ್ಪಂದಗಳಿಗೆ ಸಹಿ: ವ್ಯಾಪಾರ, ಕೃಷಿ, ಡಿಜಿಟಲ್ ಪಾವತಿ ಕುರಿತು ಒಡಂಬಡಿಕೆ

**ಸಂದರ್ಭ: ಇಸ್ರೇಲ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಜತೆ ಮಹತ್ವದ ವಿಷಯಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಿದರು.**

- ಈ ವೇಳೆ ವ್ಯಾಪಾರ, ಕೃಷಿ, ಸೈಬರ್‌ಸ್ಪೇಸ್, ಡಿಜಿಟಲ್ ಪಾವತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ವೃದ್ಧಿಸಲು ಉಭಯ ದೇಶಗಳ ನಡುವೆ ಹಲವು ಒಪ್ಪಂದಗಳು ಏರ್ಪಟ್ಟವು. ಎರಡೂ ದೇಶಗಳು ವಿಶೇಷ ಕಾರ್ಯ ತಂತ್ರದ ಪಾಲುದಾರಿಕೆ ವೃದ್ಧಿಸುವ ಕುರಿತು ಬದ್ಧತೆ ತೋರಿದವು.
- ಭಾರತ- ಇಸ್ರೇಲ್‌ಗೆ ಪರಸ್ಪರ ಉಪಯುಕ್ತವಾಗುವ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಶೀಘ್ರದಲ್ಲಿಯೇ ಅಂತಿಮ ರೂಪ ನೀಡಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಇದೇ ವೇಳೆ ಹೇಳಿದರು.
- ವರ್ಗಾವಣೆ ತಂತ್ರಜ್ಞಾನಗಳ ಚೌಕಟ್ಟಿನಡಿ ಜಂಟಿ ಅಭಿವೃದ್ಧಿ ಮತ್ತು ಸೇನಾ ಹಾರ್ಡ್‌ವೇರ್‌ನ ಜಂಟಿ ಉತ್ಪಾದನೆಗೆ ಒತ್ತು = ನೀಡಲಾಗುವುದು. ಈ ಮೂಲಕ ಎರಡೂ ” ದೇಶಗಳ ನಡುವಿನ ನಿಕಟ ರಕ್ಷಣಾ ಪಾಲುದಾ-- ರಿಕೆಯನ್ನು ವಿಸ್ತರಿಸಲಾಗುವುದು ಎಂದರು.
- ಕೃತಕ ಬುದ್ಧಿಮತ್ತೆ, ಕ್ವಾಂಟಮ್ ಮತ್ತು ನಿರ್ಣಾಯಕ ಖನಿಜಗಳ ಕ್ಷೇತ್ರಗಳಲ್ಲಿನ - ಸಹಕಾರಕ್ಕೆ ಹೊಸ ವೇಗ ನೀಡಲು ಉಭಯ - ದೇಶಗಳು ಸಮ್ಮತಿಸಿವೆ. ಇದಕ್ಕಾಗಿ ಉಭಯ ದೇಶಗಳ ನಡುವೆ ಅತ್ಯಾಧುನಿಕ ತಂತ್ರಜ್ಞಾ-ನಗಳ ಪಾಲುದಾರಿಕೆಯನ್ನು ಸ್ಥಾಪಿಸಲಾ-ಗುವುದು ಎಂದು ಮೋದಿ ಘೋಷಿಸಿದರು. ಇಸ್ರೇಲ್ ನಲ್ಲಿ ಯುಪಿಐ ಬಳಕೆ ಕುರಿತು ಒಪ್ಪಂದ ಮಾಡಿಕೊಂಡಿರುವುದು ಸಂತಸವಾಗಿದೆ ಎಂದು ಅವರು ಹೇಳಿದರು.
- ಭಯೋತ್ಪಾದನೆಗೆ ಸ್ಥಳವಿಲ್ಲ: 'ಜಗತ್ತಿನಲ್ಲಿ ಭಯೋತ್ಪಾದನೆಗೆ ಯಾವುದೇ ಸ್ಥಳವಿಲ್ಲ' ಎಂಬುದು ಭಾರತ ಮತ್ತು ಇಸ್ರೇಲ್‌ನ ದೃಷ್ಟಿಕೋನವಾಗಿದೆ. ಭಯೋತ್ಪಾದನೆ ಮತ್ತು ಅದರ ಬೆಂಬಲಿಗರನ್ನು ಎದುರಿಸುವಲ್ಲಿ ಎರಡೂ ದೇಶಗಳು ಹೆಗಲಿಗೆ ಹೆಗಲು ಕೊಟ್ಟು ಕಾರ್ಯ ನಿರ್ವಹಸಲಿವೆ ಎಂದು ತಿಳಿಸಿದರು.
- ಭಾರತ-ಪಶ್ಚಿಮ ಏಷ್ಯಾ ಯುರೋಪ್ ಆರ್ಥಿಕ ಕಾರಿಡಾರ್ (ಐಎಂಇಸಿ) ಅನುಷ್ಠಾನ, ಭಾರತ ಇಸ್ರೇಲ್-ಯುಎಇ -ಅಮೆರಿಕ ನಡುವಿನ ಸಹಕಾರ ವೃದ್ಧಿಯ ಕುರಿತೂ ಚರ್ಚೆ ನಡೆದಿವೆ ಎಂದು ಮೂಲಗಳು ತಿಳಿಸಿವೆ.

## ❖ 'ಆಶಾಕಿರಣ' ಯೋಜನೆಯಡಿ ರಾಜ್ಯದಲ್ಲಿ 1.40 ಕೋಟಿ ಜನರಿಗೆ ನೇತ್ರ ತಪಾಸಣೆ

**ಸಂದರ್ಭ: ರಾಜ್ಯದಲ್ಲಿ 'ಆಶಾಕಿರಣ' ಯೋಜನೆಯಡಿ 1.40 ಕೋಟಿ ಮಂದಿಗೆ ಕಣ್ಣಿನ ತಪಾಸಣೆ ನಡೆಸಲಾಗಿದ್ದು, 24.50 ಲಕ್ಷ ಜನರಲ್ಲಿ ನೇತ್ರ ಸಮಸ್ಯೆ ದೃಢಪಟ್ಟಿದೆ.**

- ಡಿಜಿಟಲ್ ಸಾಧನಗಳ ಅತಿಯಾದ ಬಳಕೆ, ವಾಯು ಮಾಲಿನ್ಯ ಸೇರಿ ವಿವಿಧ ಕಾರಣಗಳಿಂದ ಚಿಕ್ಕ ವಯಸ್ಸಿನಲ್ಲಿಯೇ ದೃಷ್ಟಿದೋಷ ಸಮಸ್ಯೆಗೆ ಒಳಪಡುವವರ ಸಂಖ್ಯೆ ರಾಜ್ಯದಲ್ಲಿ ಹೆಚ್ಚಳವಾಗುತ್ತಿದೆ. ಚಿಕಿತ್ಸೆ ವಿಳಂಬವಾದಲ್ಲಿ ಸಮಸ್ಯೆ ಗಂಭೀರ ಸ್ವರೂಪ ಪಡೆದು, ದೃಷ್ಟಿ ನಷ್ಟವಾಗುವ ಸಾಧ್ಯತೆಯಿರುತ್ತದೆ. ಅದ್ದರಿಂದ ಆರಂಭಿಕ ಹಂತದಲ್ಲಿಯೇ ನೇತ್ರ ಸಮಸ್ಯೆ ಪತ್ತೆ ಮಾಡಿ, ಚಿಕಿತ್ಸೆ ಒದಗಿಸುವ ಉದ್ದೇಶದಿಂದ ರಾಷ್ಟ್ರೀಯ ಅಂಧತ್ವ ಮತ್ತು ದೃಷ್ಟಿ ಮಾಂದ್ಯತೆ ನಿಯಂತ್ರಣ ಕಾರ್ಯಕ್ರಮದಡಿ ಈ ಯೋಜನೆಯನ್ನು 2022ರಲ್ಲಿ ಪ್ರಾರಂಭಿಸಲಾಗಿತ್ತು.
- ಮೊದಲೆರಡು ಹಂತದಲ್ಲಿ ಆಯ್ದ ಜಿಲ್ಲೆಗಳಲ್ಲಿ ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ನೇತ್ರ ತಪಾಸಣೆ ನಡೆಸಿ ಸಮಸ್ಯೆ ಪತ್ತೆ ಮಾಡಿದ್ದರು. ಈಗ ರಾಜ್ಯದಾದ್ಯಂತ 'ಆಶಾಕಿರಣ ದೃಷ್ಟಿ ಕೇಂದ್ರ'ಗಳಲ್ಲಿಯೂ ತಪಾಸಣೆ ನಡೆಸಲಾಗುತ್ತಿದೆ.
- ಮೊದಲ ಹಂತದಲ್ಲಿ ಚಿಕ್ಕಬಳ್ಳಾಪುರ, ಕಲಬುರಗಿ, ಹಾವೇರಿ ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಯೋಜನೆ ಜಾರಿಗೆ ತರಲಾಗಿತ್ತು.

Dr. Rajkumar IAS/KAS Academy

- ಎರಡನೇ ಹಂತದಲ್ಲಿ ಚಿತ್ರದುರ್ಗ, ಮಂಡ್ಯ, ರಾಯಚೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಿಗೆ ವಿಸ್ತರಿಸಿ, ನೇತ್ರ ತಪಾಸಣೆ ಮಾಡಲಾಗಿತ್ತು. 2025ರ ಜುಲೈನಲ್ಲಿ ಈ ಯೋಜನೆಯನ್ನು ಮರುವಿನ್ಯಾಸ ಮಾಡಿ, ಜಿಲ್ಲಾ ಆಸ್ಪತ್ರೆಗಳು, ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ 393 'ಆಶಾಕಿರಣ ದೃಷ್ಟಿ ಕೇಂದ್ರ'ಗಳನ್ನು ಸ್ಥಾಪಿಸಲಾಗಿದೆ.
- ಶಸ್ತ್ರಚಿಕಿತ್ಸೆ: ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಶಸ್ತ್ರ ಚಿಕಿತ್ಸೆಯನ್ನೂ ನಡೆಸಲಾಗುತ್ತಿದೆ. ಕಣ್ಣಿನ ಪೊರೆ ಸಮಸ್ಯೆ ದೃಢಪಟ್ಟಲ್ಲಿ ಉನ್ನತ ಆರೋಗ್ಯ ಕೇಂದ್ರಗಳಿಗೆ ಶಿಫಾರಸು ಮಾಡ ಲಾಗುತ್ತಿದ್ದು, ಅಲ್ಲಿ ಹೆಚ್ಚಿನ ತಪಾಸಣೆಗೆ ಒಳಪಡಿಸಲಾಗುತ್ತಿದೆ. ಯೋಜನೆಯಡಿ ಈ ವರ್ಷ ಜನವರಿ ಅಂತ್ಯಕ್ಕೆ 4.19 ಲಕ್ಷ ಜನರಿಗೆ ಯಶಸ್ವಿ ಯಾಗಿ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ. ಈ ಶಸ್ತ್ರಚಿಕಿತ್ಸೆ ಗಳಲ್ಲಿ 58,582 ಮಂದಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಶಸ್ತ್ರಚಿಕಿತ್ಸೆ ಮಾಡಿದರೆ, ಉಳಿದವರಿಗೆ ಖಾಸಗಿ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ.
- 'ಆಶಾಕಿರಣ ದೃಷ್ಟಿ ಕೇಂದ್ರಗಳಲ್ಲಿ ನೇತ್ರ ತಪಾಸಣೆ ನಡೆಸಿ, ಸಮಸ್ಯೆಯನ್ನು ಪತ್ತೆ ಮಾಡಲಾಗುತ್ತಿದೆ. ಸಮಸ್ಯೆ ಇರುವವರಿಗೆ ಚಿಕಿತ್ಸೆ ಜತೆಗೆ ಕನ್ನಡಕ ವಿತರಣೆಗೆ ಕ್ರಮವಹಿಸಲಾಗಿದೆ. ಆಸ್ಪತ್ರೆ ಗಳಲ್ಲಿ ಶಾಶ್ವತ ದೃಷ್ಟಿ ಕೇಂದ್ರಗಳನ್ನು ಸ್ಥಾಪಿಸಿರುವುದರಿಂದ, ಸಾರ್ವಜನಿಕರು ಹತ್ತಿರದ ಕೇಂದ್ರಗಳಿಗೆ ತೆರಳಿ ತಪಾಸಣೆ ಮಾಡಿಸಿಕೊಳ್ಳಲು ಸಾಧ್ಯವಾಗುತ್ತದೆ' ಎಂದು ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

## ❖ ಜಿಡಿಪಿ ಬೆಳವಣಿಗೆ ಶೇ 7.2ರಷ್ಟು ನಿರೀಕ್ಷೆ

**ಸಂದರ್ಭ: ಮುಂದಿನ ಆರ್ಥಿಕ ವರ್ಷದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 6.8ರಿಂದ ಶೇ 7.2ರ ನಡುವೆ ಇರಬಹುದು ಎಂದು 'ಇ.ವೈ ಎಕಾನಮಿ ವಾಚ್' ವರದಿ ತಿಳಿಸಿದೆ.**

- 2047ರ ವೇಳೆಗೆ ವಿಕಸಿತ ಭಾರತ ಗುರಿ ಸಾಧಿಸಲು, ತೆರಿಗೆ ಸುಧಾರಣೆಗಳ ಮೂಲಕ ದೇಶವು ತನ್ನ ತೆರಿಗೆ ಜಿಡಿಪಿ ಅನುಪಾತವನ್ನು ಹೆಚ್ಚಿಸಬೇಕಿದೆ ಎಂದು ಗುರುವಾರ ತಿಳಿಸಿದೆ.
- ಪ್ರಮುಖ ದೇಶಗಳೊಂದಿಗಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಗಳ ಕಾರಣದಿಂದಾಗಿ ದೇಶದ ಮಧ್ಯಮ ಅವಧಿಯ ಆರ್ಥಿಕ ಸ್ಥಿತಿಯು ಉಜ್ವಲವಾಗಿರುವಂತೆ ಕಾಣುತ್ತಿದೆ. 2026-27ರಲ್ಲಿ ಭಾರತದ ಜಿಡಿಪಿ ಬೆಳವಣಿಗೆ ಶೇ 6.8ರಿಂದ ಶೇ 7.2ರ ನಡುವೆ ಇರುವ ಅಂದಾಜಿದೆ ಎಂದು ಇ.ವೈ ಇಂಡಿಯಾದ ಮುಖ್ಯ ನೀತಿ ಸಲಹೆಗಾರ ಡಿ.ಕೆ.ಶ್ರೀವಾಸ್ತವ ಹೇಳಿದ್ದಾರೆ.

## ❖ ಗ್ರಾಮಾಂತರ ಪ್ರದೇಶಗಳಲ್ಲಿ ವೈ-ಫೈ ಯೋಜನೆಗೆ ಚಾಲನೆ

**ಸಂದರ್ಭ: ರಾಜ್ಯದ ಕೆಲವು ದುರ್ಗಮ ಪ್ರದೇಶಗಳಲ್ಲಿ ವೈ-ಫೈ ಸೌಲಭ್ಯ ಕಲ್ಪಿಸುವ ಉದ್ದೇಶದ ಯೋಜನೆಗೆ ಕೇಂದ್ರದ ಮಾಜಿ ಸಚಿವ ಅನಂತಕುಮಾರ ಹೆಗಡೆ ಬೆಂಗಳೂರಿನಲ್ಲಿ ಗುರುವಾರ ಚಾಲನೆ ನೀಡಿದರು.**

- ಇದರ ಭಾಗವಾಗಿ ಉತ್ತರ ಕನ್ನಡ ಜಿಲ್ಲೆಯ ಯಾಣ ಹಾಗೂ ಸಹಸ್ರಲಿಂಗದಲ್ಲಿ ಸಾರ್ವಜನಿಕ ವೈ-ಫೈ ಸೌಲಭ್ಯ ಆರಂಭಿಸಲಾಗಿದೆ ಎಂದು ಜಿಎಸ್‌ಎ ಇಂಡಿಯಾ ಕಂಪನಿಯ ಸಿಇಒ ನಾಗರಾಜ ಮುನಿದಾಸಪ್ಪ ತಿಳಿಸಿದರು. ಈ ಕಂಪನಿಯು ಯೋಜನೆಯ ಅಡಿಯಲ್ಲಿ ವೈ-ಫೈ ಕೇಂದ್ರಗಳನ್ನು ಆರಂಭಿಸುತ್ತಿದೆ.
- 'ಆರಂಭಿಕ ಹೆಜ್ಜೆಯಾಗಿ ನಾವು ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಯಾಣ ಹಾಗೂ ಸಹಸ್ರಲಿಂಗದಲ್ಲಿ ಈ ಸೌಲಭ್ಯ ಆರಂಭಿಸಿದ್ದೇವೆ. ಮುಂದಿನ ದಿನಗಳಲ್ಲಿ ಇದನ್ನು ರಾಜ್ಯದ ಇನ್ನಷ್ಟು ಸ್ಥಳಗಳಿಗೆ ವಿಸ್ತರಿಸ ಲಿದ್ದೇವೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ, ಇಂಟರ್ನೆಟ್ ಇನ್ನೂ ತಲುಪಿಲ್ಲದ ಸ್ಥಳಗಳನ್ನು ಗುರುತಿಸಿ ಅಲ್ಲಿ ವೈ-ಫೈ ಸೌಲಭ್ಯ ಆರಂಭಿಸಲಾಗುವುದು' ಎಂದು ನಾಗರಾಜ ಅವರು 'ಪ್ರಜಾವಾಣಿ'ಗೆ ತಿಳಿಸಿದರು.


Rajkumar NSK Academy

- ವೈ-ಫೈ ಸೌಲಭ್ಯ ಕಲ್ಪಿಸಲು ಜಿಎನ್‌ಎ ಕಂಪನಿಯು ಬಿಎಸ್‌ಎನ್‌ಎಲ್ ಜೊತೆ ಒಪ್ಪಂದ ಮಾಡಿಕೊಂಡಿದೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಸ್ಥಳಗಳಲ್ಲಿ ಇಂಟರ್ನೆಟ್ ಸೌಲಭ್ಯ ಇಲ್ಲವೆಂದಾದರೆ ಅಲ್ಲಿ ಯುಪಿಐ ಪಾವತಿಯಿಂದ ಆರಂಭಿಸಿ ಇಂಟರ್ನೆಟ್ ಆಧಾರಿಸಿದ ಯಾವ ಅನುಕೂಲಗಳೂ ಲಭ್ಯವಾಗುವುದಿಲ್ಲ. ಹೀಗಾಗಿ ಈ ಯೋಜನೆ ಆರಂಭಿಸಲಾಗಿದೆ ಎಂದು ನಾಗರಾಜ ಹೇಳಿದರು.
- 'ನಮ್ಮ ಭಾಗದ ಗ್ರಾಮಾಂತರ ಪ್ರದೇಶ ಗಳನ್ನು ಈ ಯೋಜನೆಯು ಇಂಟರ್ನೆಟ್ ಜಾಲದ ಜೊತೆ ಬೆಸೆಯುತ್ತಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ಈ ಸೌಲಭ್ಯ ಸಿಗುವ ಪರಿಣಾಮವಾಗಿ ಎಲ್ಲರನ್ನೂ ಒಳಗೊಳ್ಳುವ ಅಭಿವೃದ್ಧಿ ಸಾಧ್ಯ ವಾಗುತ್ತದೆ' ಎಂದು ಹೆಗಡೆ ಹೇಳಿದರು.

## ❖ 10 ಕೋಟಿ ದಾಟಿದ ಮೋದಿ ಇನ್‌ಸ್ಟಾಗ್ರಾಮ್ ಫಾಲೋವರ್ಸ್

**ಸಂದರ್ಭ: ಪ್ರಧಾನಿ ನರೇಂದ್ರ ಮೋದಿ ಅವರ ಇನ್‌ಸ್ಟಾಗ್ರಾಮ್ ಫಾಲೋವರ್ಸ್‌ಗಳ ಸಂಖ್ಯೆ 10 ಕೋಟಿ ದಾಟಿದೆ. ಈ ಮೂಲಕ ಅವರು ಇಷ್ಟು ದೊಡ್ಡ ಸಂಖ್ಯೆಯ ಫಾಲೋವರ್ಸ್‌ಗಳನ್ನು ಹೊಂದಿರುವ ವಿಶ್ವದ ಮೊದಲ ನಾಯಕ ಮತ್ತು ರಾಜಕಾರಣಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.**

- 2014ರಲ್ಲಿ ಮೋದಿ ಅವರು ಇನ್‌ಸ್ಟಾಗ್ರಾಮ್ ಖಾತೆ ಆರಂಭಿಸಿದ್ದರು. ಜಾಗತಿಕ ನಾಯಕರಿಗೆ ಹೋಲಿಸಿದರೆ ಕಳೆದ 10 ವರ್ಷಗಳಲ್ಲಿ ಮೋದಿ ಅವರ ಖಾತೆಯು ಅತಿ ಹೆಚ್ಚು ಬಳಕೆಯಾದ ಡಿಜಿಟಲ್ ವೇದಿಕೆಯಾಗಿದೆ.
- ವಿಶ್ವದ ಐವರು ಪ್ರಭಾವಿ ನಾಯಕರ ಫಾಲೋವರ್ಸ್‌ಗಿಂತಲೂ ಮೋದಿ ಅವರ ಫಾಲೋವರ್ಸ್ ಹೆಚ್ಚಿದ್ದಾರೆ. ಎರಡನೇ ಸ್ಥಾನದಲ್ಲಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸಾಮಾಜಿಕ ಮಾಧ್ಯಮ ವೇದಿಕೆಗಿಂತಲೂ (4.32 ಕೋಟಿ ಫಾಲೋವರ್ಸ್) ಮೋದಿ ಅವರ ಇನ್‌ಸ್ಟಾಗ್ರಾಮ್ ಫಾಲೋವರ್ಸ್‌ಗಳ ಸಂಖ್ಯೆ ಎರಡುಪಟ್ಟು, ಮಕರ ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬಿಯಾಂತೋ (1.50 ಕೋಟಿ), ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೋ ಲೂಲಾ ಡಾ ಸಿಲ್ವಾ (1.44 ಕೋಟಿ), ಟರ್ಕಿಯ ಅಧ್ಯಕ್ಷ ರಜಬ್ ತಯ್ಯಬ್ ಇರ್ದುಗನ್ (1.16 ಕೋಟಿ) ಮತ್ತು ಅರ್ಜೆಂಟಿನಾ ಅಧ್ಯಕ್ಷ ಜೇವಿಯರ್ ಮಾಯಿಲಿ ಅವರು 64 ಲಕ್ಷ ಫಾಲೋವ ರ್ಸ್‌ಗಳನ್ನು ಹೊಂದಿದ್ದಾರೆ.
- ಭಾರತದಲ್ಲಿ ಮೋದಿ ಅವರ ನಂತರ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಅದಿತ್ಯನಾಥ್ ಅವರು ಸುಮಾರು 1.61 ಕೋಟಿ ಫಾಲೋವರ್ಸ್ ಹೊಂದಿದ್ದಾರೆ. ಆನಂತರದ ಸ್ಥಾನದಲ್ಲಿರುವ ರಾಹುಲ್ ಗಾಂಧಿ ಅವರಿಗೆ ಅಂದಾಜು 1.20 ಕೋಟಿ ಫಾಲೋವರ್ಸ್‌ಗಳಿದ್ದಾರೆ.



## ❖ ಸ್ವಾವಲಂಬನೆಗೆ ಲಕ್ಷ್ಮಿ ಆಸರೆ

**ಸಂದರ್ಭ: 'ಗೃಹಲಕ್ಷ್ಮಿ' ಯೋಜನೆಯ ಫಲಾನುಭವಿಗಳ ಸಹಕಾರ ಸಂಘವನ್ನು ಸ್ಥಾಪಿಸಲು ಮುಂದಾಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಫಲಾನುಭವಿಗಳಿಂದ ₹1,250 ಸದಸ್ಯತ್ವ ಶುಲ್ಕ ಮತ್ತು ತಿಂಗಳಿಗೆ ₹200ರಂತೆ ಠೇವಣಿ ಸಂಗ್ರಹಿಸಲು ತೀರ್ಮಾನಿಸಿದೆ.**

- 'ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ' ಸ್ಥಾಪನೆ ಮಾಡಲು ಸರ್ಕಾರ ನಿರ್ಧರಿಸಿದೆ. ಇದಕ್ಕೆ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ. 'ಗೃಹಲಕ್ಷ್ಮಿ' ಗ್ಯಾರಂಟಿ ಯೋಜನೆಯಡಿ ಈವರೆಗೆ 1.24 ಕೋಟಿ ಫಲಾನುಭವಿಗಳಿಗೆ ತಿಂಗಳಿಗೆ ತಲಾ ₹2,000ರಂತೆ, ಈವರೆಗೆ 26 ಕಂತುಗಳನ್ನು ಪಾವತಿಸಿದೆ.
- ಪ್ರತಿ ತಿಂಗಳು ನೀಡುವ ₹2,000ದಲ್ಲಿ ಸಹಕಾರ ಸಂಘ ಬಲ ಗೊಳಿಸಲು ಠೇವಣಿ ರೂಪದಲ್ಲಿ ₹200 ಅನ್ನು ಕಡಿತಗೊಳಿಸಲಾಗುತ್ತದೆ. ಸಹಕಾರ ಸಂಘ ಸ್ಥಾಪನೆ ಪ್ರಕ್ರಿಯೆ ಆರಂಭವಾದ ಬಳಿಕ ಆರು ತಿಂಗಳವರೆಗೆ ಮಹಿಳೆಯರ ಖಾತೆಗೆ ₹1,800 ಮಾತ್ರ ಜಮೆಯಾಗಲಿದೆ. ಉಳಿದ ಮೊತ್ತವು ಸದಸ್ಯರ ಖಾತೆಯಲ್ಲಿಯೇ ಇರಲಿದೆ.
- ಫಲಾನುಭವಿಗಳನ್ನು ಸಂಘಟಿಸಿ ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ತರಬೇತಿ ನೀಡುವುದಕ್ಕಾಗಿ ಈ ಸಹಕಾರ ಸಂಘ ಹುಟ್ಟು ಹಾಕಲಾಗುತ್ತಿದೆ.ಗೃಹಲಕ್ಷ್ಮಿ ಯೋಜನೆಯ ಎಲ್ಲ ಫಲಾನುಭವಿಗಳನ್ನು ಸದಸ್ಯರನ್ನಾಗಿಸುವ ಗುರಿ ಹೊಂದಲಾಗಿದೆ. ಸಂಘದ ಮೂಲಕ ಈ ಮಹಿಳೆಯರಿಗೆ ವಿವಿಧ ಉದ್ದೇಶಗಳಿಗೆ ಸಾಲ-ಸೌಲಭ್ಯ ಒದಗಿಸುವ ಮೂಲಕ ಮಹಿಳೆಯರನ್ನು ಉದ್ಯಮಿಗಳಾಗಿಸುವ ಮತ್ತು ಅವರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶ ಹೊಂದಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹೇಳಿದೆ.

**<u>30 ಸಾವಿರದಿಂದ 13 ಲಕ್ಷದವರೆಗೆ ಸಾಲ</u>**

- ಸದಸ್ಯರಿಗೆ ಕಡಿಮೆ ಬಡ್ಡಿ ದರದಲ್ಲಿ ₹30 ಸಾವಿರದಿಂದ ₹3 ಲಕ್ಷದವರೆಗೆ ವೈಯಕ್ತಿಕ ಸಾಲ ಒದಗಿಸಲಾಗುವುದು ರಾಷ್ಟ್ರೀಕೃತ ಬ್ಯಾಂಕ್‌ಗಳಿಗೆ ಸಮನಾಗಿ ವಾರ್ಷಿಕ ಶೇ 7ರಿಂದ ಶೇ 9 ಅಥವಾ ಅದಕ್ಕಿಂತ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಲು ಉದ್ದೇಶಿಸಲಾಗಿದೆ. ಸಾಲದ ಹಣವನ್ನು ಮಹಿಳೆಯರು ಸಣ್ಣಪುಟ್ಟ ವ್ಯಾಪಾರ, ಗುಡಿ ಕೈಗಾರಿಕೆ, ಕೃಷಿ, ಪಶುಸಂಗೋಪನೆ ಮಕ್ಕಳ ಶಿಕ್ಷಣ, ವಾಹನ ಖರೀದಿಗೆ ಬಳಸಬಹುದು. ಇದರಿಂದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಹಾಯಕವಾಗುತ್ತದೆ ಎಂಬುದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹೇಳಿದೆ.
- ಸದಸ್ಯತ್ವ ಪಡೆಯಲು ಒಂದು ಬಾರಿಗೆ ₹1,000 ಷೇರು ಹಣ ನೀಡಬೇಕು. ಇದು ₹1,250ರ ಸದಸ್ಯತ್ವದ ಶುಲ್ಕದಲ್ಲಿ ಸೇರಿದೆ ಅಲ್ಲದೇ, ಪ್ರತಿ ತಿಂಗಳು ₹200 ರಂತೆ ಕನಿಷ್ಠ ಆರು ತಿಂಗಳವರೆಗೆ ಉಳಿತಾಯ ರೂಪದಲ್ಲಿ ಜಮೆ ಮಾಡಬೇಕು. ಈ ರೀತಿ ಉಳಿತಾಯ ಮಾಡಿದವರು ಸಾಲ ಪಡೆಯಲು ಅರ್ಹರಾಗುತ್ತಾರೆ ಸಾಲ ಪಡೆಯುವುದಕ್ಕೆ ಜಾಮೀನು (ಶೂರಿಟಿ) ಅಗತ್ಯವಿರುವುದಿಲ್ಲ. ಸಂಪೂರ್ಣ ನಗದುರಹಿತ ಡಿಜಿಟಲ್ ಪಾವತಿಯ ಮೂಲಕ ವಹಿವಾಟಿಗೆ ಆದ್ಯತೆ ನೀಡಲಾಗಿದೆ.

## ❖ ವಿತ್ತೀಯ ಕೊರತೆ ₹9.8 ಲಕ್ಷ ಕೋಟಿ

**ಸಂದರ್ಭ: ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಜನವರಿವರೆಗಿನ ಅವಧಿಯಲ್ಲಿ ಕೇಂದ್ರ ಸರ್ಕಾರದ ವರಮಾನ ಮತ್ತು ವೆಚ್ಚದ ನಡುವಿನ ಅಂತರವಾದ ವಿತ್ತೀಯ ಕೊರತೆಯು ಇಡೀ ವರ್ಷದ ಗುರಿಯ ಶೇ 63ರಷ್ಟಾಗಿದೆ.**

- ಹಣಕಾಸಿನ ಮೌಲ್ಯದ ಲೆಕ್ಕದಲ್ಲಿ ಇದು ₹9.8 ಲಕ್ಷ ಕೋಟಿಯಾಗಿದೆ ಎಂದು ಶುಕ್ರವಾರ ಬಿಡುಗಡೆ ಆಗಿರುವ ಲೆಕ್ಕಪತ್ರಗಳ ಮಹಾನಿಯಂತ್ರಕರ (ಸಿಜಿಎ) ವರದಿ ತಿಳಿಸಿದೆ. 2024-25ರ ಅರ್ಥಿಕ ವರ್ಷದ ಇದೇ ಅವಧಿಯಲ್ಲಿ ವಿತ್ತೀಯ ಕೊರತೆಯು ಶೇ 74.5ರಷ್ಟಿತ್ತು, 2025-26ರ ಆರ್ಥಿಕ ವರ್ಷದಲ್ಲಿ ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇ 4.4ಕ್ಕೆ (ಹಣಕಾಸಿನ ಮೌಲ್ಯದ ಲೆಕ್ಕದಲ್ಲಿ ₹15.58 ಲಕ್ಷ ಕೋಟಿ) ತಗ್ಗಿಸಲು ಸರ್ಕಾರ ಬಜೆಟ್‌ನಲ್ಲಿ ಗುರಿ ನಿಗದಿ ಮಾಡಿದೆ.

Dr. Rajkumar IAS/KAS Academy

- ಏಪ್ರಿಲ್‌ನಿಂದ ಜನವರಿವರೆಗೆ ಸರ್ಕಾರವು ₹27.08 ಲಕ್ಷ ಕೋಟಿ ವರಮಾನ ಸ್ವೀಕರಿಸಿದೆ.
- ಕೇಂದ್ರ ಸರ್ಕಾರ ಸ್ವೀಕರಿಸಿದ ಈ ಮೊತ್ತದ ಪೈಕಿ ₹20.94 ಲಕ್ಷ ಕೋಟಿ ತೆರಿಗೆ ವರಮಾನದಿಂದ ಸಂಗ್ರಹಿಸಿದೆ. ₹5.57 ಲಕ್ಷ ಕೋಟಿ ತೆರಿಗೆಯೇತರ ವರಮಾನ ಮತ್ತು ಇತರೆ ಮೂಲಗಳಿಂದ ₹57.129 ಕೋಟಿ ಸಂಗ್ರಹಿಸಿದೆ.
- ಕೇಂದ್ರ ಸರ್ಕಾರವು, ರಾಜ್ಯ ಸರ್ಕಾರಗಳಿಗೆ ₹11.39 ಲಕ್ಷ ಕೋಟಿಯನ್ನು ತೆರಿಗೆ ಪಾಲಾಗಿ ವರ್ಗಾಯಿಸಿದೆ. ಇದು ಕಳೆದ ಆರ್ಥಿಕ ವರ್ಷದ ಇದೇ ಅವಧಿಗೆ ಹೋಲಿಸಿದರೆ ₹65,588 ಕೋಟಿಯಷ್ಟು ಅಧಿಕವಾಗಿದೆ ಎಂದು ತಿಳಿಸಿದೆ.
- ಇದೇ ಅವಧಿಯಲ್ಲಿ ಸರ್ಕಾರದ ಒಟ್ಟು ವೆಚ್ಚವು ₹36.9 ಲಕ್ಷ ಕೋಟಿಯಾಗಿದೆ. ಈ ಪೈಕಿ ಬಡ್ಡಿಗೆ ₹9.88 ಲಕ್ಷ ಕೋಟಿ ಪಾವತಿಸಲಾಗಿದ್ದು, ₹3.54 ಲಕ್ಷ ಕೋಟಿಯನ್ನು ಪ್ರಮುಖ ಸಬ್ಸಿಡಿಗಳಿಗೆ ನೀಡಲಾಗಿದೆ ಎಂದು ತಿಳಿಸಿದೆ.
- ಎಫ್‌ಡಿಐ ಶೇ 18ರಷ್ಟು ಹೆಚ್ಚಳ: ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಡಿಸೆಂಬರ್‌ವರೆಗೆ ದೇಶದಲ್ಲಿನ ವಿದೇಶಿ ನೇರ ಹೂಡಿಕೆ (ಎಫ್‌ಡಿಐ) ಪ್ರಮಾಣ ಶೇ 18ರಷ್ಟು ಹೆಚ್ಚಳವಾಗಿದ್ದು, ₹4.35 ಲಕ್ಷ ಕೋಟಿಯಷ್ಟಾಗಿದೆ.
- ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ ವಿದೇಶಿ ನೇರ ಹೂಡಿಕೆ ₹3.70 ಲಕ್ಷ ಕೋಟಿಯಷ್ಟಾಗಿತ್ತು ಎಂದು ಕೇಂದ್ರ ಸರ್ಕಾರ ಶುಕ್ರವಾರ ತಿಳಿಸಿದೆ.

## ❖ ಜಿಡಿಪಿ: ಶೇ 7.8ರಷ್ಟು ದಾಖಲು

**ಸಂದರ್ಭ: 'ಪ್ರಸಕ್ತ ಆರ್ಥಿಕ ವರ್ಷದ ಡಿಸೆಂಬರ್ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇ 7.8ರಷ್ಟು ದಾಖಲಾಗಿದೆ.**

- ಭಾರತದ ಆರ್ಥಿಕತೆ ಬೆಳವಣಿಗೆಯ ವೇಗ ಹೆಚ್ಚಾಗಿರುವುದು. ಗ್ರಾಹಕರ ಖರೀದಿ ಭರಾಟೆಯು ಇದಕ್ಕೆ ಕಾರಣವಾಗಿವೆ' ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿಯು ಶುಕ್ರವಾರ ಬಿಡುಗಡೆಗೊಳಿಸಿದ ದತ್ತಾಂಶದಲ್ಲಿ ತಿಳಿಸಿದೆ.
- ಶೇ 7.6ರಷ್ಟು ನಿರೀಕ್ಷೆ: ಪ್ರಸಕ್ತ ಪೂರ್ಣ ಆರ್ಥಿಕ ವರ್ಷದಲ್ಲಿ ಜಿಡಿಪಿ ಬೆಳವಣಿಗೆಯ ಅಂದಾಜನ್ನು ಶೇ 7.6ಕ್ಕೆ ಏರಿಕೆ ಮಾಡಲಾಗಿದೆ.
- ಜಾಗತಿಕ ವ್ಯಾಪಾರದ ಅಡೆತಡೆಯ ನಡುವೆಯೂ ವಿಶ್ವದಲ್ಲಿಯೇ ಅತ್ಯಂತ ವೇಗವಾಗಿ ದೇಶದ ಆರ್ಥಿಕತೆ ಚೇತರಿಸಿಕೊಂಡ ಕಾರಣ ಜಿಡಿಪಿ ಲೆಕ್ಕಾಚಾರದ ಪರಿಷ್ಕರಣೆ ನಿರ್ಧರಿಸಲಾಗಿದೆ.
- ಹಳೆಯ ದತ್ತಾಂಶ ಸರಣಿಯ ಪ್ರಕಾರ,ಶೇ 7.1ರಷ್ಟು ಜಿಡಿಪಿ ಏರಿಕೆಯನ್ನು ನಿರೀಕ್ಷಿ ಸಲಾಗಿತ್ತು. 2024-25ರ ವಿತ್ತೀಯ ದತ್ತಾಂಶದ ಪ್ರಕಾರ ಏರಿಕೆಯು ಶೇ7.1ರಷ್ಟಿತ್ತು.
- ಲೆಕ್ಕಾಚಾರದ ಪರಿಷ್ಕರಣೆಯ ಪ್ರಕಾರ, 2022-23ಕ್ಕೆ ಲಾಗಿದ್ದು, ಮೂಲ ವರ್ಷವನ್ನು ಬದಲಾಯಿಸ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿರುವ ಸುಧಾರಿತ ಅಂಶಗಳ ಪರಿಗಣನೆ-ಯನ್ನು ಒಳಗೊಂಡಿದೆ.
- ಆದಾಗ್ಯೂ, ಅಕ್ಟೋಬರ್ ಡಿಸೆಂಬರ್‌ನಲ್ಲಿ ಜಿಡಿಪಿ ಬೆಳವಣಿಗೆಯು ಮಧ್ಯಮ ಇಳಿಕೆಗೆ ಕಾರಣವಾಯಿತು. ಇದು ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಶೇ 8.4ರಷ್ಟಿತ್ತು. ಅದು ಈಗ ಶೇ 7.8ಕ್ಕೆ ಇಳಿಕೆಯಾಗಿದೆ.

**---------------------------------------------ಶುಭವಂದನೆಗಳು----------------------------------------**